24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 27 | ನವದೆಹಲಿ | ಬೆಲೆ ₹10 | ಜುಲೈ 23 2026, ಗುರುವಾರ

## ಒಳಪುಟಗಳಲ್ಲಿ

ಪ್ರಶ್ನೆಪತ್ರಿಕೆ ಸೋರಿಕೆ ವಿಚಾರದಲ್ಲಿ ರಾಜಕೀಯ ಸಲ್ಲದು: ಜೆಪಿ ನಡ್ಡಾ - ಪು.4

ಫಲಾನುಭವಿಗಳಿಗೆ ವಿಳಂಬವಾಗದಂತೆ ಪಡಿತರ ತಲುಪಿಸುವ ನಿಟ್ಟಿನಲ್ಲಿ ಆಹಾರ ಇಲಾಖೆ ಕಟ್ಟುನಿಟ್ಟಿನ ನಿರ್ದೇಶನ - ಪು.5

ರೈತರ ಸಮಸ್ಯೆಗಳ ಪರಿಹಾರಕ್ಕೆ ಆಗ್ರಹ ಸಂಯುಕ್ತ ಕಿಸಾನ್ ಮೋರ್ಚಾ ಮನವಿ - ಪು.6

# ಪ್ರಧಾನ್ ರಾಜೀನಾಮೆ ಪ್ರತಿಪಕ್ಷ ಪಟ್ಟು: 3ನೇ ದಿನವೂ ನಡೆಯದ ಕಲಾಪ

### ನೀಟ್-ಯುಜಿ ಪ್ರಶ್ನೆಪತ್ರಿಕೆ ಸೋರಿಕೆ, ಪರೀಕ್ಷಾ ಅಕ್ರಮಗಳು ಮತ್ತು ಪ್ರತಿಭಟನಾ ನಿರತ ವಿದ್ಯಾರ್ಥಿಗಳ ಮೇಲೆ ಪೊಲೀಸ್ ಕ್ರಮದ ವಿರೋಧಿಸಿ ವಿಪಕ್ಷ ಪ್ರತಿಭಟನೆ

### ಲೋಕಸಭೆ, ರಾಜ್ಯಸಭೆ ಮತ್ತೆ ಮುಂದೂಡಿಕೆ

**ನವದೆಹಲಿ, ಜು.22:** ಮುಂಗಾರು ಅಧಿವೇಶನದ ಸತತ ಮೂರನೇ ದಿನವಾದ ಬುಧವಾರವೂ ಸಂಸತ್ತಿನ ಕಲಾಪಕ್ಕೆ ಪ್ರತಿಪಕ್ಷಗಳ ಗದ್ದಲದಿಂದ ಅಡ್ಡಿಯುಂಟಾಯಿತು

ನೀಟ್–ಯುಜಿ ಪತ್ರಿಕೆ ಸೋರಿಕೆ, ಪರೀಕ್ಷಾ ಅಕ್ರಮಗಳು ಮತ್ತು ಪ್ರತಿಭಟನಾ ನಿರತ ವಿದ್ಯಾರ್ಥಿಗಳ ವಿರುದ್ಧ ಇತ್ತೀಚೆಗೆ ನಡೆದ ಪೊಲೀಸ್ ಕ್ರಮದ ವಿರುದ್ಧ ವಿರೋಧ ಪಕ್ಷಗಳ ನಿರಂತರ ಪ್ರತಿಭಟನೆಯ ನಡುವೆಯೂ ಲೋಕಸಭೆ ಮತ್ತು ರಾಜ್ಯಸಭೆ ಎರಡನ್ನೂ ಗುರುವಾರಕ್ಕೆ ಮುಂದೂಡಲಾಯಿತು.

ಈ ವಿಷಯದ ಕುರಿತು ಯಾವುದೇ ಚರ್ಚೆ ನಡೆಯುವ ಮೊದಲು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆಗೆ ವಿರೋಧ ಪಕ್ಷ ದೃಢವಾಗಿ ನಿಂತಿತು, ಆದರೆ ಯಾವುದೇ ಪೂರ್ವಭಾವಿ ಷರತ್ತುಗಳಿಲ್ಲದೆ ಚರ್ಚೆಗೆ ಸಿದ್ಧ ಎಂದು ಸರ್ಕಾರ ಪುನರುಚ್ಚರಿಸಿತು. ಲೋಕಸಭೆಯನ್ನು ಮೊದಲು ಮಧ್ಯಾಹ್ನ 12 ಗಂಟೆಯವರೆಗೆ, ನಂತರ ಮಧ್ಯಾಹ್ನ 2 ಗಂಟೆಯವರೆಗೆ ಮುಂದೂಡಲಾಯಿತು ಮತ್ತು ಅಂತಿಮವಾಗಿ ಯಾವುದೇ ಅರ್ಥಪೂರ್ಣ ಕಲಾಪ ನಡೆಸದೆ ದಿನದ ಮಟ್ಟಿಗೆ ಮುಂದೂಡಲಾಯಿತು. ರಾಜ್ಯಸಭೆಯು ಪದೇ ಪದೇ ಅಡಚಣೆಗಳಿಗೆ ಒಳಗಾಯಿತು ಮತ್ತು ಮಧ್ಯಾಹ್ನ 12, ಮಧ್ಯಾಹ್ನ 2 ಮತ್ತು ಮಧ್ಯಾಹ್ನ 3 ಗಂಟೆಯವರೆಗೆ ಸತತವಾಗಿ ಮುಂದೂಡಲ್ಪಟ್ಟಿತು, ನಂತರ ದಿನದ ಕಲಾಪವನ್ನು ರದ್ದುಗೊಳಿಸಲಾಯಿತು. ವಿರೋಧ ಪಕ್ಷಗಳು ಚರ್ಚೆಯಲ್ಲಿ ಭಾಗವಹಿಸುವಂತೆ ಖಜಾನೆ ಪೀಠಗಳು ಪದೇ ಪದೇ ಮನವಿ ಮಾಡಿದರೂ ಬಿಕ್ಕಟ್ಟು ಮುಂದುವರಿದಿತ್ತು. ರಾಜ್ಯಸಭೆಯಲ್ಲಿ, ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಮತ್ತು ಸದನದ ನಾಯಕ ಜೆ.ಪಿ.ನಡ್ಡಾ ಅವರು, ನೀಟ್–ಯುಜಿ ಪತ್ರಿಕೆ ಸೋರಿಕೆ ಮತ್ತು ವಿರೋಧ ಪಕ್ಷಗಳು ಎತ್ತಿದ ಇತರ ವಿಷಯಗಳ ಬಗ್ಗೆ ಚರ್ಚಿಸಲು ಸರ್ಕಾರ ಸಿದ್ಧವಾಗಿದೆ ಎಂದು ಹೇಳಿದರು. ಆದಾಗ್ಯೂ, ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ, ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆ ನೀಡಿದ ನಂತರವೇ ನ್ಯಾಯಯುತ ಚರ್ಚೆ ನಡೆಯಬಹುದು ಎಂದು ಒತ್ತಾಯಿಸಿದರು.



ಸಂಸತ್ ಅಧಿವೇಶನ

"ಮೊದಲು ಶಿಕ್ಷಣ ಸಚಿವರು ರಾಜೀನಾಮೆ ನೀಡಬೇಕು. ಆಗ ಮಾತ್ರ ಸಂಸತ್ತಿನಲ್ಲಿ ನ್ಯಾಯಯುತ ಚರ್ಚೆ ನಡೆಯಬಹುದು" ಎಂದು ಖರ್ಗೆ ಪ್ರತಿಪಾದಿಸಿದರು, ಪರೀಕ್ಷಾ ವ್ಯವಸ್ಥೆಯ ಸುತ್ತಲಿನ ಆರೋಪಗಳ ಗಂಭೀರತೆಯನ್ನು ಗಮನಿಸಿದರೆ ಸಚಿವರ ಹೊಣೆಗಾರಿಕೆ ಅತ್ಯಗತ್ಯ ಎಂದು ಸಮರ್ಥಿಸಿಕೊಂಡರು.

ಮಳೆಗಾಲದ ಅಧಿವೇಶನ ಆ.13 ರವರೆಗೆ ಮುಂದುವರಿಯಲಿದ್ದು, ನೀಟ್–ಯುಜಿ ಪತ್ರಿಕೆ ಸೋರಿಕೆ, ಪರೀಕ್ಷಾ ಸುಧಾರಣೆ ಮತ್ತು ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆಗೆ ಬೇಡಿಕೆಯ ಕುರಿತು ಮುಂದುವರಿದ ಬಿಕ್ಕಟ್ಟು ಸಂಸತ್ತಿನ ಶಾಸಕಾಂಗ ವ್ಯವಹಾರವನ್ನು ಮತ್ತಷ್ಟು ಅಡ್ಡಿಪಡಿಸುವ ಬೆದರಿಕೆಯನ್ನು ಒಡ್ಡಿದೆ, ಆದರೂ ಸರ್ಕಾರ ಮತ್ತು ವಿರೋಧ ಪಕ್ಷದ ನಡುವಿನ ರಾಜಕೀಯ ಯುದ್ಧದ ಕೇಂದ್ರಬಿಂದುವಾಗಿದೆ.

# ದೆಹಲಿಯ 16 ಮೆಟ್ರೋ ರೈಲು ನಿಲ್ದಾಣಗಳು ಬಂದ್

### ವಿದ್ಯಾರ್ಥಿನಿಯರ ಬಟ್ಟೆ ಹರಿದಿದ್ದಕ್ಕೆ ಆಕ್ರೋಶ

**ನವದೆಹಲಿ, ಜು. 22:** ನೀಟ್ ಪರೀಕ್ಷೆ ಅಕ್ರಮ ಖಂಡಿಸಿ ದೆಹಲಿಯ ಜಂತರ್ ಮಂತರ್‌ನಲ್ಲಿ ತೀವ್ರ ಸ್ವರೂಪ ಪಡೆದುಕೊಳ್ಳುತ್ತಿರುವಂತೆಯೇ ಭದ್ರತಾ ಕಾರಣಗಳಿಗಾಗಿ ದೆಹಲಿ ಮೆಟ್ರೋ ರೈಲು ನಿಗಮವು ರಾಜೀವ್ ಚೌಕ್, ಸೆಂಟ್ರಲ್ ಸೆಕ್ರೆಟರಿಯೇಟ್, ಮಂಡಿ ಹೌಸ್, ಐಟಿಒ ಸೇರಿ ಒಟ್ಟು 16 ಮೆಟ್ರೋ ನಿಲ್ದಾಣಗಳನ್ನು ಬುಧವಾರ ಬೆಳಿಗ್ಗೆ ಮುಚ್ಚಿದೆ. ಆದಾಗ್ಯೂ, ಮೂರು ಪ್ರಮುಖ ನಿಲ್ದಾಣಗಳಲ್ಲಿ ಇಂಟರ್ಚೇಂಜ್ ಸೌಲಭ್ಯ ಲಭ್ಯವಿದ್ದರೂ, ನಿಲ್ದಾಣಗಳ ದಿಢೀರ್ ಮುಚ್ಚುವಿಕೆಯಿಂದ ಪ್ರಯಾಣಿಕರು ತೀವ್ರ ಪರದಾಡುವಂತಾಗಿದೆ.

ಜಂತರ್ ಮಂತರ್‌ನಲ್ಲಿ ರಾತ್ರೋರಾತ್ರಿ ಸಾವಿರಾರು ಬೆಂಬಲಿಗರು ಜಮಾಯಿಸಿದ್ದು, ಪ್ರತಿಭಟನೆ ಎರಡನೇ ತಿಂಗಳಿಗೆ ಕಾಲಿಟ್ಟಿದೆ. ಮಹಾರಾಷ್ಟ್ರದ ಪ್ರಮುಖ ಮರಾಠಾ ಮೀಸಲಾತಿ ಹೋರಾಟಗಾರ ಮನೋಜ್ ಜಾರಂಗೆ ಪಾಟೀಲ್ ಅವರು ಪ್ರತಿಭಟನಾಕಾರರಿಗೆ ಬೆಂಬಲ ನೀಡಿದ್ದಾರೆ. ಸೋಮವಾರದ ಪೊಲೀಸ್ ಕಾರ್ಯಾಚರಣೆಯ ಹೊರತಾಗಿಯೂ ಹಿಂದೆ ಸರಿಯದ ಪ್ರತಿಭಟನಾಕಾರರಿಗೆ ಸಾರ್ವಜನಿಕರು ಮತ್ತು ಬೆಂಬಲಿಗರು ಆಹಾರ ಹಾಗೂ ಅಗತ್ಯ ವಸ್ತುಗಳನ್ನು ಪೂರೈಸುತ್ತಿದ್ದಾರೆ. ಜು.20ರಂದು ವಿದ್ಯಾರ್ಥಿಗಳ ಮೇಲೆ ನಡೆದ ಪೊಲೀಸ್ ದೌರ್ಜನ್ಯವನ್ನು ಖಂಡಿಸಿರುವ ಸಮಾಜವಾದಿ ಪಕ್ಷದ ಸಂಸದೆ ಡಿಂಪಲ್ ಯಾದವ್ ಕೇಂದ್ರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ. ವಿದ್ಯಾರ್ಥಿಗಳಿಗೆ ಥಳಿಸಿ, ವಿದ್ಯಾರ್ಥಿನಿಯರ ಬಟ್ಟೆ ಹರಿಯುವುದು ಇದೇನಾ ಬಿಜೆಪಿಯ ರಾಮರಾಜ್ಯ ಎಂದು ಅವರು ಖಾರವಾಗಿ ಪ್ರಶ್ನಿಸಿದ್ದಾರೆ. ನಮಗೆ ಸಂಸತ್ತಿನಲ್ಲಿ ರಾಮಮಂದಿರ, ನೀಟ್ ಅಕ್ರಮ ಮತ್ತು ಪೊಲೀಸರ ದೌರ್ಜನ್ಯದ ಬಗ್ಗೆ ಚರ್ಚೆಯಾಗಬೇಕು ಹಾಗೂ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ತಕ್ಷಣ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದ್ದಾರೆ.


### ಪ್ರಧಾನಿ ಮೌನ ಪ್ರಶ್ನಿಸಿದ ಸಿಜೆಪಿ ಸಂಸ್ಥಾಪಕ

**ಸಿಜೆಪಿ ಸಂಸ್ಥಾಪಕ ಅಭಿಜೀತ್ ದೀಪ್ಕೆ ಅವರು ಪ್ರಧಾನಿ ನರೇಂದ್ರ ಮೋದಿಯವರ ಮೌನವನ್ನು ಪ್ರಶ್ನಿಸಿದ್ದಾರೆ. ಕೇವಲ ರ್‍ಯಾಲಿಗಳನ್ನು ನಡೆಸಿ ಚುನಾವಣೆ ಗೆಲ್ಲುವುದು ಮಾತ್ರವೇ ರಾಜಕೀಯವಲ್ಲ, ಜನರಿಗೆ ಜವಾಬ್ದಾರಿಯುತವಾಗಿ ಉತ್ತರದಾಯಿ ಆಗಿರುವುದೂ ರಾಜಕೀಯದ ಭಾಗವಾಗಿದೆ ಎಂದು ಕಿಡಿಕಾರಿದ್ದಾರೆ. ಈ ನಡುವೆ, ಎಕ್ಸ್ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಸಿಜೆಪಿ, ಪ್ರಧಾನ ಮಂತ್ರಿಗಳಿಗೆ ಭಾರತದ ಯುವಕರಿಗಿಂತ, ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಮೇಲಿನ ಪ್ರೀತಿಯೇ ಹೆಚ್ಚಾಯಿತೇ ಎಂದುಪ್ರಶ್ನಿಸುವ ಮೂಲಕ ಸಚಿವರ ವಜಾಕ್ಕೆ ತನ್ನ ಪಟ್ಟನ್ನು ಮುಂದುವರಿಸಿದೆ.**

# ಕಪ್ಪುಬಟ್ಟೆ ಧರಿಸಿ ಸಂಸತ್ತಿಗೆ ಆಗಮಿಸಿದ ಪ್ರತಿಪಕ್ಷ ಸಂಸದರು

**ಹೊಸದಿಲ್ಲಿ, ಜು.22:** ಸಂಸತ್ತಿನ ಮುಂಗಾರು ಅಧಿವೇಶನದ 3ನೇ ದಿನ ಬುಧವಾರ, ವಿರೋಧ ಪಕ್ಷಗಳ ಸಂಸದರು ಕಪ್ಪು ಬಟ್ಟೆ ಧರಿಸಿ ಸಂಸತ್ತಿಗೆ ಆಗಮಿಸುವ ಮೂಲಕ ಕರಾಳ ದಿನ ಎಂದು ಪ್ರತಿಭಟನೆ ನಡೆಸಿದರು. ನೀಟ್–ಯುಜಿ ಪರೀಕ್ಷಾ ಅಕ್ರಮ, ದೆಹಲಿಯಲ್ಲಿ ಸಿಜೆಪಿ ಪ್ರತಿಭಟನಾನಿರತ ವಿದ್ಯಾರ್ಥಿಗಳ ಮೇಲೆ ಪೊಲೀಸರು ನಡೆಸಿದ ರಾಮ ದೌರ್ಜನ್ಯ, ಅಯೋಧ್ಯೆಮಂದಿರ ದೇಣಿಗೆ ಕಳವು ಹಾಗೂ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆಗೆ ಬಂದಿದ್ದಾರೆ. ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಮತ್ತು ಕಾಂಗ್ರೆಸ್ ಸಂಸದೆ ಪ್ರಿಯಾಂಕಾ ಗಾಂಧಿ ವಾದ್ರಾ ನೇತೃತ್ವದಲ್ಲಿ ನಡೆದ ಈ ಕರಾಳ ದಿನದ ಪ್ರತಿಭಟನೆಯಲ್ಲಿ ತೃಣಮೂಲ ಕಾಂಗ್ರೆಸ್ನ ಮಹುವಾ ಮೊಯಿತ್ರಾ, ಸಮಾಜವಾದಿ ಪಕ್ಷದ ಅವಧೇಶ್ ಪ್ರಸಾದ್ ಸೇರಿದಂತೆ ಪ್ರಮುಖ ವಿಪಕ್ಷ ಸಂಸದರು ಭಾಗವಹಿಸಿದರು. ಸಂಸದರು ಮತ್ತು ಇತರ ಹಲವಾರು ವಿರೋಧ ಪಕ್ಷದ ನಾಯಕರು ಮಕರ ದ್ವಾರದಲ್ಲಿ ಜಮಾಯಿಸಿ, ಫಲಕಗಳನ್ನು ಹಿಡಿದು ಘೋಷಣೆಗಳನ್ನು ಕೂಗಿದರು. ಅವರು ಪ್ರಶ್ನೆ ಪತ್ರಿಕೆ ಸೋರಿಕೆ ಮತ್ತು ಪರೀಕ್ಷಾ ಸುಧಾರಣೆಗಳ ಬಗ್ಗೆ ತಕ್ಷಣ ಚರ್ಚಿಸಬೇಕೆಂದು ಒತ್ತಾಯಿಸಿದರು ಮತ್ತು ಪ್ರತಿಭಟನೆಯಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳ ವಿರುದ್ಧ ದಾಖಲಾಗಿರುವ ಎಲ್ಲಾ ಎಫ್‌ಐಆರ್‌ಗಳನ್ನು ಹಿಂಪಡೆಯಬೇಕೆಂದು ಒತ್ತಾಯಿಸಿದರು.




# 10 ವರ್ಷ–152 ಪ್ರಶ್ನೆಪತ್ರಿಕೆ ಸೋರಿಕೆ

**ನವದೆಹಲಿ, ಜು.22:** ವಿದ್ಯಾರ್ಥಿಗಳ ಮೇಲಿನ ಲಾಠಿಚಾರ್ಜ್ ಕುರಿತು ಮಾತನಾಡಿದ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಭದ್ರತಾ ಪಡೆಗಳು ವಿದ್ಯಾರ್ಥಿಗಳನ್ನು ಕ್ರೂರವಾಗಿ ಥಳಿಸಿದ್ದಾರೆ ಎಂದು ಹೇಳಿದರು. ವಿದ್ಯಾರ್ಥಿಗಳು ಶಾಂತಿಯುತವಾಗಿ ಪ್ರತಿಭಟನೆ ನಡೆಸುತ್ತಿದ್ದರು. ಆದರೂ ಅವರ ಮೇಲೆ ಲಾಠಿ ಚಾರ್ಜ್ ನಡೆಸಲಾಗಿದೆ. ಕಳೆದ 10 ವರ್ಷಗಳಲ್ಲಿ 152 ಪತ್ರಿಕೆಗಳು ಸೋರಿಕೆಯಾಗಿವೆ ಎಂದು ರಾಹುಲ್ ಗಾಂಧಿ ಹೇಳಿದ್ದಾರೆ. ಈ ಪ್ರಶ್ನೆಪತ್ರಿಕೆ ಸೋರಿಕೆ 7.5 ಕೋಟಿ ಕುಟುಂಬಗಳ ಮೇಲೆ ನೇರವಾಗಿ ಪರಿಣಾಮ ಬೀರಿದೆ ಎಂದರು. ವಿದ್ಯಾರ್ಥಿಗಳು ವ್ಯವಸ್ಥೆಯಲ್ಲಿ ಸುಧಾರಣೆಗಳನ್ನು ಬಯಸುತ್ತಿದ್ದಾರೆ ಎಂದು ರಾಹುಲ್ ಗಾಂಧಿ ಹೇಳಿದರು. 152 ಪ್ರಶ್ನೆಪತ್ರಿಕೆ ಸೋರಿಕೆಗಳಲ್ಲಿ ಒಬ್ಬ ವ್ಯಕ್ತಿಗೂ ಶಿಕ್ಷೆಯಾಗಿಲ್ಲ. ವ್ಯವಸ್ಥೆಯ ಬಗ್ಗೆ ಯುವಕರಲ್ಲಿ ಕೋಪವಿದೆ. ಶಿಕ್ಷಣ ವ್ಯವಸ್ಥೆಯ ಮೇಲೆ ಕೆಲಸ ಮಾಡಬೇಕಾಗಿದೆ. ದೇಶದಲ್ಲಿ ಶಿಕ್ಷಣ ವ್ಯವಸ್ಥೆ ನಾಶವಾಗಿದೆ ಎಂದು ವಿರೋಧ ಪಕ್ಷದ ನಾಯಕ ಹೇಳಿದರು. ಸರ್ಕಾರ ವಿದ್ಯಾರ್ಥಿಗಳ ಬಗ್ಗೆ ಸೂಕ್ಷ್ಮವಾಗಿಲ್ಲ. ನೀಟ್ ಪರೀಕ್ಷೆಯ ವೆಚ್ಚವು ಶಿಕ್ಷಣ ಬಜೆಟ್‌ಗೆ ಸಮಾನವಾಗಿದೆ. ವಿದ್ಯಾರ್ಥಿಗಳು ನೀಟ್ ಪರೀಕ್ಷೆಗೆ 1.32 ಲಕ್ಷ ಕೋಟಿ ಖರ್ಚು ಮಾಡುತ್ತಿದ್ದಾರೆ ಎಂದರು.

ಧರ್ಮೇಂದ್ರ ಪ್ರಧಾನ್ ದೇಶದ ಶಿಕ್ಷಣ ವ್ಯವಸ್ಥೆಯನ್ನು ನಾಶಪಡಿಸಿದ್ದಾರೆ. 40 ಲಕ್ಷ ರೂಪಾಯಿ ಹೊಂದಿರುವ ಯಾರಾದರೂ ಸರ್ಕಾರಿ ಉದ್ಯೋಗ ಪಡೆಯಬಹುದು. ಇಂದು ಭಾರತದಲ್ಲಿ ಶಿಕ್ಷಣವು ತುಂಬಾ ದುಬಾರಿಯಾಗಿದ್ದು, ಮಧ್ಯಮ ವರ್ಗದವರು ಪ್ರಗತಿ ಸಾಧಿಸಲು ಸಾಧ್ಯವಾಗುತ್ತಿಲ್ಲ . ಸರ್ಕಾರಿ ಉದ್ಯೋಗಗಳ ಹೆಸರಿನಲ್ಲಿ ವಿದ್ಯಾರ್ಥಿಗಳಿಂದ ಕೋಟ್ಯಂತರ ಹಣ ಪಡೆಯಲಾಗುತ್ತದೆ ಮತ್ತು 40–50 ಲಕ್ಷ ನೀಡುವವರಿಗೆ ಹಿಂಬಾಗಿಲಿನಿಂದ ಪ್ರವೇಶ ನೀಡಲಾಗುತ್ತದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

# ಲಾಠಿ ಏಟಿಗೂ ಜಗ್ಗದ ಯುವಕರು: ತೀವ್ರಗೊಂಡ ಹೋರಾಟ

**ನವದೆಹಲಿ, ಜು. 22:** ನೀಟ್ ಪರೀಕ್ಷಾ ಅಕ್ರಮಗಳನ್ನು ಖಂಡಿಸಿ ದೆಹಲಿಯ ಜಂತರ್ ಮಂತರ್‌ನಲ್ಲಿ ನಡೆಯುತ್ತಿರುವ 'ಕಾಕ್ರೋಚ್ ಜನತಾ ಪಾರ್ಟಿ' (ಸಿಜೆಪಿ) ನೇತೃತ್ವದ 'ಯುವ ಜನಾಕ್ರೋಶ' ಪ್ರತಿಭಟನೆ ದಿನದಿಂದ ದಿನಕ್ಕೆ ತೀವ್ರಗೊಳ್ಳುತ್ತಿದೆ. ಧರಣಿನಿರತ ಯುವಜನರು ಹಾಗೂ ವಿದ್ಯಾರ್ಥಿಗಳ ಮೇಲೆ ಪೊಲೀಸರು ತೀವ್ರ ಲಾಠಿಪ್ರಹಾರ ನಡೆಸಿ ದೌರ್ಜನ್ಯ ಎಸಗಿದ್ದರೂ, ವಿದ್ಯಾರ್ಥಿಗಳ ಮನೋಬಲ ಕುಗ್ಗಿಲ್ಲ. ಸರ್ಕಾರದಿಂದ ಸ್ಪಷ್ಟ ಜವಾಬು ದೊರೆಯುವವರೆಗೆ ಮತ್ತು ಸೂಕ್ತ ಕ್ರಮ ಕೈಗೊಳ್ಳುವವರೆಗೆ ಹೋರಾಟ ಹಿಂಪಡೆಯುವುದಿಲ್ಲ ಎಂದು ಪಟ್ಟು ಹಿಡಿದಿರುವ ವಿದ್ಯಾರ್ಥಿಗಳಿಂದಾಗಿ ಪ್ರತಿಭಟನೆಯ ಪ್ರವಾಹ ಉಕ್ಕುತ್ತಿದೆಯೇ ವಿನಾ ತಗ್ಗುತ್ತಿಲ್ಲ.

ಜುಲೈ 20 ರಂದು ನಡೆದ ಸಂಸತ್ ಚಲೋ ಬೃಹತ್ ಮೆರವಣಿಗೆಯ ವೇಳೆ ಪೊಲೀಸರು ನಡೆಸಿದ ಕಠೋರ ಬಲಪ್ರಯೋಗದಿಂದಾಗಿ ನೂರಾರು ವಿದ್ಯಾರ್ಥಿಗಳು ಗಾಯಗೊಂಡಿದ್ದಾರೆ. ಪೊಲೀಸರ ಈ ಅತಿಯಾದ ಬಲಪ್ರಯೋಗವು ವಿದ್ಯಾರ್ಥಿಗಳ ಆಕ್ರೋಶವನ್ನು ತಣಿಸುವ ಬದಲು, ಅವರ ಪ್ರತಿಭಟನೆಯ ಕಿಚ್ಚನ್ನು ಮತ್ತಷ್ಟು ಹೆಚ್ಚಿಸಿದೆ. ದೈಹಿಕವಾಗಿ ತೀವ್ರ ಗಾಯಗೊಂಡಿದ್ದರೂ, ಯುವಜನರು ಅಚಲ ನಿರ್ಧಾರದೊಂದಿಗೆ ಸರ್ಕಾರದ ವಿರುದ್ಧ ಎಚ್ಚೆತ್ತು ನಿಂತಿದ್ದಾರೆ. ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರ ತಕ್ಷಣದ ರಾಜೀನಾಮೆ ಹಾಗೂ ಪರೀಕ್ಷಾ ವ್ಯವಸ್ಥೆಯಲ್ಲಿ ಸಮಗ್ರ ಸುಧಾರಣೆ ತರುವುದು ಪ್ರತಿಭಟನಾಕಾರರ ಪ್ರಮುಖ ಬೇಡಿಕೆಯಾಗಿದೆ. ಮಾಜಿಕ ಹೋರಾಟಗಾರ ಸೋನಮ್ ವಾಂಗ್ಚುಕ್ ಅವರ ಅನಿರ್ದಿಷ್ಟಾವಧಿ ಉಪವಾಸ ಸತ್ಯಾಗ್ರಹವು 25ನೇ ದಿನಕ್ಕೆ ಕಾಲಿಟ್ಟಿದ್ದರೂ ಪ್ರಧಾನಿ ನರೇಂದ್ರ ಮೋದಿ ಅವರು ಮೌನ ವಹಿಸಿರುವುದಕ್ಕೆ ಯುವ ಸಮೂಹ ತೀವ್ರ ಅಸಮಾಧಾನ ವ್ಯಕ್ತಪಡಿಸಿದೆ. ಪೊಲೀಸರು ವಿಧಿಸಿರುವ ಕಟ್ಟುನಿಟ್ಟಿನ ಭದ್ರತಾ ನಿರ್ಬಂಧಗಳು ಮತ್ತು ಮೆಟ್ರೋ ನಿಲ್ದಾಣಗಳ ಬಂದ್ನಡುವೆಯೂ, ಪ್ರತಿ ದಿನ ಸಾವಿರಾರು ಹೊಸ ಬೆಂಬಲಿಗರು ಜಂತರ್ ಮಂತರ್ ತಲುಪುತ್ತಿದ್ದಾರೆ. ಧರಣಿನಿರತ ಯುವಕರಿಗೆ ದೇಶದ ನಾನಾ ಭಾಗಗಳಿಂದ ಸಾರ್ವಜನಿಕರು ಹಾಗೂ ಹಿತೈಷಿಗಳು ಆನ್‌ಲೈನ್ ಆಪ್‌ಗಳ ಮೂಲಕ ಆಹಾರ, ನೀರು ಮತ್ತು ಅಗತ್ಯ ಸರಕುಗಳನ್ನು ಕಳುಹಿಸಿಕೊಡುವ ಮೂಲಕ ದೃಢವಾಗಿ ಬೆಂಬಲವಾಗಿ ನಿಂತಿದ್ದಾರೆ. ಇದರಿಂದಾಗಿ ಪ್ರತಿಭಟನಾ ಸ್ಥಳದಲ್ಲಿ ಯುವಜನರ ಬೃಹತ್ ಜನಾಂದೋಲನವೇ ಏರ್ಪಟ್ಟಿದೆ.




# ತಕ್ಷಣ ಚರ್ಚೆ ಕೋರಿ ರಾಜ್ಯಸಭಾ ಸದಸ್ಯ ಸೈಯದ್ ನಾಸಿರ್ ಹುಸೇನ್ ನೋಟಿಸ್

ನವದೆಹಲಿ, ಜು.22: ಭಾರತದ ಪರೀಕ್ಷೆ, ಮೌಲ್ಯಮಾಪನ ಮತ್ತು ನೇಮಕಾತಿ ಚೌಕಟ್ಟಿನಲ್ಲಿ "ವ್ಯವಸ್ಥಿತ ಬಿಕ್ಕಟ್ಟು" ಎಂದು ಬಣ್ಣಿಸಿರುವ ರಾಜ್ಯಸಭಾ ಸದಸ್ಯ ಸೈಯದ್ ನಾಸಿರ್ ಹುಸೇನ್, ವಿಷಯದ ಕುರಿತು ತಕ್ಷಣದ ಚರ್ಚೆಗೆ ಅನುಕೂಲವಾಗುವಂತೆ ದಿನದ ಪಟ್ಟಿ ಮಾಡಲಾದ ವ್ಯವಹಾರಗಳನ್ನು ಸ್ಥಗಿತಗೊಳಿಸುವಂತೆ ಕೋರಿ ನಿಯಮ 267ರ ಅಡಿಯಲ್ಲಿ ನೋಟಿಸ್ ಸಲ್ಲಿಸಿದ್ದಾರೆ. 2026ರ ನೀಟ್–ಯುಜಿ ರದ್ದತಿ ಮತ್ತು ಪುನರಾವರ್ತಿತ ನೇಮಕಾತಿ ಪರೀಕ್ಷಾ ಪತ್ರಿಕೆ ಸೋರಿಕೆಯಿಂದ ಹಿಡಿದು ಸಿಬಿಎಸ್‌ಇಯ ಆನ್‌ಸ್ಕ್ರೀನ್ ಮಾರ್ಕಿಂಗ್ ವ್ಯವಸ್ಥೆಯಲ್ಲಿನ ಅಕ್ರಮಗಳು ಮತ್ತು ಪ್ರತಿಭಟನಾ ನಿರತ ವಿದ್ಯಾರ್ಥಿಗಳ ವಿರುದ್ಧ ಪೊಲೀಸ್ ಕ್ರಮ ಸೇರಿ ಹಲವಾರು ವಿಷಯಗಳ ಕುರಿತು ತುರ್ತು ಚರ್ಚೆ ಅವಕಾಶ ನೀಡುವ ಸಲುವಾಗಿ ಹುಸೇನ್ ಶೂನ್ಯ ವೇಳೆ, ಪ್ರಶ್ನೋತ್ತರ ಅವಧಿ ಮತ್ತು ಇತರ ನಿಗದಿತ ವ್ಯವಹಾರಗಳನ್ನು ಸ್ಥಗಿತಗೊಳಿಸುವಂತೆ ರಾಜ್ಯಸಭಾ ಪ್ರಧಾನ ಕಾರ್ಯದರ್ಶಿಗೆ ನೋಟಿಸ್‌ನಲ್ಲಿ ಕೋರಿದ್ದಾರೆ. ಪ್ರಕರಣಕ್ಕೆ ಸಂಸತ್ತಿನಲ್ಲಿ ತಕ್ಷಣವೇ ಚರ್ಚೆ ನಡೆಸುವಂತೆ ಹಲವು ನಾಯಕರು ಪ್ರಕಟಣೆ ನೀಡಿದ್ದಾರೆ.ತೃಣಮೂಲ ಕಾಂಗ್ರೆಸ್ ಮುಖ್ಯ ವಿಪ್ ನದಿಮುಲ್ ಹಕ್ ಅವರು ರಾಜ್ಯಸಭೆಯಲ್ಲಿ ನಿಯಮ 267ರ ಅಡಿಯಲ್ಲಿ ನೋಟಿಸ್ ಸಲ್ಲಿಸಿದ್ದಾರೆ. ಅದೇ ರೀತಿ ಕಾಂಗ್ರೆಸ್ ಸಂಸದ ಹಿಬಿ ಈಡನ್ ಲೋಕಸಭೆಯಲ್ಲಿ ನಿಲುವಳಿ ಸೂಚನೆ, ಆಮ್ ಆದ್ಮಿ ಪಾರ್ಟಿಯ ಸಂಸದ ಸಂಜಯ್ ಸಿಂಗ್ ಅವರ ನೀಟ್ ಪ್ರಶ್ನೆಪತ್ರಿಕೆ ಸೋರಿಕೆ, ಸಾರ್ವಜನಿಕ ಪರೀಕ್ಷಾ ವ್ಯವಸ್ಥೆಯ ವೈಫಲ್ಯ, ವಿದ್ಯಾರ್ಥಿಗಳ ಮೇಲಿನ ಪೊಲೀಸ್ ಕ್ರಮ ಚರ್ಚಿಸಲು ರಾಜ್ಯಸಭೆಯಲ್ಲಿ ಕಲಾಪ ತಡೆಹಿಡಿಯುವಂತೆ ಕೋರಿದ್ದಾರೆ.



# ಮುಂಗಾರು ಮಳೆ ಕೊರತೆ: ತಮಿಳುನಾಡಿಗೆ ನೀರು ಬಿಡದಿರಲು ಸಿಡಬ್ಲ್ಯುಎಂಎ ನಿರ್ದೇಶನ

**ನವದೆಹಲಿ, ಜು.22: ಕಾವೇರಿ ಜಲಾನಯನ ಪ್ರದೇಶದಲ್ಲಿ ಮಳೆಯ ಕೊರತೆ ಮುಂದುವರಿದಿರುವ ಹಿನ್ನೆಲೆಯಲ್ಲಿ ತಮಿಳುನಾಡಿಗೆ ತಕ್ಷಣ ನೀರು ಬಿಡುಗಡೆ ಮಾಡುವಂತೆ ಕರ್ನಾಟಕಕ್ಕೆ ಯಾವುದೇ ನಿರ್ದೇಶನ ನೀಡದೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ತಾತ್ಕಾಲಿಕ ರಿಲೀಫ್ ನೀಡಿದೆ.**

ನವದೆಹಲಿಯಲ್ಲಿ ನಡೆದ ಪ್ರಾಧಿಕಾರದ 53ನೇ ಸಭೆಯಲ್ಲಿ ಎರಡೂ ರಾಜ್ಯಗಳ ವಾದ ಆಲಿಸಿದ ಬಳಿಕ, ಇನ್ನೂ ಒಂದು ವಾರ ಪರಿಸ್ಥಿತಿಯನ್ನು ಅವಲೋಕಿಸಿ ಜುಲೈ 28ರಂದು ನಡೆಯಲಿರುವ ಕಾವೇರಿ ನೀರು ನಿಯಂತ್ರಣ ಸಮಿತಿ ಸಭೆಯಲ್ಲಿ ಮುಂದಿನ ನಿರ್ಧಾರ ಕೈಗೊಳ್ಳಲು ತೀರ್ಮಾನಿಸಲಾಯಿತು.

ಸಭೆಯಲ್ಲಿ ತಮಿಳುನಾಡು ಸರ್ಕಾರ ತನ್ನ ಪಾಲಿನ ನೀರು ಸಿಗುತ್ತಿಲ್ಲ ಎಂದು ಪ್ರಬಲವಾಗಿ ವಾದ ಮಂಡಿಸಿತು. ಸುಪ್ರೀಂ ಕೋರ್ಟ್ನ 2018ರ ತೀರ್ಪಿನ ಪ್ರಕಾರ ಜೂನ್ 1ರಿಂದ ಜುಲೈ 19ರವರೆಗೆ ಬಿಳಿಗುಂಡ್ಲುವಿಗೆ 28.3 ಟಿಎಂಸಿ ನೀರು ಹರಿಯಬೇಕಿದ್ದರೆ, ಕೇವಲ 3.4 ಟಿಎಂಸಿ ಮಾತ್ರ ಹರಿದುಬಂದಿದೆ ಎಂದು ತಿಳಿಸಿತು. ಇದರಿಂದ ಸುಮಾರು 24.8 ಟಿಎಂಸಿ ನೀರಿನ ಕೊರತೆ ಉಂಟಾಗಿದೆ ಎಂದು ಪ್ರಾಧಿಕಾರದ ಗಮನಕ್ಕೆ ತಂದಿತು.

### ಕೃಷಿ ಚಟುವಟಿಕೆಗೆ ನೀರು ಬಳಸದಂತೆ ಕರ್ನಾಟಕಕ್ಕೆ ತಾಕೀತು

ಇದೇ ವೇಳೆ, ಜುಲೈ 20ರ ವೇಳೆಗೆ ಕರ್ನಾಟಕದ ನಾಲ್ಕು ಪ್ರಮುಖ ಜಲಾಶಯಗಳಲ್ಲಿ 48.9ಟಿಎಂಸಿ ನೀರು ಸಂಗ್ರಹವಿದ್ದರೂ, ಅವುಗಳಿಗೆ ಬಂದಿರುವ ಒಟ್ಟು ಒಳಹರಿವು ಕೇವಲ 31.6 ಟಿಎಂಸಿ ಮಾತ್ರವಾಗಿದ್ದು, ಇದು ಕಳೆದ 30 ವರ್ಷಗಳ ಸರಾಸರಿಯ ಶೇ.38.79ರಷ್ಟೇ ಎಂದು ತಮಿಳುನಾಡು ಉಲ್ಲೇಖಿಸಿತು. ಮೆಟ್ಟೂರು ಜಲಾಶಯದಲ್ಲಿ 36.9 ಟಿಎಂಸಿ ನೀರಿದ್ದು, ಒಳಹರಿವು ಅತ್ಯಂತ ಕಡಿಮೆಯಾಗಿದೆ ಎಂದು ಹೇಳಿ, ಕರ್ನಾಟಕವು ಬಾಕಿ ನೀರನ್ನು ಪ್ರೋ–ರಾಟಾ ಆಧಾರದ ಮೇಲೆ ಬಿಡುಗಡೆ ಮಾಡುವಂತೆ ಪ್ರಾಧಿಕಾರ ನಿರ್ದೇಶಿಸಬೇಕೆಂದು ಮನವಿ ಮಾಡಿತು. ಇದಕ್ಕೆ ಪ್ರತಿಯಾಗಿ ಕರ್ನಾಟಕದ ಪ್ರತಿನಿಧಿಗಳು ರಾಜ್ಯದಲ್ಲಿ ಮಳೆಯ ಕೊರತೆ ಹಾಗೂ ಬರದಂತಹ ಪರಿಸ್ಥಿತಿ ನಿರ್ಮಾಣವಾಗಿದ್ದು, ವಿಶೇಷವಾಗಿ ಬೆಂಗಳೂರು ಸೇರಿದಂತೆ ಕುಡಿಯುವ ನೀರಿನ ಅವಶ್ಯಕತೆಗಳಿಗೆ ಆದ್ಯತೆ ನೀಡಬೇಕಾಗಿದೆ ಎಂದು ತಿಳಿಸಿದರು.

ಸಭೆಯಲ್ಲಿ ಕಾವೇರಿ ಜಲಾನಯನ ಪ್ರದೇಶದಲ್ಲಿ ಮಳೆಯ ಪ್ರಮಾಣ ತೀರಾ ಕಡಿಮೆಯಿರುವ ಬಗ್ಗೆ ಆತಂಕ ವ್ಯಕ್ತವಾಯಿತು. ಮುಂದಿನ ದಿನಗಳಲ್ಲಿಯೂ ಭಾರೀ ಮಳೆಯಾಗುವ ಸಾಧ್ಯತೆ ಕಡಿಮೆ ಇರುವ ಹಿನ್ನೆಲೆಯಲ್ಲಿ ಲಭ್ಯವಿರುವ ನೀರನ್ನು ಅತ್ಯಂತ ಮಿತವಾಗಿ ಮತ್ತು ಕಾನೂನು ವ್ಯಾಪ್ತಿಯಲ್ಲಿಯೇ ಬಳಸುವಂತೆ ಎರಡೂ ರಾಜ್ಯಗಳಿಗೆ ಸೂಚನೆ ನೀಡಲಾಯಿತು. ಕೃಷಿಗಿಂತ ಕುಡಿಯುವ ನೀರಿನ ಅಗತ್ಯಕ್ಕೆ ಮೊದಲ ಆದ್ಯತೆ ನೀಡಬೇಕೆಂಬ ಅಭಿಪ್ರಾಯವೂ ವ್ಯಕ್ತವಾಯಿತು.

ಜುಲೈ 26ರ ನಂತರ ಕಾವೇರಿ ಜಲಾನಯನ ಪ್ರದೇಶದಲ್ಲಿ ಸ್ವಲ್ಪ ಮಟ್ಟಿನ ಮಳೆಯಾಗುವ ಸಾಧ್ಯತೆ ಇದೆ ಎಂದು ಸಭೆಯಲ್ಲಿ ತಿಳಿಸಲಾಯಿತು. ಆದರೆ ಸದ್ಯದ ಪರಿಸ್ಥಿತಿಯಲ್ಲಿ ತಮಿಳುನಾಡಿಗೆ ನೀರು ಬಿಡುಗಡೆ ಮಾಡುವಂತೆ ಯಾವುದೇ ನಿರ್ದೇಶನ ನೀಡದೆ, ಪರಿಸ್ಥಿತಿಯನ್ನು ಮತ್ತೊಮ್ಮೆ ಪರಿಶೀಲಿಸಿ ಜುಲೈ 28ರಂದು ನಡೆಯಲಿರುವ ಕಾವೇರಿ ನೀರು ನಿಯಂತ್ರಣ ಸಮಿತಿ ಸಭೆಯಲ್ಲಿ ಪ್ರೋ–ರಾಟಾ ಆಧಾರದ ಮೇಲೆ ರಾಜ್ಯಗಳ ನೀರಿನ ಹಂಚಿಕೆ ಕುರಿತು ಅಂತಿಮ ನಿರ್ಧಾರ ಕೈಗೊಳ್ಳಲು ಪ್ರಾಧಿಕಾರ ತೀರ್ಮಾನಿಸಿದೆ.

### ಮೆಟ್ಟೂರು ಡ್ಯಾಂ ನೀರು ಕುಡಿಯಲು ಮಾತ್ರ: ತಮಿಳುನಾಡಿಗೆ ಸೂಚನೆ

**ತಮಿಳುನಾಡು ಸಹ ಮುಂದಿನ ಆದೇಶದವರೆಗೆ, ಮೆಟ್ಟೂರು ಡ್ಯಾಮ್‌ನಲ್ಲಿರುವ ನೀರನ್ನು ಕೇವಲ ಕುಡಿಯುವ ಉದ್ದೇಶಕ್ಕಾಗಿ ನೀರು ಬಳಕೆ ಮಾಡಬೇಕು. ಕೃಷಿ ಚಟುವಟಿಕೆಗೆ ಡ್ಯಾಂ ನೀರನ್ನು ಬಳಕೆ ಮಾಡಬೇಡಿ ಎಂದು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಸೂಚನೆ ಕೊಟ್ಟಿದೆ. ಜುಲೈ 26ರ ಬಳಿಕ ಕರ್ನಾಟಕದಲ್ಲಿ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮಾಹಿತಿ ನೀಡಿದೆ. ಹೀಗಾಗಿ ಒಂದು ವಾರದ ಬಳಿಕ ಅಂದರೆ, ಜುಲೈ 28ಕ್ಕೆ ಪುನಃ ಕಾವೇರಿ ನೀರು ನಿರ್ವಹಣಾ ಸಮಿತಿ ಸಭೆ ನಡೆಸಿ, ನೀರು ಬಿಡುವುದೋ ಅಥವಾ ಬೇಡವೂ ಎಂಬ ಬಗ್ಗೆ ತೀರ್ಮಾನ ಕೈಗೊಳ್ಳಲಾಗುತ್ತದೆ ಎನ್ನಲಾಗಿದೆ.**

## ನಿತ್ಯ ಪಂಚಾಂಗ 23.07.2026 ಗುರುವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ,
ಉತ್ತರಾಯಣ–ದಕ್ಷಿಣಾಯಣ ಗ್ರೀಷ್ಮ ಋತು,
ಚಾಂದ್ರಮಾನ, ನಿಜ ಜ್ಯೇಷ್ಠ – ಆಷಾಢ ಮಾಸ

ಆಷಾಢ ಶುದ್ಧ, ನವಮಿ,
ವಿಶಾಖ ನಕ್ಷತ್ರ, ಚಾಕ್ಷುಷ ಮನ್ವಾದಿ,
ಸಾಸಲಹಳ್ಳಿ ರಂಗನಾಥ ರಥ,
ವಿದ್ಯಾಸಿಂಧುತೀರ್ಥ ಆರಾಧನೆ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 12.00 |
| ಮಂಗಳ | ಮ. 3.25–4.59 | 9.00–10.30 | 12.00– 1.30 |
| ಬುಧ | ಮ.12.16–1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42– 12.16 | 3.00– 4.30 | 7.30– 9.00 |
| ಶನಿ | ಬೆ. 9.07– 10.41 | 1.30– 3.00 | 6.00– 7.30 |

# ವರಿಷ್ಠರು ಕರೆದರೆ ಮತ್ತೆ ದೆಹಲಿಗೆ: ಮಾಜಿ ಸಿಎಂ ಸಿದ್ದರಾಮಯ್ಯ

**ಬೆಂಗಳೂರು, ಜು.22:** ಪಕ್ಷದ ವರಿಷ್ಠ ನಾಯಕರು ಕರೆದರೆ ಮತ್ತೊಮ್ಮೆ ದೆಹಲಿಗೆ ಬರುತ್ತೇವೆ ಎಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ.

ದೆಹಲಿಯಿಂದ ಬೆಂಗಳೂರಿಗೆ ಪ್ರಯಾಣ ಬೆಳೆಸುವ ಸಂದರ್ಭದಲ್ಲಿ ಸುದ್ದಿಗಾರರ ಜೊತೆ ಮಾತನಾಡಿದ ಅವರು, ಸಂಪುಟ ವಿಸ್ತರಣೆಯ ಕುರಿತು ಚರ್ಚೆ ನಡೆಸಲು ಪಕ್ಷದ ವರಿಷ್ಠ ನಾಯಕರು ಆಹ್ವಾನಿಸಿದರೆ ದೆಹಲಿಗೆ ಬರುತ್ತೇವೆ ಎಂದಿದ್ದಾರೆ.

ಇದಕ್ಕೂ ಮುನ್ನ ಕರ್ನಾಟಕ ಭವನದಲ್ಲಿ ಸಿದ್ದರಾಮಯ್ಯ ರಾಜ್ಯದ ಕೆಲ ಶಾಸಕರ ಜೊತೆ ಉಪಾಹಾರ ಕೂಟ ನಡೆಸಿದರು. ಮಾಜಿ ಸಚಿವ ಎಂ.ಆರ್.ಸೀತಾರಾಮ್, ಶಾಸಕರಾದ ಬಸವರಾಜರಾಯ ರೆಡ್ಡಿ, ಪಿ.ಎಂ.ಅಶೋಕ್,



ಪಾವಗಡ ವೆಂಕಟೇಶ್, ವಿಧಾನಪರಿಷತ್ ಸದಸ್ಯ ರಾಜೇಂದ್ರ ರಾಜಣ್ಣ ಮತ್ತಿತರರೊಂದಿಗೆ ಉಪಾಹಾರ ಸೇವಿಸಿ ಸಮಾಲೋಚನೆ ನಡೆಸಿದ್ದರು.

**ಗೊಂದಲದ ಗೂಡಾದ ಸಂಪುಟ ವಿಸ್ತರಣೆ:** ಸಂಪುಟ ವಿಸ್ತರಣೆಯ ಕುರಿತಂತೆ ಚರ್ಚೆ ನಡೆಸಲು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ದೆಹಲಿಗೆ ತೆರಳಿದ್ದರು. ಆದರೆ ಅಲ್ಲಿ ಯಾವುದೇ ಚರ್ಚೆಗಳಾಗದೇ ಬೆಂಗಳೂರಿಗೆ ವಾಪಾಸ್ ಬಂದರು. ಬಹುನಿರೀಕ್ಷಿತ ಸಚಿವ ಸಂಪುಟ ವಿಸ್ತರಣೆ ಮುಂದೂಡಿಕೆಯಾಗಿದ್ದು, ಮುಂದೆ ಯಾವಾಗ ಎನ್ನುವ ಪ್ರಶ್ನೆ ಎದುರಾಗಿದೆ. ರಾಜ್ಯ ಕಾಂಗ್ರೆಸ್ ನಾಯಕರು ಸಲ್ಲಿಸಿದ್ದ ಸಂಭವನೀಯ ಸಚಿವರ ಪಟ್ಟಿ ಹೈಕಮಾಂಡ್‌ಗೆ ಸಹನೀಯವಾಗಿಲ್ಲ ಎಂದು ಹೇಳಲಾಗಿದೆ.

ಪಕ್ಷಕ್ಕಾಗಿ ನಿಷ್ಠೆಯಿಂದ ದುಡಿದವರು, ಪಕ್ಷ ಸಂಘಟನೆಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳುವವರು ಮತ್ತು ನಾಯಕತ್ವದ ನಿಷ್ಠೆಯಲ್ಲಿ ಅಚಲತೆ ಹೊಂದಿರುವವರು, ಯಾವುದೇ ಕ್ರಿಮಿನಲ್ ಹಿನ್ನೆಲೆಯಿಲ್ಲದೆ ನಿಷ್ಕಳಂಕ ಮತ್ತು ಸಚ್ಚಾರಿತ್ಯ ಹೊಂದಿರುವವರನ್ನು ಸಂಪುಟಕ್ಕೆ ಸೇರಿಸಿಕೊಳ್ಳಬೇಕು ಎಂದು ಹೈಕಮಾಂಡ್ ಸೂಚಿಸಿದೆ.

ಈಗ ನೀಡಲಾಗಿರುವ ಪಟ್ಟಿಯಲ್ಲಿ ಕೆಲವರನ್ನು ಬದಲಾವಣೆ ಮಾಡಬೇಕು ಎಂದು ಹೈಕಮಾಂಡ್ ಸೂಚಿಸಿದೆ. ಆದರೆ ಸಾಮಾಜಿಕ ನ್ಯಾಯದ ಹಿನ್ನೆಲೆಯಲ್ಲಿ ಕೆಲವರಿಗೆ ಆದ್ಯತೆ ನೀಡಲೇಬೇಕಾದ ಅನಿವಾರ್ಯತೆ ಇದೆ ಎಂದು ರಾಜ್ಯ ನಾಯಕರು ಪ್ರತಿಪಾದಿಸಿದ್ದಾರೆ.

ಈ ನಡುವೆ ರಾಹುಲ್ ಗಾಂಧಿ, ರಾಜಕೀಯ ವಿಶ್ಲೇಷಕ ಸುನೀಲ್ ಕಣಗೋಲ್ ಅವರಿಂದ ಪ್ರತ್ಯೇಕ ಪಟ್ಟಿ ಪಡೆದಿದ್ದಾರೆ. ಆ ಪಟ್ಟಿಯಲ್ಲಿರುವ ವರಿಂದ ಪಕ್ಷಕ್ಕಾಗುವ ಲಾಭ–ನಷ್ಟಗಳ ಬಗ್ಗೆ ವ್ಯಾಪಕ ಚರ್ಚೆಗಳಾಗಬೇಕಿದೆ. ಆದರೆ ವರಿಷ್ಠ ನಾಯಕರು ಪ್ರತಿಭಟನೆಯಲ್ಲಿ ತೊಡಗಿಸಿಕೊಂಡಿರುವುದರಿಂದ ರಾಜ್ಯ ಸಂಪುಟದ ವಿಸ್ತರಣೆ ಕುರಿತು ಚರ್ಚೆ ನಡೆಸಲು ಸಾಧ್ಯವಾಗುತ್ತಿಲ್ಲ ಎಂದು ಹೇಳಲಾಗಿದೆ.

ಡಿ.ಕೆ.ಶಿವಕುಮಾರ್ ಮತ್ತು ಸಿದ್ದರಾಮಯ್ಯ ಹಳಬರಿಗೆ ಮಣೆ ಹಾಕುವ ಉಮೇದಿನಲ್ಲಿದ್ದರೆ, ಪಕ್ಷದ ವರಿಷ್ಠರು ಅದಕ್ಕೆ ಬ್ರೇಕ್ ಹಾಕಿದ್ದಾರೆ. ಈ ಹಗ್ಗಜಗ್ಗಾಟದಲ್ಲಿ ಸಚಿವ ಸಂಪುಟ ವಿಸ್ತರಣೆ ಇತ್ಯರ್ಥಗೊಂಡಿಲ್ಲ, ಚರ್ಚೆ ಕೂಡ ಪೂರ್ಣಗೊಂಡಿಲ್ಲ. ಈ ಹಿನ್ನೆಲೆಯಲ್ಲಿ ಮತ್ತೆ ಇನ್ನೊಂದು ಸುತ್ತಿನ ಚರ್ಚೆಗಾಗಿ ರಾಜ್ಯದ ನಾಯಕರು ದೆಹಲಿಗೆ ಭೇಟಿ ನೀಡಬೇಕಾದ ಪರಿಸ್ಥಿತಿ ಇದೆ. ಆದರೆ ಅದು ಯಾವಾಗ ಎಂಬುದು ಖಚಿತವಾಗಿಲ್ಲ.

# ಹೆಚ್ಚುವರಿ ಡಿಸಿಎಂ ಹುದ್ದೆ ಸತೀಶ್ ಜಾರಕಿಹೊಳಿ, ಎಂ.ಬಿ. ಪಾಟೀಲ್ ಮುನ್ನೆಲೆಗೆ

ಬೆಂಗಳೂರು, ಜು.22: ರಾಜ್ಯ ಕಾಂಗ್ರೆಸ್‌ನಲ್ಲಿ ಸಚಿವ ಸಂಪುಟ ವಿಸ್ತರಣೆ ಹಾಗೂ ಹೆಚ್ಚುವರಿ ಡಿಸಿಎಂ ಹುದ್ದೆಗಳ ಕುರಿತು ದೆಹಲಿ ಮಟ್ಟದಲ್ಲಿ ತೀವ್ರ ಚರ್ಚೆಗಳು ನಡೆಯುತ್ತಿವೆ. ಈಗಾಗಲೇ ಇರುವ ಒಂದು ಡಿಸಿಎಂ ಸ್ಥಾನದ ಜೊತೆಗೆ ಸತೀಶ್ ಜಾರಕಿಹೊಳಿ ಮತ್ತು ಎಂ.ಬಿ. ಪಾಟೀಲ್ ಅವರ ಹೆಸರು ಹೆಚ್ಚುವರಿ ಡಿಸಿಎಂ ರೇಸ್‌ನಲ್ಲಿ ಕೇಳಿಬರುತ್ತಿವೆ. ಈ ಹಿಂದೆ ಡಿಸಿಎಂ ಹುದ್ದೆಯ ಪ್ರಬಲ ಆಕಾಂಕ್ಷಿಯಾಗಿದ್ದ ಸಚಿವ ಜಮೀರ್ ಅಹಮದ್ ಖಾನ್ ಅವರ ಆಸೆಗೆ ಇದೀಗ ತಣ್ಣೀರು ಬಿದ್ದಂತಾಗಿದೆ.

ದಾವಣಗೆರೆ ದಕ್ಷಿಣ ಉಪಚುನಾವಣೆ ಸಂದರ್ಭದಲ್ಲಿ ಜಮೀರ್ ಅಹಮದ್ ಖಾನ್ ಪಕ್ಷ ವಿರೋಧಿ ಚಟುವಟಿಕೆ ನಡೆಸಿದ್ದಾರೆ ಎಂಬ ಆರೋಪ ಕೇಳಿಬಂದಿತ್ತು. ಸ್ವತಃ ಕಾಂಗ್ರೆಸ್‌ನ ಮುಸ್ಲಿಂ ನಾಯಕರೇ ಜಮೀರ್ ವಿರುದ್ಧ ದೂರು ನೀಡಿದ್ದು, ಇದರಿಂದ ಹೈಕಮಾಂಡ್ ನಾಯಕರು ಜಮೀರ್ ವಿರುದ್ಧ ತೀವ್ರ ಅಸಮಾಧಾನ ಗೊಂಡಿದ್ದಾರೆ. ಈ ವಿಚಾರದಲ್ಲಿ ಆಪ್ತ ಜಮೀರ್ ಅಹಮದ್ ವಿರುದ್ಧ ಸಿದ್ದರಾಮಯ್ಯ ಅವರಿಗೂ ಅಸಮಾಧಾನ ಇದೆ ಎನ್ನಲಾಗಿದೆ. ಹಾಗಾಗಿ ಜಮೀರ್ ಅವರಿಗೆ ರಾಜಕೀಯವಾಗಿ ಹಿನ್ನಡೆ ಯಾಗಿದೆ. ಸಿಎಂ ಡಿ.ಕೆ. ಶಿವಕುಮಾರ್ ಅವರು ಸಂಪುಟ ವಿಸ್ತರಣೆಯ ಪಟ್ಟಿಯನ್ನು ಹೈಕಮಾಂಡ್‌ಗೆ ಸಲ್ಲಿಸಿದ್ದು, ಮುಸ್ಲಿಂ ಕೋಟಾದಡಿಯಲ್ಲಿ ಯು.ಟಿ. ಖಾದರ್ ಹೊರತಾಗಿ ರಿಜ್ವಾನ್ ಅರ್ಷದ್, ಸಲೀಂ ಅಹ್ಮದ್ ಹಾಗೂ ತನ್ವೀರ್ ಸೇಠ್ ಹೆಸರು ಮುಂಚೂಣಿ ಯಲ್ಲಿವೆ. ಜಮೀರ್ ಖಾನ್‌ಗೆ ಡಿಸಿಎಂ ಸ್ಥಾನ ಬಹುತೇಕ ಅಸಾಧ್ಯವಾಗಿದ್ದು, ಕನಿಷ್ಠ ಸಚಿವ ಸ್ಥಾನವಾದರೂ ಸಿಗಲಿದೆಯೇ ಎಂಬುದೇ ಈಗ ದೊಡ್ಡ ಪ್ರಶ್ನೆಯಾಗಿದೆ.

# ಎಸ್‌ಐಆರ್‌ನಲ್ಲಿ ಅಕ್ರಮ: ಸಂದೇಹಾಸ್ಪದ ಚಟುವಟಿಕೆ

**ರಾಜ್ಯ ಮುಖ್ಯ ಚುನಾವಣಾಧಿಕಾರಿಗೆ ಸಂಸದ ತೇಜಸ್ವಿ ಸೂರ್ಯ ದೂರು, ಉನ್ನತಮಟ್ಟದ ತನಿಖೆಗೆ ಆಗ್ರಹ**

ಬೆಂಗಳೂರು, ಜು.22: ರಾಜ್ಯದಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಗಂಭೀರ ಸ್ವರೂಪದ ಅಕ್ರಮಗಳು ಹಾಗೂ ಸಂದೇಹಾಸ್ಪದ ಚಟುವಟಿಕೆಗಳು ನಡೆಯುತ್ತಿವೆ ಎಂದು ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಸಂಸದ ತೇಜಸ್ವಿ ಸೂರ್ಯ ಆರೋಪ ಮಾಡಿದ್ದಾರೆ.

ಈ ವಿಚಾರಕ್ಕೆ ಸಂಬಂಧಿಸಿ ರಾಜ್ಯ ಮುಖ್ಯ ಚುನಾವಣಾಧಿಕಾರಿ ಅನ್ಬುಕುಮಾರ್ ಅವರಿಗೆ ದೂರು ಪತ್ರ ಬರೆದಿರುವ ಅವರು, ಪ್ರಕರಣವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿ ತಕ್ಷಣವೇ ಉನ್ನತ ಮಟ್ಟದ ಸಮಗ್ರ ತನಿಖೆ ನಡೆಸುವಂತೆ ಆಗ್ರಹಿಸಿದ್ದಾರೆ.

ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ವ್ಯಾಪ್ತಿಗೆ ಒಳಪಡುವ ಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರದ ಎಚ್.ಎಸ್.ಆರ್ ಲೇಔಟ್ ವಾರ್ಡ್–174ರ (ಹಳೆಯ ವಾರ್ಡ್ ಸಂಖ್ಯೆ 53) ಒಟ್ಟು 53 ಮತಗಟ್ಟೆಗಳಲ್ಲಿ ನಡೆದ ಮನೆ–ಮನೆ ಮತದಾರರ ಪರಿಶೀಲನೆ ಪ್ರಕ್ರಿಯೆಯಲ್ಲಿ ಬೃಹತ್ ಪ್ರಮಾಣದ ಲೋಪದೋಷಗಳು ಜರುಗಿರುವುದು ಗಮನಕ್ಕೆ ಬಂದಿದೆ ಯಾವುದೇ ಸಮರ್ಪಕ ಹಾಗೂ ದೃಢೀಕೃತ ಭೌತಿಕ ಪರಿಶೀಲನೆ ನಡೆಸದೇ, ಸುಮಾರು 13,000ಕ್ಕೂ ಅಧಿಕ ಅರ್ಹ ಮತದಾರರನ್ನು ಯುಇಎಫ್ – ಪರ್ಮನಂಟ್ ಶಿಫ್ಟಿಂಗ್ ಅಂದರೆ ಶಾಶ್ವತವಾಗಿ ಸ್ಥಳಾಂತರಗೊಂಡವರು



ಎಂದು ದಾಖಲಿಸಲಾಗಿದೆ. ಸ್ಥಳಕ್ಕೆ ಭೇಟಿನೀಡಿ ಭೌತಿಕ ಪರಿಶೀಲನೆ ನಡೆಸದೆಯೇ ಶೇಕಡಾ 75ರಷ್ಟು ಮನೆ–ಮನೆ ಪರಿಶೀಲನೆ ಕಾರ್ಯ ಮುಗಿದಿದೆ ಎಂದು ಅಧಿಕಾರಿಗಳು ವರದಿ ಸಲ್ಲಿಸಿದ್ದು, ಇದು ಇಡೀ ಚುನಾವಣಾ ಪ್ರಕ್ರಿಯೆಯ ಪಾರದರ್ಶಕತೆ ಮತ್ತು ವಿಶ್ವಾಸಾರ್ಹತೆಯ ಕುರಿತು ಗಂಭೀರ ಅನುಮಾನಗಳನ್ನು ಹುಟ್ಟುಹಾಕಿದೆ ಎಂದು ಆತಂಕ ವ್ಯಕ್ತಪಡಿಸಿದ್ದಾರೆ.

ಈ ಪರಿಶೀಲನಾ ಪ್ರಕ್ರಿಯೆಯಲ್ಲಿ ಬಿಎಲ್‌ಒ ಅಧಿಕಾರಿಗಳು ನಿಯಮಗಳನ್ನು ಸಂಪೂರ್ಣವಾಗಿ ಗಾಳಿಗೆ ತೂರಿದ್ದಾರೆ ಎಂದು ಸಂಸದ ತೇಜಸ್ವಿ ಸೂರ್ಯ ವಿವರಿಸಿದ್ದಾರೆ. ಬೂತ್ ಮಟ್ಟದ ಏಜೆಂಟ್‌ಗಳ ಗಮನಕ್ಕೆ ತರದೆ, ಅವರ ಅನುಮತಿ ಹಾಗೂ ಸಹಿ ಪಡೆಯದೆ ಏಕಪಕ್ಷೀಯವಾಗಿ ಸಾವಿರಾರು ಮತದಾರರನ್ನು ಶಾಶ್ವತವಾಗಿ ಸ್ಥಳಾಂತರ ಗೊಂಡವರು ಎಂದು ದಾಖಲಿಸಲಾಗಿದೆ. ಮನೆಮನೆ ಭೇಟಿಯ ಸಮಯದಲ್ಲಿ ಕಡ್ಡಾಯವಾಗಿ ಮಾಡಬೇಕಿದ್ದ ಜಿಪಿಎಸ್ ಆಧಾರಿತ ಛಾಯಾಚಿತ್ರ ಗ್ರಹಣೆ ಹಾಗೂ ಎನ್ಯುಮರೇಷನ್ ಸ್ಟಿಕ್ಕರ್ ಅಳವಡಿಕೆ ಪ್ರಕ್ರಿಯೆಯನ್ನು ಸಂಪೂರ್ಣ ವಾಗಿ ನಿರ್ಲಕ್ಷಿಸಲಾಗಿದೆ. ಅಷ್ಟೇ ಅಲ್ಲದೆ, ಮತದಾರರು ನಿಜವಾಗಿಯೂ ಸ್ಥಳಾಂತರಗೊಂಡಿದ್ದಾರೆಯೇ ಎಂಬುದನ್ನು ದೃಢಪಡಿಸಿಕೊಳ್ಳಲು ಅಕ್ಕಪಕ್ಕದ ನಿವಾಸಿಗಳಿಂದಾಗಲಿ ಅಥವಾ ಸ್ಥಳೀಯರಿಂದಾಗಲಿ ಯಾವುದೇ ಮಾಹಿತಿ ಪಡೆಯುವ ಸೌಜನ್ಯವನ್ನೂ ಅಧಿಕಾರಿಗಳು ತೋರಿಲ್ಲ. ಕಳೆದ ಚುನಾವಣೆಗಳಲ್ಲಿ ಶೇಕಡಾ 45ರಷ್ಟು ಸರಾಸರಿ ಮತದಾನ ದಾಖಲಾಗಿರುವ ಈ ವ್ಯಾಪ್ತಿಯಲ್ಲಿ, ಬಿಎಲ್‌ಒ ಅಧಿಕಾರಿಗಳು ಹಲವು ಮನೆಗಳಿಗೆ ಭೇಟಿಯನ್ನೇ ನೀಡದೆ ನಿರ್ಲಕ್ಷ್ಯ ವಹಿಸಿದ್ದಾರೆ ಎಂದು ಸ್ಥಳೀಯ ನಿವಾಸಿಗಳು ಆರೋಪಿಸಿರುವುದನ್ನು ಸಂಸದರು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ಚುನಾವಣಾ ಆಯೋಗದ ಸ್ಪಷ್ಟ ಮಾರ್ಗಸೂಚಿಗಳಿಗೆ ವಿರುದ್ಧವಾಗಿ ನಡೆದಿರುವ ಈ ಪ್ರಕ್ರಿಯೆಯಿಂದಾಗಿ ಸಾವಿರಾರು ಅರ್ಹ ನಾಗರಿಕರು ತಮ್ಮ ಸಂವಿಧಾನಾತ್ಮಕ ಮತದಾನದ ಹಕ್ಕಿನಿಂದ ವಂಚಿತರಾಗುವ ಭೀತಿ ಎದುರಾಗಿದೆ. ಆದ್ದರಿಂದ ಪ್ರಜಾಪ್ರಭುತ್ವದ ಆಶಯಗಳನ್ನು ಹಾಗೂ ಮತದಾರರ ಹಕ್ಕುಗಳನ್ನು ಎತ್ತಿಹಿಡಿಯುವ ಹಿತದೃಷ್ಟಿಯಿಂದ ಆಯೋಗವು ತಕ್ಷಣವೇ ನಿಯಮ ಬಾಹಿರವಾಗಿ ಸ್ಥಳಾಂತರ ಗೊಂಡವರು ಎಂದು ದಾಖಲಿಸಲಾದ ಎಲ್ಲಾ 13,000ಕ್ಕೂ ಹೆಚ್ಚು ಮತದಾರರ ಮಾಹಿತಿಯನ್ನು ಮರು ಭೌತಿಕ ಪರಿಶೀಲನೆಗೆ ಒಳಪಡಿಸಬೇಕು ಎಂದು ಒತ್ತಾಯಿಸಿದ್ದಾರೆ. ಜೊತೆಗೆ ಹೆಚ್.ಎಸ್.ಆರ್ ಲೇಔಟ್ ವಾರ್ಡ್–174ರ 53 ಮತಗಟ್ಟೆಗಳಲ್ಲಿ ನಡೆದ ಸಂಪೂರ್ಣ ಎನ್ಯುಮರೇಷನ್ ಕಾರ್ಯದ ಕುರಿತು ತಕ್ಷಣವೇ ಉನ್ನತ ಮಟ್ಟದ ಸಮಗ್ರ ತನಿಖೆಗೆ ಆದೇಶಿಸಬೇಕು ಹಾಗೂ ಕರ್ತವ್ಯ ಲೋಪ ಎಸಗಿ, ಸುಳ್ಳು ವರದಿ ಸಲ್ಲಿಕೆಗೆ ಕಾರಣರಾದ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಸೂಕ್ತ ಶಿಸ್ತುಕ್ರಮ ಜರುಗಿಸಬೇಕು ಎಂದು ಸಂಸದ ತೇಜಸ್ವಿ ಸೂರ್ಯ ರಾಜ್ಯ ಮುಖ್ಯ ಚುನಾವಣಾಧಿಕಾರಿಗಳನ್ನು ಆಗ್ರಹಿಸಿದ್ದಾರೆ.

# ವಿದ್ಯಾರ್ಥಿ ಪ್ರತಿಭಟನೆ ಹಿನ್ನೆಲೆ ಸಂಪುಟ ವಿಸ್ತರಣೆ ಮುಂದೂಡಿಕೆ ಸಚಿವ ಎಂ.ಬಿ. ಪಾಟೀಲ್

**ನವದೆಹಲಿ, ಜು.22:** ನೀಟ್ ಪರೀಕ್ಷೆ ಪ್ರಶ್ನೆ ಪತ್ರಿಕೆ ಸೋರಿಕೆ ಹಿನ್ನೆಲೆಯಲ್ಲಿ ದೆಹಲಿಯ ಜಂತರ್ ಮಂತರ್‌ನಲ್ಲಿ ನಡೆಯುತ್ತಿರುವ ವಿದ್ಯಾರ್ಥಿಗಳ ಪ್ರತಿಭಟನೆಯ ಕಾರಣ ರಾಜ್ಯ ಸಂಪುಟ ವಿಸ್ತರಣೆ ಪ್ರಕ್ರಿಯೆಯನ್ನು ಮುಂದೂಡಲಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ. ದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು,



ವಿದ್ಯಾರ್ಥಿಗಳ ಪ್ರತಿಭಟನೆಗೆ ಕಾಂಗ್ರೆಸ್ ಮುಖಂಡರು ಬೆಂಬಲ ಸೂಚಿಸಿ, ಧರಣಿಯಲ್ಲಿ ಭಾಗವಹಿಸಿದ್ದಾರೆ. ಲೋಕಸಭೆ ವಿರೋಧ ಪಕ್ಷ ನಾಯಕ ರಾಹುಲ್ ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಹಾಗೂ ಕೆ.ಸಿ.ವೇಣುಗೋಪಾಲ್, ರಣದೀಪ್ ಸುರ್ಜೇವಾಲ ಸೇರಿದಂತೆ ಅನೇಕ ನಾಯಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿರುವುದರಿಂದ ಸಂಪುಟ ವಿಸ್ತರಣೆಯನ್ನು ಮುಂದೂಡಲಾಗಿದೆ. ಧರಣಿ ಮುಗಿದ ಬಳಿಕ ಹೈಕಮಾಂಡ್ ಜೊತೆ ಚರ್ಚಿಸಿ ನೂತನ ಸಚಿವರ ಪಟ್ಟಿಯನ್ನು ಅಂತಿಮಗೊಳಿಸಲಾಗುತ್ತದೆ ಎಂದು ಹೇಳಿದರು.

# ನೀಟ್ ಪ್ರತಿಭಟನೆಗೆ ಕೌಂಟರ್ ಬಿಜೆಪಿಯಿಂದ ಕಾಂಗ್ರೆಸ್ ಕಚೇರಿಗಳಿಗೆ ಮುತ್ತಿಗೆ

**ಬೆಂಗಳೂರು, ಜು.22:** ನೀಟ್ ಪರೀಕ್ಷಾ ಅಕ್ರಮ, ವಿದ್ಯಾರ್ಥಿಗಳ ಮೇಲಿನ ಲಾಠಿಚಾರ್ಜ್ ಖಂಡಿಸಿ ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ ನೇತೃತ್ವದಲ್ಲಿ ಕಾಂಗ್ರೆಸ್ ನಾಯಕರು ನವದೆಹಲಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ನಿವಾಸದ ಎದುರು ಪ್ರತಿಭಟನೆ ನಡೆಸಿದ್ದನ್ನು ಖಂಡಿಸಿ ಇದೀಗ ಬಿಜೆಪಿ ನಾಯಕರು ಕಾಂಗ್ರೆಸ್ ವಿರುದ್ಧ ಪ್ರತಿಭಟನೆ ನಡೆಸುತ್ತಿದ್ದಾರೆ. ನೀಟ್ ಅಕ್ರಮ ಖಂಡಿಸಿ ಹಾಗೂ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆಗೆ ಆಗ್ರಹಿಸಿ ಕಾಂಗ್ರೆಸ್ ಹಾಗೂ ಯುವ ಸಮೂಹ ದೇಶಾದ್ಯಂತ ಪ್ರತಿಭಟನೆಗಳನ್ನು ತೀವ್ರಗೊಳಿಸುತ್ತಿರುವ ಬೆನ್ನಲ್ಲೇ ಕಾಂಗ್ರೆಸ್‌ಗೆ ಕೌಂಟರ್ ನೀಡಲು ಮುಂದಾಗಿರುವ ಬಿಜೆಪಿ, ದೇಶಾದ್ಯಂತ ಕಾಂಗ್ರೆಸ್ ಕಚೇರಿಗಳಿಗೆ ಮುತ್ತಿಗೆ ಹಾಕಲು ನಿರ್ಧರಿಸಿದೆ. ಈ ಹೋರಾಟದ ಭಾಗವಾಗಿ ಬುಧವಾರ ಬೆಂಗಳೂರಿನಲ್ಲಿಯೂ ಬಿಜೆಪಿ ಪ್ರತಿಭಟನೆ ತೀವ್ರಗೊಳಿಸಿದೆ. ವಿಪಕ್ಷ ನಾಯಕ ಆರ್. ಅಶೋಕ್ ನೇತೃತ್ವದಲ್ಲಿ ಬಿಜೆಪಿ ನಾಯಕರು ಪ್ರತಿಭಟನೆ ನಡೆಸಿದ್ದು, ಕೆಪಿಸಿಸಿ ಕಚೇರುಗೆ ಮುತ್ತಿಗೆ ಹಾಕಲು ಯತ್ನಿಸಿದ್ದಾರೆ. ಈ ವೇಳೆ ಪೊಲೀಸರು ಬಿಜೆಪಿ ನಾಯಕರನ್ನು ಕಂಟೋನ್ಮೆಂಟ್ ಬಳಿ ತಡೆದಿದ್ದಾರೆ. ಪೊಲೀಸರು ಹಾಗೂ ಬಿಜೆಪಿ ನಾಯಕರ ನಡುವೆ ವಾಗ್ವಾದ ನೂಕಾಟ–ತಳ್ಳಾಟ ನಡೆದು, ಹೈಡ್ರಾಮಾ ಸೃಷ್ಟಿಯಾಗಿದೆ. ಕಾಂಗ್ರೆಸ್ ವಿರುದ್ಧ ಬಿಜೆಪಿ ನಾಯಕರು ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

# ಪ್ರಜಾಪ್ರಭುತ್ವದ ಹೆಸರಿನಲ್ಲಿ ಕಾಂಗ್ರೆಸ್‌ನ ಗೂಂಡಾಗಿರಿ ಖಂಡನೀಯ!



**ಬೆಂಗಳೂರು, ಜು.22:** ಇಂದು ಬಿಜೆಪಿ ಕರ್ನಾಟಕದ ವತಿಯಿಂದ ಬೆಂಗಳೂರಿನ ಕೆಪಿಸಿಸಿ ಕಚೇರಿಗೆ ಮುತ್ತಿಗೆ ಪ್ರತಿಭಟನೆ ನಡೆಸಿದ ವೇಳೆ, ಕಾಂಗ್ರೆಸ್ಸಿನ ಗುಂಡಾ ಕಾರ್ಯಕರ್ತರು ಹರಿಹರ ಕ್ಷೇತ್ರದ ಬಿಜೆಪಿ ಶಾಸಕ ಬಿ.ಪಿ. ಹರೀಶ್ ಅವರ ಮೇಲೆ ಮೊಟ್ಟೆ ಎಸೆದು ಹಲ್ಲೆ ನಡೆಸಿದ್ದು ಮಾತ್ರವಲ್ಲದೆ, ಅವರನ್ನು ಬಲವಂತವಾಗಿ ಎಳೆದೊಯ್ಯಲು ಯತ್ನಿಸಿರುವುದು ಅತ್ಯಂತ ಖಂಡನೀಯ. ಈ ಘಟನೆಗೆ ಕಾರಣರಾದ ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ ಇಂದು ಬೆಂಗಳೂರು ನಗರ ಪೊಲೀಸ್ ಆಯುಕ್ತರಿಗೆ ದೂರು ಸಲ್ಲಿಸಿ ಆಗ್ರಹಿಸಲಾಯಿತು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಶಾಸಕರಾದ ಡಾ. ಸಿ.ಎನ್. ಅಶ್ವತ್ಥ್ ನಾರಾಯಣ್, ಎಸ್.ಆರ್. ವಿಶ್ವನಾಥ್, ಬಿ.ಪಿ. ಹರೀಶ್, ಸಿ.ಕೆ. ರಾಮಮೂರ್ತಿ, ಹರೀಶ್ ಪೂಂಜ, ಜನಾರ್ದನ್ ರೆಡ್ಡಿ, ಚನ್ನಬಸಪ್ಪ ಹಾಗೂ ಧೀರಜ್ ಮುನಿರಾಜು, ವಿಧಾನ ಪರಿಷತ್ ವಿಪಕ್ಷ ಮುಖ್ಯ ಸಚೇತಕ ಎನ್. ರವಿಕುಮಾರ್, ವಿಧಾನ ಪರಿಷತ್ ಸದಸ್ಯ ಕಿಶೋರ್ ಕುಮಾರ್ ಪುತ್ತೂರು, ಬೆಂಗಳೂರು ಉತ್ತರ ಜಿಲ್ಲಾಧ್ಯಕ್ಷ ಎಸ್. ಹರೀಶ್ ಹಾಗೂ ಬೆಂಗಳೂರು ಕೇಂದ್ರ ಜಿಲ್ಲಾಧ್ಯಕ ಸಪ್ತಗಿರಿ ಗೌಡ ಉಪಸ್ಥಿತರಿದ್ದರು.

ಪ್ರಜಾಪ್ರಭುತ್ವದಲ್ಲಿ ಹಿಂಸೆ ಮತ್ತು ಗೂಂಡಾಗಿರಿಗೆ ಅವಕಾಶವಿಲ್ಲ, ಒಪ್ಪಿಕೊಳ್ಳಲು ಸಾಧ್ಯವಿಲ್ಲ. ತಪ್ಪಿತಸ್ಥರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಬೇಕೆಂದು ಬಿಜೆಪಿ ಸದಸ್ಯರು ಪೊಲೀಸ್ ಆಯುಕ್ತರಿಗೆ ಆಗ್ರಹಿಸಿದರು.

# ಸುಳ್ಯದಲ್ಲಿ ಬೃಹತ್ ಪ್ರತಿಭಟನೆ: ಕೇಂದ್ರ ಸರ್ಕಾರ, ಪ್ರಧಾನಿ, ಶಿಕ್ಷಣ ಸಚಿವರ ವಿರುದ್ಧ ಟಿ.ಎಂ. ಶಾಹೀದ್ ತೆಕ್ಕಿಲ್ ತೀವ್ರ ವಾಗ್ದಾಳಿ

**ಸುಳ್ಯ, ಜು.22:** ಕೇಂದ್ರ ಸರ್ಕಾರದ ಜನವಿರೋಧಿ ನೀತಿಗಳು, ಸರ್ವಾಧಿಕಾರಿ ಧೋರಣೆ ಹಾಗೂ ವಿದ್ಯಾರ್ಥಿಗಳು ಮತ್ತು ವಿರೋಧ ಪಕ್ಷದ ನಾಯಕರ ಮೇಲಿನ ದಬ್ಬಾಳಿಕೆಯನ್ನು ಖಂಡಿಸಿ ಸುಳ್ಯದಲ್ಲಿ ಬುಧವಾರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಳ್ಳೂರು ರಾಧಾಕೃಷ್ಣ ಅವರ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ ನಡೆಯಿತು. ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಸೇರಿ ಕೇಂದ್ರ ಸರ್ಕಾರದ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಈ ಪ್ರತಿಭಟನಾ ಸಭೆಯನ್ನು ಉದ್ದೇಶಿಸಿ ಮುಖ್ಯ ಭಾಷಣ ಮಾಡಿದ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಹಾಗೂ ಕರ್ನಾಟಕ ರಾಜ್ಯ ಕನಿಷ್ಠ ವೇತನ ಸಲಹಾ ಮಂಡಳಿಯ ಅಧ್ಯಕ್ಷರಾದ ಟಿ.ಎಂ. ಶಾಹೀದ್ ತೆಕ್ಕಿಲ್, ಕೇಂದ್ರ ಸರ್ಕಾರ, ಪ್ರಧಾನಮಂತ್ರಿ ಹಾಗೂ ಶಿಕ್ಷಣ ಸಚಿವರ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು. ಪ್ರಧಾನಿ ನೇತೃತ್ವದ ಕೇಂದ್ರ ಸರ್ಕಾರವು ಪ್ರಜಾಪ್ರಭುತ್ವದ ಕಗ್ಗೊಲೆ ಮಾಡುತ್ತಿದೆ ಎಂದು ಆರೋಪಿಸಿದ ಅವರು, ವಿರೋಧ ಪಕ್ಷಗಳ ಧ್ವನಿಯನ್ನು ಅಡಗಿಸಲು ಪೊಲೀಸ್ ವ್ಯವಸ್ಥೆಯನ್ನು ದುರ್ಬಳಕೆ ಮಾಡಿಕೊಳ್ಳಲಾಗುತ್ತಿದೆ. ಭಾರತದಲ್ಲಿ ಈಗಾಗಲೇ ಜ್ವಲಂತ ಸಮಸ್ಯೆಗಳಿಂದ ತತ್ತರಿಸುತ್ತಿದ್ದರೂ, ಕೇಂದ್ರ ಸರ್ಕಾರವು ಕೇವಲ ಸರ್ವಾಧಿಕಾರಿ ಆಡಳಿತ ನಡೆಸುತ್ತಿದೆ" ಎಂದು ಗುಡುಗಿದರು.

ಇದೇ ವೇಳೆ ಕೇಂದ್ರ ಶಿಕ್ಷಣ ಸಚಿವರ ವಿರುದ್ಧವೂ ತೀವ್ರ ಹರಿಹಾಯ್ದ ಶಾಹೀದ್ ತೆಕ್ಕಿಲ್, ದೇಶದ ಶಿಕ್ಷಣ ವ್ಯವಸ್ಥೆ ಸಂಪೂರ್ಣವಾಗಿ ಹದಗೆಟ್ಟಿದೆ ಎಂದು ಕಳವಳ ವ್ಯಕ್ತಪಡಿಸಿದರು. ವಿದ್ಯಾರ್ಥಿಗಳ ಭವಿಷ್ಯದ ಜೊತೆ ಚೆಲ್ಲಾಟವಾಡುತ್ತಿರುವ ಕೇಂದ್ರ ಸರ್ಕಾರ ಮತ್ತು ಶಿಕ್ಷಣ ಇಲಾಖೆಯ ನಿರ್ಲಕ್ಷ್ಯವನ್ನು ಅವರು ಕಟುವಾಗಿ ಟೀಕಿಸಿದರು. "ದೆಹಲಿಯಲ್ಲಿ ನ್ಯಾಯ ಕೇಳಲು ಹೋದ ವಿದ್ಯಾರ್ಥಿಗಳ ಮೇಲೆ ದೌರ್ಜನ್ಯ ಎಸಗಿರುವುದು ಅಕ್ಷಮ್ಯ ಅಪರಾಧ.




ವಿದ್ಯಾರ್ಥಿಗಳ ಮೇಲಿನ ಈ ದಬ್ಬಾಳಿಕೆಗೆ ನೈತಿಕ ಹೊಣೆಹೊತ್ತು ಕೇಂದ್ರ ಶಿಕ್ಷಣ ಸಚಿವರು ತಕ್ಷಣವೇ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು," ಎಂದು ಅವರು ಆಗ್ರಹಿಸಿದರು.

ಶಾಂತಿಯುತವಾಗಿ ಪ್ರತಿಭಟನೆ ನಡೆಸುತ್ತಿದ್ದ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಹಾಗೂ ರಾಜ್ಯದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೇರಿದಂತೆ ಪ್ರಮುಖ ನಾಯಕರನ್ನು ದೆಹಲಿಯಲ್ಲಿ ಬಂಧಿಸಿರುವುದು ದೇಶದಲ್ಲಿನ ಅಘೋಷಿತ ತುರ್ತುಪರಿಸ್ಥಿತಿಗೆ ಸಾಕ್ಷಿಯಾಗಿದೆ. ಕೇಂದ್ರದ ಇಂತಹ ಬೆದರಿಕೆ ತಂತ್ರಗಳಿಗೆ ನಾವು ಬಗ್ಗುವುದಿಲ್ಲ, ಪ್ರಜಾಪ್ರಭುತ್ವವನ್ನು ಉಳಿಸುವ ನಿಟ್ಟಿನಲ್ಲಿ ನಮ್ಮ ಹೋರಾಟ ನಿರಂತರವಾಗಿ ಮುಂದುವರಿಯಲಿದೆ ಎಂದು ಎಚ್ಚರಿಸಿದರು.

ಈ ಬೃಹತ್ ಪ್ರತಿಭಟನೆಯಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ರಾಧಾಕೃಷ್ಣ ಬೊಳ್ಳೂರು, ಕಾಯರ್ತೋಡಿ ದೇವಸ್ಥಾನ ವ್ಯವಸ್ಥಾಪನಾ ಸಮಿತಿ ಅಧ್ಯಕ್ಷ ಎಂ. ವೆಂಕಪ್ಪ ಗೌಡ, ಗ್ಯಾರಂಟಿ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಭರತ್ ಮುಂಡೋಡಿ, ತಾಲೂಕು ಅಧ್ಯಕ್ಷ ಶಾಹುಲ್ ಹಮೀದ್ ಕುತ್ತಮೊಟ್ಟೆ, ಯುವ ಕಾಂಗ್ರೆಸ್ ಅಧ್ಯಕ್ಷ ಚೇತನ್ ಕಜೆಗದ್ದೆ, ಧಾರ್ಮಿಕ ಪರಿಷತ್ ಜಿಲ್ಲಾ ಸದಸ್ಯ ಲಕ್ಷ್ಮೀಶ ಗಬ್ಲಡ್ಕ, ನೋಟರಿ ಫವಾಝ್ ಕನಕಮಜಲು, ಮತ್ತು ಬ್ಲಾಕ್ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಭವಾನಿಶಂಕರ ಕಲ್ಮಡ್ಕ ಭಾಗವಹಿಸಿದ್ದರು.

ಅಲ್ಲದೆ, ನಗರ ಪಂಚಾಯತ್ ಮಾಜಿ ಸದಸ್ಯ ಶರೀಫ್ ಕಂಠಿ, ಇಂಟಕ್ ಅಧ್ಯಕ್ಷ ಶಾಫಿ ಕುತ್ತಮೊಟ್ಟೆ, ರಾಜೀವಿ ರೈ, ಗೀತಾ ಕೊಲ್ಚಾರ್, ಸುಂದರಿ ಸಂಪಾಜೆ, ಜಾನಿ ಕೆ ಪಿ ,ಪಿ. ಎಸ್. ಗಂಗಾಧರ, ಪ್ರಚಾರ ಸಮಿತಿಯ ಗಫೂರ್ ಕಲ್ಮಡ್ಕ, ಧೀರಾ ಕ್ರಾಸ್ತ, ಮುಜೀಬ್ ಪೈಚಾರ್, ಹನೀಫ್ ಎಸ್. ಕೆ., ಸಿದ್ದೀಕ್ ಕೊಕ್ಕೋ, ರಾಜು ಪಂಡಿತ್, ಕುರುಂಜಿ ಉಮ್ಮರ್, ರಂಜಿತ್ ರೈ ಮೇನಾಲ, ಪ್ರಸಾದ್ ರೈ ಮೇನಾಲ, ಸತ್ಯಕುಮಾರ್ ಅಡಿಂಜ, ಧನುಷ್ ಕುಕ್ಕೆಟ್ಟಿ, ಮನ್ಸೂರ್ ಮೆಟ್ರೋ, ಮಹೇಶ್ ಬೆಳ್ಳಾರ್ಕರ್, ಜುನೈದ್ ಅಡ್ಕಾರ್, ಝುಬೈರ್ ಅರಂತೋಡ್, ರಾಧಾ ಪರಿವಾರಕಾನ, ನಂದರಾಜ ಸಂಕೇಶ, ಶ್ರೀಹರಿ ಕುಕ್ಕುಡೇಲು ಹಾಗೂ ನೂರಾರು ಕಾಂಗ್ರೆಸ್ ನಾಯಕರು ಮತ್ತು ಕಾರ್ಯಕರ್ತರು ಈ ಪ್ರತಿಭಟನೆಯಲ್ಲಿ ಸಕ್ರಿಯವಾಗಿ ಪಾಲ್ಗೊಂಡು ತಮ್ಮ ಆಕ್ರೋಶ ವ್ಯಕ್ತಪಡಿಸಿದರು.

# ಪಾದಚಾರಿ ಮಾರ್ಗದಲ್ಲಿ ವಾಹನ ಚಲಾಯಿಸಿದರೆ 5 ಸಾವಿರ ರೂ. ದಂಡ ಹೇರುವ ಚಿಂತನೆ

## ಸಾರಿಗೆ ಸಚಿವರಿಗೆ ಸಚಿವ ಕೃಷ್ಣ ಬೈರೇಗೌಡ ಒತ್ತಾಯ

**ಬೆಂಗಳೂರು, ಜು.22:** ಪಾದಚಾರಿ ಮಾರ್ಗದಲ್ಲಿ ದ್ವಿಚಕ್ರವಾಹನ ಚಲಾಯಿಸುವವರಿಗೆ ದಂಡದ ಮೊತ್ತವನ್ನು ರೂ.5000ಕ್ಕೆ ಹೆಚ್ಚಿಸುವಂತೆ ಒತ್ತಾಯಿಸಿ ಸಚಿವ ಕೃಷ್ಣ ಬೈರೇಗೌಡ ಅವರು ಸಾರಿಗೆ ಸಚಿವರಿಗೆ ಪತ್ರ ಬರೆದು ಒತ್ತಾಯಿಸಿದ್ದಾರೆ.

ಬೆಂಗಳೂರು ನಗರ ಸಂಚಾರ ವಿಭಾಗದ ಅಧಿಕಾರಿಗಳ ಜೊತೆ ಸಭೆ ನಡೆಸಿದ ಅವರು, ಸಾರ್ವಜನಿಕರ ನಡೆಯುವ ಹಕ್ಕನ್ನು ಖಚಿತಪಡಿಸುವ ಸಲುವಾಗಿ ಸುಪ್ರೀಂ ಕೋರ್ಟ್ ಸೂಚನೆಯ ಮೇರೆಗೆ ನಗರದಲ್ಲಿ ಪಾದಚಾರಿ ಮಾರ್ಗ ಒತ್ತುವರಿ ತೆರವು ಕಾರ್ಯಾಚರಣೆ ಕೈಗೊಳ್ಳಲಾಗಿದೆ. ಐದೂ ಪಾಲಿಕೆಗಳ ವ್ಯಾಪ್ತಿಯಲ್ಲಿ ಒತ್ತುವರಿ ತೆರವು ಕೆಲಸಕ್ಕೆ ಸಾರ್ವಜನಿಕರಿಂದಲೂ ಮೆಚ್ಚುಗೆ ವ್ಯಕ್ತವಾಗುತ್ತಿದೆ. ಆದರೆ, ಹೀಗೆ ಬೀದಿಬದಿ ವ್ಯಾಪಾರಿಗಳಿಂದ ತೆರವಾದ ಜಾಗದಲ್ಲಿ ಯಾವುದೇ ರೀತಿಯ ಮೋಟಾರು ವಾಹನಗಳನ್ನು ಚಲಾಯಿಸುವುದು ಸರಿಯಲ್ಲ. ಇಂತಹ ಕೃತ್ಯಗಳನ್ನು ಸಹಿಸಿಕೊಳ್ಳುವುದೂ ಸಾಧ್ಯವಿಲ್ಲ ಎಂದು ಬೇಸರ ಹೊರಹಾಕಿದರು.

ವಾಹನ ಸವಾರರು ಯಾವುದೇ ಭಯ ಇಲ್ಲದೆ ಒತ್ತುವರಿ ತೆರವಾಗಿರುವ ಪಾದಾಚಾರಿ ಮಾರ್ಗದಲ್ಲಿ ಚಲಿಸುತ್ತಿರುವುದು ನನ್ನ ಗಮನಕ್ಕೆ ಬಂದಿದೆ. ಈ ಬಗ್ಗೆ ಹಲವರು ಈಗಾಗಲೇ ನನಗೆ ದೂರು ನೀಡಿದ್ದಾರೆ. ಪಾದಾಚಾರಿ ಮಾರ್ಗದಲ್ಲಿ ವಾಹನ ಚಲಾಯಿಸುವಾಗ ಅಪಘಾತಗಳಾದರೆ ಯಾರು ಹೊಣೆ? ಹೀಗಾಗಿ ಟ್ರಾಫಿಕ್ ಪೊಲೀಸರು ಇಂತಹ ಕೃತ್ಯಗಳಲ್ಲಿ ತೊಡಗುವವರ ವಿರುದ್ಧ ಕಠಿಣ ಕಾನೂನು ಕ್ರಮಗಳನ್ನು ಜರುಗಿಸಬೇಕು. ಅಲ್ಲದೆ, ದಂಡದ ಮೊತ್ತ ಅಧಿಕವಾದರೆ ಮಾತ್ರ ಇಂತಹ ಅಪರಾಧಗಳನ್ನು ತಡೆಯಲು ಸಾಧ್ಯ. ಹೀಗಾಗಿ ಪಾದಾಚಾರಿ ಮಾರ್ಗದಲ್ಲಿ ವಾಹನ ಚಲಾಯಿಸಿದರೆ ಪ್ರಸ್ತುತ ಚಾಲ್ತಿಯಲ್ಲಿರುವ ರೂ.500 ದಂಡವನ್ನು ರೂ.5000ಕ್ಕೆ ಏರಿಸುವಂತೆ



ಸಾರಿಗೆ ಇಲಾಖೆಗೆ ಪತ್ರ ಬರೆದು ಒತ್ತಾಯಿಸುತ್ತೇನೆ ಎಂದು ಸಭೆಯಲ್ಲಿ ಸಚಿವರು ತಿಳಿಸಿದರು.

**ಜಾಗೃತಿ ಮೂಡಿಸದೆ ಸಮಸ್ಯೆ ನಿವಾರಣೆ ಅಸಾಧ್ಯ**

ಆರ್ಟಿಲಿಯರ್ ಹಾಗೂ ಸಬ್ ಆರ್ಟಿಲಿಯರ್ ರಸ್ತೆಗಳಲ್ಲಿ ವಾಹನ ನಿಲುಗಡೆಗೆ ಅವಕಾಶ ನೀಡಲೇಬಾರದು ಎಂಬುದು ನನ್ನ ಅಭಿಪ್ರಾಯ. ಈ ನಿಯಮವನ್ನು ಜಾರಿಗೊಳಿಸುವುದು ವಾಸ್ತವದಲ್ಲಿ ಕಷ್ಟಸಾಧ್ಯ. ಆದರೆ, ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳನ್ನಾದರೂ ಪಾಲಿಸಿ ಎಂದು ಅಧಿಕಾರಿಗಳನ್ನು ಒತ್ತಾಯಿಸಿದರು.

ಜನರಿಗೆ ಅರಿವು ಮೂಡಿಸದೆ ಟ್ರಾಫಿಕ್ ಸಮಸ್ಯೆ ನಿವಾರಣೆಗೆ ಲಕ್ಷಾಂತರ ಕೋಟಿ ಹಣ ಖರ್ಚು ಮಾಡಿದರೂ ಯಾವುದೇ ಪ್ರಯೋಜನವಾಗುವುದಿಲ್ಲ. ಹೀಗಾಗಿ ವಾಹನ ನಿಲುಗಡೆ ನಿಯಮಗಳ ಬಗ್ಗೆ ಮೊದಲು ಜನರಲ್ಲಿ ಅರಿವು ಮೂಡಿಸಿ. ನಗರದ ಮುಖ್ಯರಸ್ತೆಗಳಲ್ಲಿ ಪರ್ಯಾಯ ಪಾರ್ಕಿಂಗ್ ವ್ಯವಸ್ಥೆಯನ್ನು ಕಡ್ಡಾಯವಾಗಿ ಪಾಲಿಸಿ ಎಂದು ಸಚಿವ ಕೃಷ್ಣಬೈರೇಗೌಡ ಸಭೆಯಲ್ಲಿ ತಾಕೀತು ಮಾಡಿದರು. ಸಭೆಯಲ್ಲಿ ಸಂಚಾರಿ ಪೊಲೀಸ್ ವಿಭಾಗದ ಜಂಟಿ ಪೊಲೀಸ್ ಆಯುಕ್ತ ಕಾರ್ತಿಕ್ ರೆಡ್ಡಿ, ಅಪರ ಆಯುಕ್ತೆ ಲತಾ ಆರ್, ಲೋಖಂಡೆ ಸ್ನೇಹಲ್ ಸುಧಾಕರ್, ಕವಿತಾ ರಾಜಾರಾಂ, ವೆಂಕಟಾಚಲಪತಿ, ನವೀನ್‌ಕುಮಾರ್ ರಾಜು, ಮುಖ್ಯ ಅಭಿಯಂತರರು, ಸಂಚಾರಿ ಪೊಲೀಸ್ ವಿಭಾಗದ ಅಧಿಕಾರಿಗಳು ಮತ್ತಿತರರು ಉಪಸ್ಥಿತರಿದ್ದರು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ರಾಜ್ಯದಲ್ಲಿ ಬರ ಪರಿಸ್ಥಿತಿ ಗಂಭೀರ: ವಿಭಾಗವಾರು ಪರಿಶೀಲನೆಗೆ ಕ್ರಮ- ಡಿಸಿಎಂ ಪರಮೇಶ್ವರ್

**ಬೆಂಗಳೂರು, ಜು.22:** ರಾಜ್ಯದಲ್ಲಿ ಬರ ಪರಿಸ್ಥಿತಿ ಗಂಭೀರವಾಗಿದ್ದು, ವಿಭಾಗವಾರು ಸಭೆ ನಡೆಸಿ, ಪರಿಸ್ಥಿತಿಯನ್ನು ಅವಲೋಕಿಸಲಾಗುತ್ತಿದೆ ಎಂದು ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಅವರು, ಇಂದು ಚಿಕ್ಕಬಳ್ಳಾಪುರ ಮತ್ತು ಕೋಲಾರ ಜಿಲ್ಲೆಗಳಲ್ಲಿ ಬರ ಪರಿಸ್ಥಿತಿಯನ್ನು ಅವಲೋಕಿಸಲಾಗುವುದು. ಅಲ್ಲದೇ ಜು.25ರಂದು, ಚಿತ್ರದುರ್ಗದಲ್ಲಿ ಮುಖ್ಯಮಂತ್ರಿ ಹಾಗೂ ತಮ್ಮ ನೇತೃತ್ವದಲ್ಲಿ ಬೆಂಗಳೂರು ವಿಭಾಗಕ್ಕೆ ಸಂಬಂಧಿಸಿದಂತೆ, ಬರ ಪರಿಸ್ಥಿತಿಯ ಪರಿಶೀಲನೆ ನಡೆಸಲಾಗುವುದು ಎಂದು ಹೇಳಿದರು.

ರಾಜ್ಯಾದ್ಯಂತ ಮಳೆಯ ಕೊರತೆಯಿಂದಾಗಿ ಬರ ಪರಿಸ್ಥಿತಿ ಎದುರಾಗುವ ಸಾಧ್ಯತೆಯಿದೆ. ಮುನ್ನೆಚ್ಚರಿಕೆ ಕ್ರಮವಾಗಿ ಬರ ಪರಿಸ್ಥಿತಿ ನಿರ್ವಹಣೆಗೆ ಸಮರ್ಪಕ ಅನುದಾನ ಹಂಚಿಕೆ ಹಾಗೂ ಕೆಲವು ನಿಯಮಗಳನ್ನು ಸಡಿಲಗೊಳಿಸುವಂತೆ, ಕೇಂದ್ರ ಸರ್ಕಾರಕ್ಕೆ, ಮುಖ್ಯಮಂತ್ರಿ ಮತ್ತು ತಾವು ಸಹ ಪತ್ರ ಬರೆದು ಮನವಿ ಮಾಡಿರುವುದಾಗಿ ತಿಳಿಸಿದರು.



**ಆ.15ರ ನಂತರ ಬರ ಘೋಷಣೆಗೆ ಚಿಂತನೆ**

ಬರ ಘೋಷಣೆ ಮಾಡಲು ಕೇಂದ್ರ ಸರ್ಕಾರ ಹತ್ತು ನಿಯಮಗಳನ್ನು ಮಾಡಿದೆ. ಅದರ ಪ್ರಕಾರ ನಡೆಯಬೇಕು. ಅದನ್ನು ಮೀರಿ ನಡೆಯಲು ಆಗುವುದಿಲ್ಲ. ಪ್ರತಿ ತಾಲ್ಲೂಕಿನ ಮಾಹಿತಿಯನ್ನು ಪ್ರತಿದಿನ ಪಡೆಯುತ್ತಿದ್ದೇವೆ. ವಸ್ತುಸ್ಥಿತಿ ವರದಿ ಆಗಬೇಕು. ಆ.15ರ ನಂತರ ಬರ ಘೋಷಣೆ ಬಗ್ಗೆ ಯೋಚಿಸಲಾಗುವುದು ಎಂದು ಡಾ.ಜಿ. ಪರಮೇಶ್ವರ್ ತಿಳಿಸಿದರು.

ಅಷ್ಟೇ ಅಲ್ಲದೇ, ಆಂಧ್ರ, ತಮಿಳುನಾಡು, ತೆಲಂಗಾಣ, ಮಹಾರಾಷ್ಟ್ರ ಸೇರಿದಂತೆ ಅನೇಕ ರಾಜ್ಯಗಳಲ್ಲಿ ಬರ ಪರಿಸ್ಥಿತಿ ಆವರಿಸಿದೆ. ಹಾಗಾಗಿ ಇದನ್ನು ರಾಷ್ಟ್ರೀಯ ವಿಪತ್ತು ಎಂದ ಘೋಷಿಸಲು ಪ್ರಧಾನಿ ಅವರನ್ನು ಕೋರಿರುವುದಾಗಿಯೂ ತಿಳಿಸಿದರು. ರಾಜ್ಯಕ್ಕೆ ಮತ್ತೊಂದು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಕುರಿತು ಪ್ರತಿಕ್ರಿಯಿಸಿ,ಡಾ. ಜಿ. ಪರಮೇಶ್ವರ್, ತುಮಕೂರಿನಲ್ಲೇ ಈ ವಿಮಾನ ನಿಲ್ದಾಣ ಸ್ಥಾಪನೆಯಾಗಬೇಕೆಂದು ಕಳೆದ 25 ವರ್ಷಗಳಿಂದಲೂ ಮನವಿ ಮಾಡುತ್ತಲೇ ಬಂದಿದ್ದೇವೆ. ಇದರಿಂದ ತುಮಕೂರಿನ ಅಭಿವೃದ್ಧಿ ಜೊತೆಗೆ 20 ಜಿಲ್ಲೆಗಳಿಗೂ ಇದು ಅನುಕೂಲಕರ ವಾಗಲಿದೆ ಎಂದು ಹೇಳಿದರು.



ನವದೆಹಲಿಯಲ್ಲಿ ಆಯೋಜಿಸಿದ್ದ ಪ್ರತಿಪಕ್ಷಗಳ ನಾಯಕರು ಸಭೆಯಲ್ಲಿ ಸಚಿವ ಜಾರಕಿಹೊಳಿ ಅವರು ಎಐಸಿಸಿ ಅಧ್ಯಕ್ಷ ಖರ್ಗೆಯವರಿಗೆ ಜನ್ಮದಿನದ ಶುಭಾಶಯವನ್ನು ಕೋರಿದರು.

# ಪ್ರಸ್ತಾವಿತ ಪುಣೆ–ಬೆಂಗಳೂರು ಗ್ರೀನ್‌ಫೀಲ್ಡ್ ಎಕ್ಸ್‌ಪ್ರೆಸ್‌ವೇ ಯೋಜನೆಗೆ ತಕ್ಷಣ ಅನುಮೋದನೆ ನೀಡಿ

**ಕೇಂದ್ರ ಸಚಿವ ನಿತಿನ್ ಗಡ್ಕರಿಗೆ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಮನವಿ**

**ಯೋಜನೆಯಿಂದ ಕೈಗಾರಿಕೆ, ಕೃಷಿ ಉತ್ಪನ್ನಗಳ ಸಾಗಣೆ, ಲಾಜಿಸ್ಟಿಕ್ಸ್ ವ್ಯವಸ್ಥೆಗೆ ಬಲ**



**ನವದೆಹಲಿ, ಜು.22:** ಉತ್ತರ ಕರ್ನಾಟಕದ ಸಾಮಾಜಿಕ ಹಾಗೂ ಆರ್ಥಿಕ ಅಭಿವೃದ್ಧಿಗೆ ಮಹತ್ವದ ಹೆಜ್ಜೆಯಾಗಿರುವ ಪ್ರಸ್ತಾವಿತ ಪುಣೆ–ಬೆಂಗಳೂರು 6/8 ಲೇನ್ ನಿಯಂತ್ರಿತ ಗ್ರೀನ್‌ಫೀಲ್ಡ್ ಎಕ್ಸ್‌ಪ್ರೆಸ್‌ವೇ ಯೋಜನೆಗೆ ತಕ್ಷಣ ಅನುಮೋದನೆ ನೀಡಿ ಆದ್ಯತೆ ನೀಡುವಂತೆ ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರಿಗೆ ದಾವಣಗೆರೆ ಲೋಕಸಭಾ ಕ್ಷೇತ್ರದ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ ಮನವಿ ಮಾಡಿದ್ದಾರೆ.

ಕೇಂದ್ರ ಸಚಿವರನ್ನು ನಿಯೋಗದೊಂದಿಗೆ ಭೇಟಿ ಮಾಡಿದ ಡಾ.ಪ್ರಭಾ ಮಲ್ಲಿಕಾರ್ಜುನ್, ಭಾರತಮಾಲಾ ಪರಿಯೋಜನೆ – ಹಂತ 2ರ ಅಡಿಯಲ್ಲಿ ಪ್ರಸ್ತಾವಿತವಾಗಿರುವ ಈ ಎಕ್ಸ್‌ಪ್ರೆಸ್‌ವೇ ಒಟ್ಟು 702.43 ಕಿಲೋಮೀಟರ್ ಉದ್ದವಿದ್ದು, ಅದರ ಪೈಕಿ 496.32 ಕಿಲೋಮೀಟರ್ ಕರ್ನಾಟಕದಲ್ಲಿ ಹಾದು ಹೋಗಲಿದೆ. ಪ್ರಸ್ತುತ ರಾಷ್ಟ್ರೀಯ ಹೆದ್ದಾರಿ–48ರಲ್ಲಿ ವಾಹನ ಸಂಚಾರದ ಒತ್ತಡ ನಿರಂತರವಾಗಿ ಹೆಚ್ಚುತ್ತಿದ್ದು, ಭವಿಷ್ಯದ ಸಾರಿಗೆ ಅಗತ್ಯಗಳನ್ನು ಗಮನದಲ್ಲಿಟ್ಟುಕೊಂಡು ಈ ಹೊಸ ಗ್ರೀನ್‌ಫೀಲ್ಡ್ ಮಾರ್ಗ ಅತ್ಯಗತ್ಯವಾಗಿದೆ ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ಹಾಗೂ ಈ ಯೋಜನೆಯಿಂದ ಉತ್ತರ ಕರ್ನಾಟಕದ ಕೈಗಾರಿಕೆಗಳು, ಕೃಷಿ ಉತ್ಪನ್ನಗಳ ಸಾಗಣೆ, ಲಾಜಿಸ್ಟಿಕ್ಸ್ ವ್ಯವಸ್ಥೆ ಮತ್ತಷ್ಟು ಬಲಗೊಳ್ಳಲಿದ್ದು, ಮುಂಬೈ ಹಾಗೂ ಬೆಂಗಳೂರಿನ ಪ್ರಮುಖ ಮಾರುಕಟ್ಟೆಗಳಿಗೆ ವೇಗದ ಸಂಪರ್ಕ ಕಲ್ಪಿಸುವ ಮೂಲಕ ಸಾರಿಗೆ ವೆಚ್ಚ ಮತ್ತು ಸಮಯ ಕಡಿಮೆಯಾಗಲಿದೆ ಎಂದು ತಿಳಿಸಿದ್ದಾರೆ.

ಯುನೆಸ್ಕೋ ವಿಶ್ವ ಪರಂಪರೆ ತಾಣವಾದ ಹಂಪಿ ಸೇರಿಹಲವು ಐತಿಹಾಸಿಕ ಪ್ರವಾಸಿ ತಾಣಗಳಿಗೆ ಸುಲಭ ಸಂಪರ್ಕ ದೊರೆಯುವುದರಿಂದ ಪ್ರವಾಸೋದ್ಯಮಕ್ಕೂ ಉತ್ತೇಜನ ಸಿಗಲಿದೆ. ಜೊತೆಗೆ ಉದ್ಯೋಗ ಸೃಷ್ಟಿ, ಹೂಡಿಕೆ ಹೆಚ್ಚಳ ಹಾಗೂ ಉತ್ತರ ಕರ್ನಾಟಕದ ಕೈಗಾರಿಕಾ ಬೆಳವಣಿಗೆಗೆ ಯೋಜನೆ ಪೂರಕವಾಗಲಿದೆ ಎಂದು ಉಲ್ಲೇಖಿಸಿದ್ದಾರೆ. ಯೋಜನೆಯ ಕರಡು ವಿವರವಾದ ಯೋಜನಾ ವರದಿ ಸಿದ್ಧಗೊಂಡಿದ್ದು, ಪರಿಸರ ಅನುಮೋದನೆಗೆ ಸಂಬಂಧಿಸಿದ ಟರ್ಮ್ಸ್ ಆಫ್ ರೆಫರೆನ್ಸ್ ಕೂಡ ಅನುಮೋದನೆ ಪಡೆದಿದೆ. ಆದರೆ ಯೋಜನೆಗೆ ಅಗತ್ಯ ಆದ್ಯತೆ ದೊರೆಯದಿರುವುದು ಅಭಿವೃದ್ಧಿಯ ದೃಷ್ಟಿಯಿಂದ ಆತಂಕಕಾರಿ ಎಂದು ತಿಳಿಸಿದ್ದಾರೆ. ಹೀಗಾಗಿ, ಸಚಿವಾಲಯದ ಅಲೈನ್‌ಮೆಂಟ್ ಅಪ್ರೂವಲ್ ಕಮಿಟಿ (ಎಎಸಿ) ಮೂಲಕ ಅಂತಿಮ ಮಾರ್ಗಕ್ಕೆ ಶೀಘ್ರ ಅನುಮೋದನೆ ನೀಡಿ, ಬಿಒಟಿ/ಎಚ್‌ಎಎಂ ಮಾದರಿಯಲ್ಲಿ ಟೆಂಡರ್ ಪ್ರಕ್ರಿಯೆಯನ್ನು ಆದ್ಯತೆಯ ಮೇರೆಗೆ ಆರಂಭಿಸಲು ಅಗತ್ಯ ನಿರ್ದೇಶನ ನೀಡುವಂತೆ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ ಮನವಿ ಮಾಡಿದ್ದಾರೆ.ಈ ಯೋಜನೆ ಉತ್ತರ ಕರ್ನಾಟಕದ ಅಭಿವೃದ್ಧಿಗೆ ಜೀವನಾಡಿಯಾಗಲಿದ್ದು, ಕೇಂದ್ರ ಸರ್ಕಾರ ತ್ವರಿತ ಕ್ರಮ ಕೈಗೊಳ್ಳುವ ವಿಶ್ವಾಸವಿದೆ ಎಂದು ತಿಳಿಸಿದ್ದಾರೆ.

# ಸೌಜನ್ಯ ಅತ್ಯಾಚಾರ–ಕೊಲೆ ಪ್ರಕರಣ; ಮರು ತನಿಖೆಗೆ ಸಮ್ಮತಿ

**ತನಿಖೆ ಸ್ವರೂಪದ ಬಗ್ಗೆ ಆದೇಶ ಕಾಯ್ದಿರಿಸಿದ ಸುಪ್ರೀಂಕೋರ್ಟ್**



**ನವದೆಹಲಿ, ಜು.22:** ಧರ್ಮಸ್ಥಳದ ಸೌಜನ್ಯ ಅತ್ಯಾಚಾರ ಮತ್ತು ಕೊಲೆ ಪ್ರಕರಣದ ಮರು ತನಿಖೆಗೆ ಸುಪ್ರೀಂ ಕೋರ್ಟ್ ತಾತ್ವಿಕ ಒಪ್ಪಿಗೆ ಸೂಚಿಸಿದ್ದು, ಯಾವ ರೀತಿಯ ತನಿಖೆ ನಡೆಸಬೇಕು ಎಂಬ ಕುರಿತು ಅಂತಿಮ ಆದೇಶವನ್ನು ಕಾಯ್ದಿರಿಸಿದೆ. ನ್ಯಾ. ಸಂಜಯ್ ಕುಮಾರ್ ನೇತೃತ್ವದ ದ್ವಿಸದಸ್ಯ ನ್ಯಾಯಪೀಠದಲ್ಲಿ ಸೌಜನ್ಯ ತಾಯಿ ಕುಸುವಮತಿಗೌಡ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಯಿತು. ವಿಚಾರಣೆ ವೇಳೆ ತನಿಖೆಯ ಗುಣಮಟ್ಟದ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ನ್ಯಾಯಪೀಠ, ಪ್ರಕರಣ ನಡೆದು 14 ವರ್ಷಗಳಾದರೂ ಸಮರ್ಪಕ ತನಿಖೆಯಾಗಿಲ್ಲ ಎಂದು ಕಟುವಾಗಿ ಹೇಳಿತು. ಪ್ರಕರಣದ ಸಾಕ್ಷ್ಯಗಳಿಗೆ ಭದ್ರತೆ ಒದಗಿಸುವಂತೆ ಸೂಚಿಸಿದ ನ್ಯಾಯಲಯ ಅಂತಿಮ ಆದೇಶ ನೀಡಿದ ಬಳಿಕವೂ ನಾವು ನಿರಂತರವಾಗಿ ಮಧ್ಯಂತರ ತನಿಖಾ ವರದಿಯನ್ನೂ ಕೇಳುವುದಾಗಿ ತಿಳಿಸಿತು.

ಸೌಜನ್ಯ ತಾಯಿ ಕುಸುವ ಮತಿಗೌಡ ಪರವಾಗಿ ನಿವೃತ್ತ ನ್ಯಾಯಾಧೀಶರ ನೇತೃತ್ವದಲ್ಲಿ ಮರು ತನಿಖೆ ನಡೆಸುವಂತೆ ಮನವಿ ಮಾಡಲಾಯಿತು. ರಾಜ್ಯ ಸರ್ಕಾರವೂ ಎಸ್‌ಐಟಿ ರಚಿಸಿ ತನಿಖೆ ನಡೆಸಲು ಸಿದ್ಧವಿರುವುದಾಗಿ ನ್ಯಾಯಾಲಯಕ್ಕೆ ತಿಳಿಸಿತು. ಈ ಹಿನ್ನೆಲೆಯಲ್ಲಿ ಎಸ್‌ಐಟಿ ಮೂಲಕವೇ ತನಿಖೆ ನಡೆಯಬೇಕೇ ಅಥವಾ ಬೇರೆ ಯಾವುದೇ ಸ್ವರೂಪದ ತನಿಖೆಗೆ ಆದೇಶಿಸಬೇಕೇ ಎಂಬುದನ್ನು ಸುಪ್ರೀಂ ಕೋರ್ಟ್ ತನ್ನ ಅಂತಿಮ ಆದೇಶದಲ್ಲಿ ಸ್ಪಷ್ಟಪಡಿಸಲಿದೆ. ತನಿಖೆಯ ವಿಧಾನ ಹಾಗೂ ಮುಂದಿನ ಪ್ರಕ್ರಿಯೆಗೆ ಸಂಬಂಧಿಸಿದಂತೆ ವಿಸ್ತೃತ ನಿರ್ದೇಶನಗಳನ್ನು ಕೂಡ ನೀಡುವ ಸಾಧ್ಯತೆ ಇದೆ.

**ಸಿಬಿಐಗೆ ಸುಪ್ರೀಂ ಕೋರ್ಟ್ ತರಾಟೆ**

ವಿಚಾರಣೆ ವೇಳೆ ಸಿಬಿಐ ತನಿಖೆಯ ಮೇಲೂ ನ್ಯಾಯಪೀಠ ತೀವ್ರ ಅಸಮಾಧಾನ ವ್ಯಕ್ತಪಡಿಸಿತು. ಪ್ರಕರಣದ ತನಿಖಾಧಿ ಕಾರಿಯೇ ಘಟನಾ ಸ್ಥಳಕ್ಕೆ ಭೇಟಿ ನೀಡಿಲ್ಲ ಎಂಬ ಅಂಶವನ್ನು ನ್ಯಾಯಾಲಯ ಗಂಭೀರವಾಗಿ ಪರಿಗಣಿಸಿತು.

ಇದಲ್ಲದೆ, ಕೆಳಹಂತದ ನ್ಯಾಯಾಲಯದಲ್ಲಿ ಇನ್ನೂ ಕೆಲ ಆರೋಪಿಗಳ ವಿರುದ್ಧ ತನಿಖೆ ನಡೆಸಬೇಕಿದೆ ಎಂದು ಸಿಬಿಐ ಈ ಹಿಂದೆ ಹೇಳಿದ್ದರೂ, ಈಗ ಸಿಬ್ಬಂದಿ ಕೊರತೆ ಮತ್ತು ಹಣಕಾಸಿನ ಅಭಾವವನ್ನು ಕಾರಣವಾಗಿ ಮುಂದಿಡುತ್ತಿರುವುದನ್ನು ನ್ಯಾಯಪೀಠ ಪ್ರಶ್ನಿಸಿತು. ಈ ರೀತಿಯ ವಾದವನ್ನು ಒಪ್ಪಲು ಸಾಧ್ಯವಿಲ್ಲ ಎಂದು ಸಿಬಿಐಗೆ ತೀಕ್ಷ್ಣ ತರಾಟೆ ತೆಗೆದುಕೊಂಡಿತು. ಪ್ರಕರಣದಲ್ಲಿ ಸಮರ್ಪಕ ತನಿಖೆ ನಡೆದಿಲ್ಲ ಎಂಬ ಅಭಿಪ್ರಾಯ ವ್ಯಕ್ತಪಡಿಸಿದ ನ್ಯಾಯಪೀಠ, ಸಿಐಡಿ ವರದಿಯನ್ನು ಭಾಷಾಂತರಿಸ ಲಾಗಿದೆ ಎಂಬ ಅಂಶವನ್ನೂ ವಿಚಾರಣೆ ವೇಳೆ ಪ್ರಸ್ತಾಪಿಸಿತು.

# ಕಾಂಗ್ರೆಸ್ ಕಾರ್ಯಕರ್ತರಿಂದ ತಿರುಗೇಟು: ಮೊಟ್ಟೆ ಎಸೆತ ಸಮರ್ಥಿಸಿದ ಹರಿಪ್ರಸಾದ್



**ಬೆಂಗಳೂರು, ಜು.22:** ಬಿಜೆಪಿ ಶಾಸಕರ ಮೇಲೆ ಮೊಟ್ಟೆ ಎಸೆದ ಪ್ರಕರಣಕ್ಕೆ ಪ್ರತಿಕ್ರಿಯಿಸಿರುವ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್, ಮೊಟ್ಟೆ ಸಂಸ್ಕೃತಿ ಶುರುವಾಗಿದ್ದು ಎಲ್ಲಿಂದ, ಅವರ ಸಂಸ್ಕೃತಿಯನ್ನು ಕಾರ್ಯಕರ್ತರು ಅವರಿಗೆ ತೋರಿಸಿದ್ದಾರೆ. ಆತ್ಮರಕ್ಷಣೆಗಾಗಿ ಕಾರ್ಯಕರ್ತರು ಮೊಟ್ಟೆ ಹೊಡೆದಿದ್ದಾರೆ ಎಂದು ಸಮರ್ಥಿಸಿಕೊಂಡಿದ್ದಾರೆ.

ನೀಟ್ ಪರೀಕ್ಷೆ ಅಕ್ರಮ ವಿಚಾರಕ್ಕೆ ಸಂಬಂಧಿಸಿದಂತೆ ರಾಜಧಾನಿ ಬೆಂಗಳೂರಿನಲ್ಲಿ ಕಾಂಗ್ರೆಸ್ ಹಾಗೂ ಬಿಜೆಪಿ ಕಾರ್ಯಕರ್ತರ ನಡುವಿನ ಕಾದಾಟ ತೀವ್ರ ಸ್ವರೂಪ ಪಡೆದುಕೊಂಡಿದ್ದು, ಭಾರಿ ಹೈಡ್ರಾಮಾವೇ ನಡೆದಿದೆ. ಕಾಂಗ್ರೆಸ್ ಕಾರ್ಯಕರ್ತರು ಬಿಜೆಪಿ ಕಚೇರಿಗೆ ಮುತ್ತಿಗೆ ಹಾಕಲು ಯತ್ನಿಸಿದ ಬೆನ್ನಲ್ಲೇ, ಬಿಜೆಪಿ ನಾಯಕರು ಕೆಪಿಸಿಸಿ ಕಚೇರಿಗೆ ಮುತ್ತಿಗೆ ಹಾಕಲು ಯತ್ನಿಸಿದರು. ಈ ವೇಳೆ ಎರಡೂ ಪಕ್ಷಗಳ ಕಾರ್ಯಕರ್ತರು ಮುಖಾಮುಖಿಯಾಗಿ ಉದ್ವಿಗ್ನ ವಾತಾವರಣ ನಿರ್ಮಾಣವಾಯಿತು.

ಈ ಪ್ರತಿಭಟನೆಯ ನಡುವೆ ಬಿಜೆಪಿ ಶಾಸಕ ಬಿ.ಪಿ. ಹರೀಶ್ ಅವರು ಕೆಪಿಸಿಸಿ ಕಚೇರಿ ಮುಂಭಾಗಕ್ಕೆ ಆಗಮಿಸುತ್ತಿದ್ದಂತೆ ಕಾಂಗ್ರೆಸ್ ಕಾರ್ಯಕರ್ತರು ಅವರ ಮೇಲೆ ಮೊಟ್ಟೆ ಎಸೆದು ಆಕ್ರೋಶ ಹೊರಹಾಕಿದ್ದಾರೆ. ಶಾಸಕರ ವಿರುದ್ಧ ಧಿಕ್ಕಾರ ಕೂಗಿದ ಕಾಂಗ್ರೆಸ್ ಕಾರ್ಯಕರ್ತರು, ಬಿ.ಪಿ. ಹರೀಶ್ ಅವರನ್ನು ಅಲ್ಲಿಂದ ವಾಪಸ್ ಕಳುಹಿಸಿದ್ದಾರೆ. ಸ್ಥಳದಲ್ಲಿ ಬಿಗುವಿನ ವಾತಾವರಣ ಸೃಷ್ಟಿಯಾದ ಹಿನ್ನೆಲೆಯಲ್ಲಿ ಪೊಲೀಸರು ಪರಿಸ್ಥಿತಿಯನ್ನು ನಿಯಂತ್ರಿಸಲು ಹರಸಾಹಸ ಪಡಬೇಕಾಯಿತು.

ತಮ್ಮ ಶಾಸಕರ ಮೇಲಿನ ಮೊಟ್ಟೆ ಎಸೆತ ಹಾಗೂ ಕಾಂಗ್ರೆಸ್ ಕಾರ್ಯಕರ್ತರ ನಡವಳಿಕೆಯನ್ನು ಖಂಡಿಸಿದ ಬಿಜೆಪಿ ನಾಯಕರು ಕಾಂಗ್ರೆಸ್ ವಿರುದ್ಧ ಭಾರಿ ಆಕ್ರೋಶ ವ್ಯಕ್ತಪಡಿಸಿದರು.

# ತ್ಯಾಜ್ಯ ನಿರ್ವಹಣೆಗೆ ದಾವಣಗೆರೆ ಮಾದರಿ ಜಾರಿಯಾಗಲಿ ಸಚಿವ ಯತೀಂದ್ರ ಸಿದ್ದರಾಮಯ್ಯ ಹೇಳಿಕೆ



**ಬೆಂಗಳೂರು, ಜು.22:** ರಾಜ್ಯದ ಪ್ರತಿಯೊಂದು ನಗರ ಪ್ರದೇಶದಲ್ಲೂ ತ್ಯಾಜ್ಯ ನಿರ್ವಹಣೆಯನ್ನು ವೈಜ್ಞಾನಿಕವಾಗಿ ಕೈಗೊಳ್ಳಲು 'ದಾವಣಗೆರೆ ಮಾದರಿ' ಯನ್ನು ಅನುಸರಿಸಿ, ಮನೆ ಮನೆಗಳಲ್ಲೇ ಶೇಕಡಾ 100ರಷ್ಟು ಹಸಿ ಮತ್ತು ಒಣ ಕಸವನ್ನು ಪ್ರತ್ಯೇಕವಾಗಿ ವಿಂಗಡಿಸುವುದನ್ನು ಕಡ್ಡಾಯಗೊಳಿಸ ಬೇಕು ಎಂದು ನಗರಾಭಿವೃದ್ಧಿ ಸಚಿವರಾದ ಡಾ. ಯತೀಂದ್ರ ಸಿದ್ದರಾಮಯ್ಯ ಆದೇಶಿಸಿದ್ದಾರೆ.

ಸಚಿವರ ಗೃಹ ಕಚೇರಿ 'ಕಾವೇರಿ'ಯಲ್ಲಿ ನಡೆದ ಸ್ವಚ್ಛ ಭಾರತ ಮಿಷನ್ 2.0 (ಎಸ್.ಬಿ.ಎಂ2.0) ಉನ್ನತ ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ, "ದಾವಣಗೆರೆ ನಗರದಲ್ಲಿ ಶೇ.100ರಷ್ಟು ಕಸ ವಿಂಗಡಣೆ ಯಶಸ್ವಿಯಾಗಿ ನಡೆಯುತ್ತಿದ್ದು, ಸಾರ್ವಜನಿಕರು ಮನೆಗಳಲ್ಲೇ ಹಸಿ ಹಾಗೂ ಒಣಕಸವನ್ನು ಬೇರ್ಪಡಿಸಿ ನೀಡುತ್ತಿದ್ದಾರೆ. ದಾವಣಗೆರೆಯಲ್ಲಿ ಇದು ಸಾಧ್ಯವಾಗುತ್ತದೆ ಎಂದಾದರೆ, ರಾಜ್ಯದ ಇತರೆ ನಗರಗಳಲ್ಲಿ ಏಕೆ ಸಾಧ್ಯವಿಲ್ಲ ಪ್ರತಿಯೊಂದು ನಗರದಲ್ಲೂ ಈ ಮಾದರಿಯನ್ನು ತಕ್ಷಣದಿಂದಲೇ ಜಾರಿಗೆ ತರಬೇಕು" ಎಂದು ಸಚಿವರು ಸೂಚಿಸಿದರು.

ನಗರಗಳಲ್ಲಿ ವರ್ಷಗಳಿಂದ ಬಿದ್ದಿರುವ ಹಳೆಯ 'ಲೆಗಸಿ ವೇಸ್ಟ್' ವಿಲೇವಾರಿ ಮಾಡುವುದು ಎಷ್ಟು ಮುಖ್ಯವೋ, ಪ್ರತಿದಿನ ಹೊಸದಾಗಿ ಸಂಗ್ರಹವಾಗುವ ಕಸವು ವಿಂಗಡಣೆಯಾಗದೆ ಮತ್ತೆ ಕಸದ ರಾಶಿಯಾಗಿ ಮಾರ್ಪಡಾಗದಂತೆ ತಡೆಯುವುದು ಅಷ್ಟೇ ಮುಖ್ಯ. ಇದಕ್ಕಾಗಿ 100% ಮೂಲದಲ್ಲೇ ವಿಂಗಡಣೆ ಹಾಗೂ ಸಂಸ್ಕರಣಾ ಸಾಮರ್ಥ್ಯವನ್ನು ತುರ್ತಾಗಿ ಹೆಚ್ಚಿಸಬೇಕು ಎಂದು ಸಚಿವರು ಹೇಳಿದರು.

ಕಸ ವಿಲೇವಾರಿಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ತ್ಯಾಜ್ಯದಿಂದ ವಿದ್ಯುತ್ ತಯಾರಿಸುವ ತಂತ್ರಜ್ಞಾನ ಮತ್ತು ಯೋಜನೆಗಳ ಸಾಧ್ಯತೆಗಳನ್ನು ವಿಸ್ತೃತವಾಗಿ ಪರಿಶೀಲಿಸಬೇಕು.

ಪ್ರಸ್ತುತ ಬಿದದಿಯಲ್ಲಿ ಯಶಸ್ವಿಯಾಗಿ ನಡೆಯುತ್ತಿರುವ ಯೋಜನೆ ಮಾದರಿಯಲ್ಲೇ, ಮುಂದಿನ ಹಂತಗಳಲ್ಲಿ ಇತರ ದೊಡ್ಡ ನಗರಗಳಿಗೂ ಇದನ್ನು ವಿಸ್ತರಿಸುವ ನಿಟ್ಟಿನಲ್ಲಿ ಆಲೋಚನೆ ಮಾಡಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು.

**ಇಲಾಖೆ ಪ್ರಗತಿ ಬಗ್ಗೆ ಅಧಿಕಾರಿಗಳ ಮಾಹಿತಿ**

ಸಭೆಯಲ್ಲಿ ಸ್ವಚ್ಛ ಭಾರತ್ ಮಿಷನ್‌ನ ರಾಜ್ಯ ಅಭಿಯಾನ ನಿರ್ದೇಶಕರಾದ ಡಾ. ಆರ್. ಸೆಲ್ವಮಣಿ ಅವರು ಎಸ್.ಬಿ.ಎಂ–2.0 ಅಡಿಯಲ್ಲಿ ರಾಜ್ಯದಲ್ಲಿ ನಡೆಯುತ್ತಿರುವ ನೈರ್ಮಲ್ಯ ಮತ್ತು ತ್ಯಾಜ್ಯ ನಿರ್ವಹಣಾ ಯೋಜನೆಗಳ ವಿವರ ಒದಗಿಸಿದರು:

ರಾಜ್ಯದ 13 ಮಹಾನಗರ ಪಾಲಿಕೆಗಳು ಓಡಿಎಫ್ ಸಾಧಿಸಿದ್ದು, ಬಿಟ್ಟುಹೋದ ಫಲಾನುಭವಿಗಳಿಗಾಗಿ ಮಂಜೂರಾದ 900+ ಗೃಹ ಶೌಚಾಲಯಗಳಲ್ಲಿ 391 ಪೂರ್ಣಗೊಂಡಿವೆ. ಕಲಬುರಗಿ ಮತ್ತು ತುಮಕೂರು ಪಾಲಿಕೆಗಳಲ್ಲಿ ಬಾಕಿ ಕಾಮಗಾರಿಗಳನ್ನು ವೇಗಗೊಳಿಸಲು ತಿಳಿಸಲಾಗಿದೆ. ಜೊತೆಗೆ 230 ಸಾರ್ವಜನಿಕ ಹಾಗೂ 242 ಸಮುದಾಯ ಶೌಚಾಲಯ ಸೀಟುಗಳ ನಿರ್ಮಾಣ ಅಂತಿಮ ಹಂತದಲ್ಲಿದೆ ಎಂದರು.

13 ಮಹಾನಗರ ಪಾಲಿಕೆಗಳಿಗೆ 148 ಕೋಟಿ ವೆಚ್ಚದ ಆಕ್ಷನ್ ಪ್ಲಾನ್ ಅನುಮೋದನೆಯಾಗಿದ್ದು, 34 ಕೋಟಿ ಮೌಲ್ಯದ ಕಾಮಗಾರಿಗಳು ಪೂರ್ಣಗೊಂಡಿವೆ. ರಾಯಚೂರು, ಬೀದರ್, ತುಮಕೂರು ಮತ್ತು ವಿಜಯಪುರ ನಗರಗಳಲ್ಲಿ ಹಳೆಯ ಕಸದ ರಾಶಿಯನ್ನು ಸಂಪೂರ್ಣ ವಿಲೇವಾರಿ ಮಾಡಲಾಗಿದೆ ಎಂದರು.

ಘನ ತ್ಯಾಜ್ಯ ವಿಲೇವಾರಿಗೆ ಸಂಬಂಧಿಸಿದಂತೆ ಎನ್.ಜಿ.ಟಿ ಹಾಗೂ ಸುಪ್ರೀಂ ಕೋರ್ಟ್ ಕಾಲ ಕಾಲಕ್ಕೆ ಪರಿಶೀಲನೆ ನಡೆಸುತ್ತವೆ ಎಂದು ನಗರಾಭಿವೃದ್ಧಿ ಇಲಾಖೆ ಕಾರ್ಯದರ್ಶಿ ಬಿ.ಬಿ. ಕಾವೇರಿ ಅವರು ತಿಳಿಸಿದರು.

ತ್ಯಾಜ್ಯ ನಿರ್ವಹಣೆ ಹಾಗೂ ನೈರ್ಮಲ್ಯ ಯೋಜನೆಗಳಲ್ಲಿ ಯಾವುದೇ ನೆಪಗಳನ್ನು ಸಹಿಸುವುದಿಲ್ಲ ಎಂದ ಸಚಿವರು, ಅನುದಾನ ಮತ್ತು ಜಾಗದ ಸಮಸ್ಯೆಗಳನ್ನು ಸ್ಥಳೀಯವಾಗಿ ಬಗೆಹರಿಸಿಕೊಂಡು, ನಿಗದಿತ ಕಾಲಮಿತಿಯೊಳಗೆ ಬಾಕಿ ಇರುವ ಎಲ್ಲಾ ಶೌಚಾಲಯ ಘಟಕ ಹಾಗೂ ತ್ಯಾಜ್ಯ ಸಂಸ್ಕರಣಾ ಘಟಕಗಳ ಕಾಮಗಾರಿಯನ್ನು ಪೂರ್ಣಗೊಳಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

# ಬರ ಘೋಷಣೆ ಮಾಡಿ ಪ್ರತಿ ಎಕರೆಗೆ 50 ಸಾವಿರ ಪರಿಹಾರ ಘೋಷಿಸಿ: ಸರ್ಕಾರಕ್ಕೆ ಪ್ರತಿಪಕ್ಷ ನಾಯಕ ಆರ್.ಅಶೋಕ್ ಆಗ್ರಹ

**ಬೆಂಗಳೂರು, ಜು.22:** ರಾಜ್ಯದಲ್ಲಿ ಬರಗಾಲ ಹೆಚ್ಚಿದ್ದು, ರೈತರು ಸಂಕಷ್ಟಕ್ಕೆ ಸಿಲುಕಿ ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ಕಲ್ಯಾಣ ಕರ್ನಾಟಕದ ಗ್ರಾಮೀಣ ಪ್ರದೇಶಗಳಲ್ಲಿ ಜನರು ಗುಳೆ ಹೋಗುತ್ತಿದ್ದಾರೆ. ಕೂಡಲೇ ಕಾಂಗ್ರೆಸ್ ಸರ್ಕಾರ ಬರಗಾಲ ಘೋಷಣೆ ಮಾಡಿ ರೈತರಿಗೆ ಎಕರೆಗೆ 50,000 ರೂ. ಪರಿಹಾರ ನೀಡಬೇಕು ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಆಗ್ರಹಿಸಿದರು.



ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಬರದ ತಾಂಡವ ನಡೆಯುತ್ತಿದ್ದರೂ, ಕಾಂಗ್ರೆಸ್ ಮುಖಂಡರು, ಸಚಿವರು, ಶಾಸಕರು ಜಾಲಿ ಮಾಡಲು ದೆಹಲಿಗೆ ಹೋಗಿದ್ದಾರೆ. ಇದು ಕರ್ನಾಟಕದ ಬರ ಅಲ್ಲ, ಇದು ಜನರ, ರೈತರ ಹಣೆಬರಹ ಎನ್ನಬೇಕಿದೆ. ಬಿಜೆಪಿ ಅವಧಿಯಲ್ಲಿ ಬರಗಾಲ ಅಥವಾ ಪ್ರವಾಹದ ಸಮಯದಲ್ಲಿ ಮುಂಚೂಣಿಯಲ್ಲಿದ್ದು ಕೆಲಸ ಮಾಡಲಾಗಿತ್ತು ಹಾಗೂ ದುಪ್ಪಟ್ಟು ಪರಿಹಾರ ನೀಡಲಾಗಿತ್ತು. ಆದರೆ ಸಿಎಂ ಡಿ.ಕೆ.ಶಿವಕುಮಾರ್ ಬೆಳೆ ಬೆಳೆಯಬಾರದು ಎಂದು ಕರೆ ನೀಡುತ್ತಾರೆ. ಹಾಗಾದರೆ ರೈತರು ಏನು ಮಾಡಬೇಕು ಎಂದು ಅವರೇ ಹೇಳಬೇಕು. ರೈತರಿಗೂ ಸಾರ್ವತ್ರಿಕ ರಜೆ ಕೊಟ್ಟುಬಿಡಲಿ ಎಂದರು.

ವಿಬಿಜಿ ರಾಮ್‌ಜಿ ಯೋಜನೆಗೆ ಮೊದಲು ವಿರೋಧಿಸಿ ಈಗ ಜಾರಿ ಮಾಡುವುದಾಗಿ ನಾಟಕ ಆಡುತ್ತಿದ್ದಾರೆ. ಕಾವೇರಿ ನೀರನ್ನು ಯಾರಿಗೂ ಬಳಸಲು ಬಿಡುತ್ತಿಲ್ಲ. ಆದರೆ ತಮಿಳುನಾಡಿಗೆ ನಿರಂತರವಾಗಿ ಕಾವೇರಿ ನೀರು ಹರಿಯುತ್ತಿದೆ ಎಂದು ದೂರಿದರು. ಕಳೆದ ವಾರ ಮಳವಳ್ಳಿ ಭಾಗದಲ್ಲಿ ಒಣಗಿರುವ ಕಬ್ಬು ವೀಕ್ಷಿಸಿದ್ದೆ. 157 ತಾಲೂಕುಗಳಲ್ಲಿ ಬರ ಇದೆ. 80% ರಷ್ಟು ಕೃಷಿ ಚಟುವಟಿಕೆ ಸ್ಥಗಿತಗೊಂಡಿದೆ. ಜಾನುವಾರುಗಳಿಗೆ ಮೇವಿಲ್ಲದೆ ಸಮಸ್ಯೆ ಸೃಷ್ಟಿಯಾಗಿದೆ. ಸಮಸ್ಯೆಯಾಗಿದೆ. ರೈತರು ದನಕರುಗಳನ್ನು ಕಟುಕರಿಗೆ ಮಾರುವ ಪರಿಸ್ಥಿತಿ ನಿರ್ಮಾಣವಾಗಿದೆ. ಕಂದಾಯ ಸಚಿವರು ಜಿಲ್ಲಾಧಿಕಾರಿಗಳಿಂದ ವರದಿ ಕೇಳಿದ್ದಾರೆ. 10,000 ಕೋಟಿ ಕೇಂದ್ರ ಸರ್ಕಾರ ಕೊಡಬೇಕು ಎಂದಿದ್ದಾರೆ. ವಾಸ್ತವ ಸ್ಥಿತಿಯನ್ನು ಅಧ್ಯಯನ ಮಾಡಿ ಕೇಂದ್ರಕ್ಕೆ ವರದಿ ಸಲ್ಲಿಸದೆ ಅನುದಾನ ಹೇಗೆ ಬಿಡುಗಡೆ ಆಗಲು ಸಾಧ್ಯ. ರಾಜ್ಯ ಸರ್ಕಾರ ವರದಿ ಸಿದ್ಧಪಡಿಸಿ ಕೇಂದ್ರಕ್ಕೆ ಸಲ್ಲಿಸಿ ಪರಿಹಾರ ಸಿಗುವುದು ಯಾವಾಗ, ಅದಕ್ಕೆ ಮೊದಲು ಎಸ್‌ಡಿಆರ್‌ಎಫ್ ನಿಧಿಯಿಂದ ಹಣ ಬಿಡುಗಡೆ ಮಾಡಿ ಸಮರೋಪಾದಿಯಲ್ಲಿ ಪರಿಹಾರ ಕ್ರಮ ಜರುಗಿಸಬೇಕು ಎಂದು ಅಶೋಕ್ ಆಗ್ರಹಿಸಿದರು.

ಜೂನ್‌ನಲ್ಲಿ ಮಳೆ ಕೊರತೆ ಪ್ರಮಾಣ 42% ಆಗಿದೆ. ಮಲೆನಾಡಿನಲ್ಲಿ 43%, ಕರಾವಳಿಯಲ್ಲಿ 35%, ಉತ್ತರ ಒಳನಾಡಿನಲ್ಲಿ 33%, ದಕ್ಷಿಣ ಒಳನಾಡಿನಲ್ಲಿ 31% ಮಳೆ ಕೊರತೆಯಾಗಿದೆ. ವಿಜಯಪುರದಲ್ಲಿ 6, ಮೈಸೂರಿನಲ್ಲಿ 5, ಹಾವೇರಿಯಲ್ಲಿ 4, ಚಿಕ್ಕಮಗಳೂರಿನಲ್ಲಿ 3 ಸೇರಿ ರಾಜ್ಯದಲ್ಲಿ ಒಟ್ಟು 31 ರೈತರು ಕೇವಲ ಎರಡು ತಿಂಗಳಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಕಾಂಗ್ರೆಸ್ ಅಧಿಕಾರಕ್ಕೆ ಬಂದ ನಂತರ 2,800 ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಇದು ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗಲೆಲ್ಲಾ ರೈತರ ಹಣೆಬರಹ ಎಂದು ಅಶೋಕ್ ಹೇಳಿದರು.

ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಜಿರಳೆ ಪಾರ್ಟಿಯ ಜೊತೆ ಕೈಜೋಡಿಸುತ್ತಾರೆ. ಆದರೆ ಬರಗಾಲ ಬಂದಿದ್ದರೂ ರೈತರ ಜೊತೆ ಕೈ ಜೋಡಿಸಿಲ್ಲ. ಅಂಡಮಾನ್‌ಗೆ ಹೋಗಿ ಪರಿಸರ ಉಳಿಸುವ ಪ್ರತಿಭಟನೆ ಮಾಡುವ ಇವರು ರೈತರ ಪರ ಮಾತಾಡಲ್ಲ. ಬರಗಾಲವನ್ನು ರಾಷ್ಟ್ರೀಯ ವಿಪತ್ತು ಎಂದು ಕೇಂದ್ರ ಸರ್ಕಾರ ಘೋಷಣೆ ಮಾಡುವ ಮೊದಲು, ರಾಜ್ಯ ಸರ್ಕಾರದಿಂದ ಬರ ಘೋಷಣೆ ಮಾಡಬೇಕಿತ್ತು. ಆರ್‌ಎಸ್‌ಎಸ್ ಬಗ್ಗೆ ಮಾತಾಡುವ ಸಚಿವ ಪ್ರಿಯಾಂಕ್ ಖರ್ಗೆ, ಕಲ್ಯಾಣ ಕರ್ನಾಟಕದಿಂದ ವಲಸೆ ಹೋಗುತ್ತಿರುವ ಜನರ ಲೆಕ್ಕ ನೀಡಲಿ. ಯಾದಗಿರಿ ಜಿಲ್ಲೆಯಲ್ಲಿ ತಾಂಡಾಗಳ ಜನರು ಮನೆ ಬಿಟ್ಟು ಗುಳೆ ಹೋಗುತ್ತಿದ್ದಾರೆ. ಆ ಬಗ್ಗೆ ಯಾರಿಗೂ ಕಾಳಜಿ ಇಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು. ರಾಜ್ಯದಲ್ಲಿ 5,862 ಕೆರೆಗಳು ಬರಿದಾಗಿವೆ. ಮೂರು ತಿಂಗಳ ಹಿಂದ ಹವಾಮಾನ ಇಲಾಖೆ ಎಚ್ಚರಿಕೆ ನೀಡಿದ್ದಾಗಲೇ ತಯಾರಿ ಮಾಡಿಕೊಳ್ಳಬೇಕಿತ್ತು. ಸರ್ಕಾರದ ಖಜಾನೆ ಖಾಲಿಯಾಗಿರುವುದರಿಂದ ಇವರು ಹಣ ಬಿಡುಗಡೆ ಮಾಡಲು ಸಾಧ್ಯವಾಗುತ್ತಿಲ್ಲ. ಜಲಾಶಯ, ಕೆರೆಗಳು ಕೂಡ ಖಾಲಿಯಾಗಿವೆ. ಲಿಂಗನಮಕ್ಕಿ, ಸೂಪ, ವರಾಹಿ ಜಲಾಶಯಗಳಲ್ಲಿ 23%, ಕಾವೇರಿ ಜಲಾನಯನ ಪ್ರದೇಶದ ಜಲಾಶಯಗಳಲ್ಲಿ 51% ಮಾತ್ರ ನೀರಿದೆ. ಕೃಷ್ಣ ಕಣಿವೆಯ ಜಲಾಶಯಗಳಲ್ಲಿ 48% ನೀರಿದೆ. ಪರಮೇಶ್ವರ್ ಅವರ ವರದಿ ಬರುವ ವೇಳೆಗೆ ಎಲ್ಲರೂ ವಲಸೆ ಹೋಗಿರುತ್ತಾರೆ ಎಂದರು.

**ಪ್ರಧಾನಿಯವರನ್ನು ಟೀಕೆ ಮಾಡುವ ಯೋಗ್ಯತೆ ಕಾಂಗ್ರೆಸ್‌ಗಿಲ್ಲ**

**ನೀಟ್ ನೆಪದಲ್ಲಿ ಕಾಂಗ್ರೆಸ್ ಹಾಗೂ ಆಮ್ ಆದ್ಮಿ ಪಕ್ಷ ಹೋರಾಟ ಮಾಡಿ ವಿದ್ಯಾರ್ಥಿಗಳ ಬಗ್ಗೆ ಹುಸಿ ಕಾಳಜಿ ತೋರಿಸುತ್ತಿದೆ. ಬೆಂಗಳೂರಲ್ಲಿ 11 ವಿದ್ಯಾರ್ಥಿಗಳು ಸತ್ತಾಗ ಈ ಕಾಳಜಿ ಇರಲಿಲ್ಲ. 11 ಯುವಜನರ ಸಾವಿಗೆ ಯಾರೂ ಕಾರಣರಲ್ಲ ಎಂದು ವರದಿ ಬಂದಿದೆ. ಹುಬ್ಬಳ್ಳಿಯಲ್ಲೂ ವಿದ್ಯಾರ್ಥಿಗಳ ಮೇಲೆ ದೌರ್ಜನ್ಯ ಮಾಡಲಾಗಿತ್ತು. ಆಗ ವಿದ್ಯಾರ್ಥಿಗಳ ಬಗ್ಗೆ ರಾಹುಲ್ ಗಾಂಧಿ ಕಾಳಜಿ ತೋರಲಿಲ್ಲ. ಈಗ ಪ್ರಧಾನಿ ನರೇಂದ್ರ ಮೋದಿ ಬಗ್ಗೆ ಟೀಕೆ ಮಾಡುವ ಯಾವುದೇ ಯೋಗ್ಯತೆ ಕಾಂಗ್ರೆಸ್‌ಗಿಲ್ಲ. ಪ್ರಧಾನಿ ನಿವಾಸದ ಮುಂದೆ ಪ್ರತಿಭಟನೆ ಮಾಡುವುದು ಒಳ್ಳೆಯ ಸಂಪ್ರದಾಯವಲ್ಲ. ಮೋದಿ ಸರ್ಕಾರ ಅಧಿಕಾರದಲ್ಲಿ ಎಂಬಿಬಿಎಸ್ ಸೀಟುಗಳನ್ನು 51,000 ದಿಂದ 1.36 ಲಕ್ಷಕ್ಕೆ, ಪಿಜಿ ಸೀಟುಗಳನ್ನು 31,000 ದಿಂದ 1.17 ಲಕ್ಷಕ್ಕೆ ಹೆಚ್ಚಿಸಲಾಗಿದೆ ಎಂದರು. ಅಮೆರಿಕದ ಹಣದಲ್ಲಿ ಜಿರಳೆ ಪಾರ್ಟಿ ಆರಂಭಿಸಿ ಕೇಂದ್ರ ಸರ್ಕಾರದ ವಿರುದ್ಧ ಷಡ್ಯಂತ್ರ ಮಾಡಲಾಗಿದೆ. ಲೋಕಸಭೆಯಲ್ಲಿ ಮಾತನಾಡಬೇಕಾದ ರಾಹುಲ್ ಗಾಂಧಿ ಬೀದಿಗೆ ಹೋಗಿ ನಾಟಕ ಮಾಡುತ್ತಿದ್ದಾರೆ. ರಾಜ್ಯದಲ್ಲಿ ಕೆಪಿಎಸ್ಸಿಯಲ್ಲಿ ನಡೆಯುತ್ತಿರುವ ಅಕ್ರಮದ ವಿರುದ್ಧ ನಾನು ವಿಧಾನಸಭೆಯಲ್ಲಿ ಮಾತಾಡಿದರೂ ಕ್ರಮ ಕೈಗೊಳ್ಳಲಿಲ್ಲ ಎಂದು ಅಶೋಕ್ ಹೇಳಿದರು.**

**ರಾಜ್ಯ ಸರ್ಕಾರಕ್ಕೆ ಹಲವು ಸಲಹೆ**

ಸರ್ಕಾರಕ್ಕೆ ಪತ್ರ ಬರೆದು ಸಲಹೆ ನೀಡಿದ್ದೇನೆ. ಕೂಡಲೇ ಬರಗಾಲ ಘೋಷಣೆ ಮಾಡಿ, ಪ್ರತಿ ತಾಲೂಕಿಗೆ 20 ಕೋಟಿ ರೂ. ಬಿಡುಗಡೆ ಮಾಡಬೇಕು. ಈಗಾಗಲೇ ತಾಲೂಕಿಗೆ ತಲಾ ಒಂದು ಕೋಟಿ ರೂ. ಘೋಷಣೆ ಮಾಡಿದ್ದರೂ. ಆ ಹಣ ಇನ್ನೂ ಬಂದಿಲ್ಲ. ಇಷ್ಟು ಕಡಿಮೆ ಹಣದಿಂದ ಬೋರ್‌ವೆಲ್ ಪುನಶ್ಚೇತನ ಮಾಡಲು ಕೂಡ ಸಾಧ್ಯವಿಲ್ಲ. ಪ್ರತಿ ಎಕರೆಗೆ 50,000 ರೂ. ಪರಿಹಾರ ನೀಡಬೇಕು. ಯಾವುದೇ ರಾಜ್ಯಗಳಿಗೆ ನೀರು ಹರಿಸಬಾರದು. ಇಲ್ಲಿನ ಮೇವನ್ನು ಬೇರೆ ರಾಜ್ಯಕ್ಕೆ ಮಾರಾಟ ಮಾಡುವ ಜಾಲ ಹುಟ್ಟಿಕೊಂಡಿದ್ದು, ಅದನ್ನು ತಡೆಗಟ್ಟಬೇಕು. ಮಾತು ಕೊಟ್ಟಂತೆಯೇ ಮುಖ್ಯಮಂತ್ರಿಗಳು ಸಾಲಮನ್ನಾ ಮಾಡಬೇಕು ಎಂದು ಅಶೋಕ್ ಆಗ್ರಹಿಸಿದರು.

# ಲೋಕಸಭೆಯಲ್ಲಿ ಗದ್ದಲ: ಮುಂಗಾರು ಅಧಿವೇಶನದ ಉಳಿದ ಅವಧಿಗೆ ಟಿಎಂಸಿಯ ಕಲ್ಯಾಣ್ ಬ್ಯಾನರ್ಜಿ ಅಮಾನತು



**ನವದೆಹಲಿ, ಜು.22:** ಸದನ ದೊಳಗೆ ನಡೆದ ಗದ್ದಲದ ಸಂದರ್ಭ ದಲ್ಲಿ ಮಹಿಳಾ ಸದಸ್ಯೆಯೊಬ್ಬರ ವಿರುದ್ಧ ಅಸಂಸದೀಯ ಭಾಷೆಯನ್ನು ಬಳಸಿದ ಆರೋಪದ ಮೇಲೆ ತೃಣಮೂಲ ಕಾಂಗ್ರೆಸ್ ಸಂಸದ ಕಲ್ಯಾಣ್ ಬ್ಯಾನರ್ಜಿ ಅವರನ್ನು ಬುಧವಾರ ಲೋಕಸಭೆಯಲ್ಲಿ ನಿರ್ಣಯ ಅಂಗೀಕರಿಸಿದ ನಂತರ ಅವರನ್ನು ಉಳಿದ ಮಳೆಗಾಲದ ಅಧಿವೇಶನಕ್ಕೆ ಅಮಾನತುಗೊಳಿಸಲಾಗಿದೆ. ಬ್ಯಾನರ್ಜಿ ಸದನದಿಂದ ಹೊರಡುವ ಮೊದಲು ಪರಿಸ್ಥಿತಿಯನ್ನು ಶಾಂತಗೊಳಿಸುವ ಪ್ರಯತ್ನದಲ್ಲಿ ಹಲವಾರು ವಿರೋಧ ಪಕ್ಷದ ಸಂಸದರು ಮಧ್ಯಪ್ರವೇಶಿಸಿದರು. ನಂತರ, ಎನ್‌ಸಿಪಿಐ ಸಂಸದರಾದ ಮಿತಾಲಿ ಬಾಗ್, ಕಾಕೋಲಿ ಘೋಷ್ ದಸ್ತಿದಾರ್ ಮತ್ತು ಇತರ ಪಕ್ಷದ ಸದಸ್ಯರು ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರನ್ನು ಅವರ ಕೊಠಡಿಯಲ್ಲಿ ಭೇಟಿಯಾಗಿ ಔಪಚಾರಿಕ ದೂರು ಸಲ್ಲಿಸಿದರು, ಆಪಾದಿತ ಹೇಳಿಕೆಗಳ ಬಗ್ಗೆ ಕ್ರಮ ಕೈಗೊಳ್ಳುವಂತೆ ಕೋರಿದರು. ಬ್ಯಾನರ್ಜಿ ಮತ್ತು ನ್ಯಾಷನಲಿಸ್ಟ್ ಸಿಟಿಜನ್ಸ್ ಪಾರ್ಟಿ ಆಫ್ ಇಂಡಿಯಾ (ಎನ್‌ಸಿಪಿಐ) ಸದಸ್ಯರ ನಡುವಿನ ಘರ್ಷಣೆಯ ನಂತರ ಶಿಸ್ತು ಕ್ರಮ ಕೈಗೊಳ್ಳಲಾಗಿದೆ, ಅವರೆಲ್ಲರೂ ಮಿತಾಲಿ ಬಾಗ್, ಶತಾಬ್ದಿ ರಾಯ್ ಮತ್ತು ಕಾಕೋಲಿ ಘೋಷ್ ದಸ್ತಿದಾರ್ ಸೇರಿದಂತೆ, ಹೊಸದಾಗಿ ರಚಿಸಲಾದ ಸಂಘಟನೆಗೆ ಸೇರುವ ಮೊದಲು ತೃಣಮೂಲ ಕಾಂಗ್ರೆಸ್‌ನೊಂದಿಗೆ ಸಂಬಂಧ ಹೊಂದಿದ್ದರು. ಬ್ಯಾನರ್ಜಿಯನ್ನು ಅಮಾನತುಗೊಳಿಸುವ ನಿರ್ಣಯವನ್ನು ಸದನದಲ್ಲಿ ಗದ್ದಲದ ದೃಶ್ಯಗಳ ನಡುವೆ ಧ್ವನಿಮತದಿಂದ ಅಂಗೀಕರಿಸಲಾಯಿತು.

# ಮಾತುಕತೆಗೆ ಮಂತ್ರಿಗಳ ಮನೆಗೆ ಅಲೆಯಲ್ಲ, ಸರ್ಕಾರವೇ ಬರಲಿ



**ನವದೆಹಲಿ, ಜು.22:** ಕೇಂದ್ರ ಸರ್ಕಾರದ ದ್ವಂದ್ವ ನೀತಿ ಹಾಗೂ ಪ್ರತಿಭಟನಾಕಾರರ ಮೇಲಿನ ಪೊಲೀಸ್ ದೌರ್ಜನ್ಯವನ್ನು ತೀವ್ರವಾಗಿ ಖಂಡಿಸಿರುವ ಕಾಕ್ರೋಚ್ ಜನತಾ ಪಾರ್ಟಿ (ಸಿಜೆಪಿ) ಸಂಸ್ಥಾಪಕ ಅಭಿಜೀತ್ ದೀಪ್ಕೆ, ನಾವಿನ್ನು ಮಾತುಕತೆಗಾಗಿ ಮಂತ್ರಿಗಳ ಮನೆ ಬಾಗಿಲಿಗೆ ಅಲೆಯುವುದಿಲ್ಲ. ಸರ್ಕಾರಕ್ಕೆ ನಮ್ಮೊಡನೆ ಪ್ರಾಮಾಣಿಕವಾಗಿ ಮಾತುಕತೆ ನಡೆಸುವ ಇಚ್ಛೆಯಿದ್ದರೆ, ನಾವು ಪ್ರತಿಭಟನೆಗೆ ಕೂಳಿತಿರುವ ಜಂತರ್ ಮಂತರ್‌ಗೇ ಬರಲಿ ಎಂದು ಸರ್ಕಾರಕ್ಕೆ ನೇರ ಸವಾಲು ಹಾಕಿದ್ದಾರೆ.

ನವದೆಹಲಿಯ ಜಂತರ್ ಮಂತರ್‌ನಲ್ಲಿ ನೀಟ್ ಅಕ್ರಮ ಖಂಡಿಸಿ ಸತತ 32 ದಿನಗಳಿಂದ ನಡೆಯುತ್ತಿರುವ ಬೃಹತ್ ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಸರ್ಕಾರದ ಕಪಟ ಉದ್ದೇಶವನ್ನು ಬಿಚ್ಚಿಟ್ಟರು. ಕೇಂದ್ರ ಆರೋಗ್ಯ ಸಚಿವ ಜೆ.ಪಿ. ನಡ್ಡಾ ಅವರು ಮಾತುಕತೆಯ ನೆಪದಲ್ಲಿ ಸಿಜೆಪಿ ನಾಯಕರಾದ ಆಶುತೋಷ್ ರಂಕಾ ಹಾಗೂ ಸೌರವ್ ದಾಸ್ ಅವರನ್ನು ತಮ್ಮ ನಿವಾಸದಲ್ಲಿಯೇ ಗೃಹಬಂಧನದಲ್ಲಿ ಇರಿಸಿದ್ದರು. ಅಲ್ಲದೆ, ಅವರ ಮೊಬೈಲ್‌ಗಳನ್ನು ಕಸಿದುಕೊಂಡು ನಮ್ಮ ಸಮಯವನ್ನು ಉದ್ದೇಶಪೂರ್ವಕವಾಗಿ ವ್ಯರ್ಥ ಮಾಡಿದರು ಎಂದು ಗಂಭೀರ ಆರೋಪ ಮಾಡಿದರು.

ಒಂದೆಡೆ ನಮ್ಮ ಪ್ರಮುಖ ನಾಯಕರನ್ನು ಮಾತುಕತೆಗೆಂದು ಕರೆದು ದಿಗ್ಬಂಧನದಲ್ಲಿ ಇಡುವುದು, ಮತ್ತೊಂದೆಡೆ ಬೀದಿಯಲ್ಲಿ ಶಾಂತಿಯುತವಾಗಿ ಹೋರಾಟ ಮಾಡುತ್ತಿರುವ ಮುಗ್ಧ ವಿದ್ಯಾರ್ಥಿಗಳ ಮೇಲೆ ಲಾಠಿ ಪ್ರಹಾರ ನಡೆಸುವುದು ಸರ್ಕಾರದ ಪೂರ್ವನಿಯೋಜಿತ ಕುತಂತ್ರವಾಗಿದೆ. ನಾಯಕರೇ ಇಲ್ಲದ ವೇಳೆ ಗೊಂದಲ ಸೃಷ್ಟಿಸಿ ಇಡೀ ಹೋರಾಟವನ್ನು ಹತ್ತಿಕ್ಕುವ ಸರ್ಕಾರದ ಈ ದಮನಕಾರಿ ನೀತಿಗೆ ನಾವು ಯಾವುದೇ ಕಾರಣಕ್ಕೂ ಜಗ್ಗುವುದಿಲ್ಲ ಎಂದು ದೀಪ್ಕೆ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಇದೇ ವೇಳೆ ಪರಿಸರವಾದಿ ಸೋನಂ ವಾಂಗ್ಚುಕ್ ಅವರ ಉಪವಾಸ ಸತ್ಯಾಗ್ರಹದ ಬಗ್ಗೆ ತೀವ್ರ ಕಳವಳ ವ್ಯಕ್ತಪಡಿಸಿದ ಅವರು, ವಾಂಗ್ಚುಕ್ ಉಪವಾಸ ಕೈಬಿಡಲು ನಮ್ಮ ಮನವಿಗೆ ಒಪ್ಪಿದ್ದರು. ಆದರೆ ಸಂಸತ್ ಚಲೋ ಮೆರವಣಿಗೆಯ ವೇಳೆ ಪೊಲೀಸರು ತೋರಿದ ಕ್ರೌರ್ಯವನ್ನು ಕಣ್ಣಾರೆ ಕಂಡು ಅವರು ತಮ್ಮ ನಿರ್ಧಾರ ಬದಲಿಸಿದ್ದಾರೆ. ಇದು ಅತ್ಯಂತ ಗಂಭೀರ ವಿಚಾರವಾಗಿದೆ. ಅವರ ಜೀವ ಈ ದೇಶಕ್ಕೆ ಬಹಳ ಅಮೂಲ್ಯವಾಗಿದೆ ಎಂದರು.

ಪೊಲೀಸರು ದೌರ್ಜನ್ಯ ನಡೆಸಿ ಪ್ರತಿಭಟನಾಕಾರರ ಟೆಂಟ್‌ಗಳನ್ನು ಕಿತ್ತುಹಾಕಿದರೂ, ಜಂತರ್ ಮಂತರ್‌ನಲ್ಲಿ ಯುವಸಮೂಹದ ಹೋರಾಟ ಕಿಂಚಿತ್ತೂ ಕಡಿಮೆಯಾಗಿಲ್ಲ. ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಕೂಡಲೇ ರಾಜೀನಾಮೆ ನೀಡಲೇಬೇಕು ಎಂದು ಪಟ್ಟುಹಿಡಿದಿರುವ ಸಿಜೆಪಿ ಕಾರ್ಯಕರ್ತರು, ಆವರಣವನ್ನು ಸ್ವಚ್ಛಗೊಳಿಸಿ ಪ್ರತಿಭಟನೆ ಮುಂದುವರಿಸಿದ್ದಾರೆ. ಅಲ್ಲದೆ, ಗಾಯಾಳು ಪ್ರತಿಭಟನಾಕಾರರಿಗೆ ಅಗತ್ಯ ವೈದ್ಯಕೀಯ ಮತ್ತು ಕಾನೂನು ನೆರವು ಒದಗಿಸುತ್ತಾ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಿದ್ದಾರೆ.

# ಬಂಧನಕ್ಕೂ ಸಿದ್ಧ: ಈ ಹೋರಾಟ ಕೇವಲ ಆರಂಭ ಅಷ್ಟೇ



**ನವದೆಹಲಿ, ಜು. 22:** ಕಾಕ್ರೋಚ್ ಜನತಾ ಪಾರ್ಟಿ (ಸಿಜೆಪಿ) ರಾಷ್ಟ್ರೀಯ ವಕ್ತಾರ ಆಶುತೋಷ್ ರಂಕಾ ಬುಧವಾರ ಕೇಂದ್ರ ಸರ್ಕಾರಕ್ಕೆ ಎಚ್ಚರಿಕೆ ನೀಡಿದ್ದಾರೆ. ಜುಲೈ 20ರ ಪ್ರತಿಭಟನೆಯು ಬರೀ ಟ್ರೇಲರ್ ಅಷ್ಟೇ, ಪ್ರತಿಭಟನಾಕಾರರ ಬೇಡಿಕೆಗಳನ್ನು ಪರಿಹರಿಸಲು ವಿಫಲವಾದರೆ ಹತ್ತಾರು ಲಕ್ಷ ಯುವಕರು ದೆಹಲಿಯಲ್ಲಿ ಸೇರಲಿದ್ದಾರೆ ಎಂದು ಎಚ್ಚರಿಸಿದ್ದಾರೆ. ಹಾಗೆಯೇ ನಾವು UAPA-NSA ಅಡಿ ಬಂಧನಕ್ಕೂ ಸಿದ್ಧ ಎಂದಿದ್ದಾರೆ.

ಈ ಬಗ್ಗೆ ಮಾಧ್ಯಮ ಸಂಸ್ಥೆಯೊಂದರ ಜತೆ ಮಾತನಾಡಿದ ಸಿಜೆಪಿ ವಕ್ತಾರ, ಈ ಆಂದೋಲನವು ದೇಶದ ಸ್ವಾತಂತ್ರ್ಯಾನಂತರದ ಇತಿಹಾಸದ ಅತಿದೊಡ್ಡ ಚಳವಳಿಯಾಗಿದೆ. ಸರ್ಕಾರ ನಮ್ಮ ಬೇಡಿಕೆಗಳನ್ನು ಆಲಿಸದಿದ್ದರೆ ಲಕ್ಷಾಂತರ ಜನರು ದೆಹಲಿಗೆ ಬರಬಹುದು. ನಾವು ಹಿಂಜರಿಯುವ ಮಾತೇ ಇಲ್ಲ ಎಂದು ಹೇಳಿದ್ದಾರೆ.

ಪ್ರತಿಭಟನಾಕಾರರು ಶಾಂತಿಯುತವಾಗಿರಲಿಲ್ಲ ಎಂಬ ಹೇಳಿಕೆಯನ್ನು ತಳ್ಳಿಹಾಕಿದ ರಂಕಾ, ಜುಲೈ 20ರ ಮೆರವಣಿಗೆ ಶಾಂತಿಯುತವಾಗಿತ್ತು. ಪೊಲೀಸರು ವಿದ್ಯಾರ್ಥಿಗಳ ಮೇಲೆ ಬಲಪ್ರಯೋಗ ಮಾಡಿದ ನಂತರವೇ ಪರಿಸ್ಥಿತಿ ಹದಗೆಟ್ಟಿದ್ದು ಎಂದು ಸ್ಪಷ್ಟನೆ ನೀಡಿದ್ದಾರೆ. ಗಾಂಧಿ ಮತ್ತು ಅಂಬೇಡ್ಕರ್ ಅವರ ತತ್ವಗಳನ್ನು ನಾವು ಅನುಸರಿಸುವುದರಿಂದ ಯುವಕರು 31 ದಿನಗಳ ಕಾಲ ಇಲ್ಲಿ ಶಾಂತಿಯುತವಾಗಿ ಕುಳಿತಿದ್ದಾರೆ. ನಮ್ಮ ಬೇಡಿಕೆ ಸ್ಪಷ್ಟವಾಗಿದೆ. ಅಭಿಜೀತ್ ದೀಪ್ಕೆ ಆ ಬಗ್ಗೆ ಮಾತನಾಡಿದ್ದಾರೆ. ನಮ್ಮ ಪ್ರತಿಭಟನೆ ನಿಲ್ಲದು. ಈ ಚಳವಳಿಯ ನಾಯಕತ್ವವು ಕಾನೂನು ಕ್ರಮಕ್ಕೆ ಹೆದರುವುದಿಲ್ಲ. ನಾವು ಯಾವುದೇ ಎಫ್‌ಐಆರ್‌ಗೆ ಹೆದರುವುದಿಲ್ಲ, ಯುಎಪಿಎ ಮತ್ತು ಎನ್‌ಎಸ್‌ಎ ಅಡಿಯಲ್ಲಿ ಬಂಧನಕ್ಕೆ ಒಳಗಾಗಲೂ ಸಿದ್ಧರಿದ್ದೇವೆ. ಜೈಲು ಶಿಕ್ಷೆ ನಮ್ಮ ಹೋರಾಟಕ್ಕೆ ತೆರಬೇಕಾದ ಸಣ್ಣ ಬೆಲೆ ಎಂದು ರಂಕಾ ಹೇಳಿದ್ದಾರೆ.

ಇನ್ನು ರಾಜಕೀಯ ಪಕ್ಷಗಳು ಈ ಚಳವಳಿಗೆ ಬೆಂಬಲಿಸುವಂತೆ ಕರೆ ನೀಡಿದ ರಂಕಾ ಬಿಜೆಪಿ ಸೇರಿದಂತೆ ಯಾವುದೇ ಪಕ್ಷದ ನಾಯಕರನ್ನು ಪ್ರತಿಭಟನಾಕಾರರು ಸ್ವಾಗತಿಸುತ್ತೇವೆ. ಇದು ಒಂದು ದೊಡ್ಡ ಚಳವಳಿಯಾಗಿರುವುದರಿಂದ ಯಾರೂ ಬರಬಹುದು. ಬೇಡಿಕೆ ಅದೇ ಆಗಿರುತ್ತದೆ ಎಂದರು.

# ಸಿಕ್ಕಿಂ ಎನ್‌ಎಚ್‌ಪಿಸಿ ಸುರಂಗ ಕುಸಿತ: 13 ಮಂದಿ ಸಾವು

**ನವದೆಹಲಿ/ಗ್ಯಾಂಗ್ಟಾಕ್, ಜು.22:** ಸಿಕ್ಕಿಂನ ನಾಮ್ಚಿ ಜಿಲ್ಲೆಯ ಜೋಲುಂಗೆಯ ಸಮರ್ದುಂಗ್‌ನಲ್ಲಿ NHPC ತೀಸ್ತಾ ಹಂತ–VI ಜಲವಿದ್ಯುತ್ ಯೋಜನೆಯ ನಿರ್ಮಾಣ ಹಂತದಲ್ಲಿರುವ ಹೆಡ್ ರೇಸ್ ಸುರಂಗ (HRT)ದ ಒಂದು ಭಾಗ ಕುಸಿದ ಘಟನೆಯಲ್ಲಿ 13 ಮೃತದೇಹಗಳನ್ನು ಹೊರತೆಗೆಯಲಾಗಿದೆ ಎಂದು NHPC ಬುಧವಾರ ತಿಳಿಸಿದೆ.

ಸೋಮವಾರ ಮಧ್ಯಾಹ್ನ ಈ ಅವಘಡ ಸಂಭವಿಸಿದೆ. ಈ ದುರದೃಷ್ಟಕರ ಘಟನೆಯಲ್ಲಿ ಮೃತಪಟ್ಟ ಪ್ರತಿಯೊಬ್ಬರ ಕುಟುಂಬದವರಿಗೆ ತಲಾ 5 ಲಕ್ಷ ರೂ.ಗಳ ಪರಿಹಾರವನ್ನು ನೀಡುವುದಾಗಿ NHPC ಘೋಷಿಸಿದೆ.

ಅಧಿಕಾರಿಗಳ ಪ್ರಕಾರ, ಸುರಂಗ ಕುಸಿತದ ನಂತರ ಶಂಕಿತ ಮೀಥೇನ್ ಅನಿಲ ಸೋರಿಕೆಯಾಗಿ, ಸುರಂಗವು ದಟ್ಟವಾದ ಹೊಗೆ ಮತ್ತು ವಿಷಕಾರಿ ಅನಿಲಗಳಿಂದ ತುಂಬಿದೆ. ದಕ್ಷಿಣ ಸಿಕ್ಕಿಂನಲ್ಲಿರುವ ತೀಸ್ತಾ ಹಂತ–VI ಜಲವಿದ್ಯುತ್ ಯೋಜನೆಯ ನಿರ್ಮಾಣ ಹಂತದಲ್ಲಿರುವ ಹೆಡ್ ರೇಸ್ ಸುರಂಗದಲ್ಲಿ ರಕ್ಷಣಾ ಕಾರ್ಯಾಚರಣೆಗಳು ಮುಂದುವರೆದಿದ್ದು, ಜಿಲ್ಲಾಡಳಿತ, NDRF, SDRF, NHPC, ಪಟೇಲ್ ಎಂಜಿನಿಯರಿಂಗ್ (PEL), ಈಸ್ಟರ್ನ್ ಕೋಲ್ಡ್ ಫೀಲ್ಡ್ಸ್, ವೆಸ್ಟರ್ನ್ ಕೋಲ್ಡ್ ಫೀಲ್ಡ್ಸ್, ಸ್ಥಳೀಯ ಅಧಿಕಾರಿಗಳು ಮತ್ತು ಇತರ ಏಜೆನ್ಸಿಗಳ ನಡುವೆ ನಿಕಟ ಸಮನ್ವಯದೊಂದಿಗೆ ಕಾರ್ಯಾಚರಣೆ ನಡೆಯುತ್ತಿದೆ. ಸುರಂಗದೊಳಗೆ ಸಿಲುಕಿರುವ 25 ಸಿಬ್ಬಂದಿಗಳಲ್ಲಿ, ಇಲ್ಲಿಯವರೆಗೆ 13 ಶವಗಳನ್ನು ಹೊರತೆಗೆಯಲಾಗಿದೆ. ಉಳಿದ ಸಿಬ್ಬಂದಿಯನ್ನು ಆದಷ್ಟು ಬೇಗ ಪತ್ತೆಹಚ್ಚಲು ಮತ್ತು ಸ್ಥಳಾಂತರಿಸಲು ಸಾಧ್ಯವಿರುವ ಎಲ್ಲ ಪ್ರಯತ್ನಗಳನ್ನು ಮಾಡಲಾಗುತ್ತಿದೆ ಎಂದು ನಿಗಮ ತಿಳಿಸಿದೆ.

ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ್ತು ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಸುವೇಂದು ಅಧಿಕಾರಿ ಮಂಗಳವಾರ ಮುಖ್ಯಮಂತ್ರಿ ತಮಾಂಗ್ ಅವರೊಂದಿಗೆ ದೂರವಾಣಿಯಲ್ಲಿ ಮಾತನಾಡಿ, ಸಾಧ್ಯವಿರುವ ಎಲ್ಲ ಸಹಾಯದ ಭರವಸೆ ನೀಡಿದ್ದಾರೆ.

# ಪ್ರಶ್ನೆಪತ್ರಿಕೆ ಸೋರಿಕೆ ವಿಚಾರದಲ್ಲಿ ರಾಜಕೀಯ ಸಲ್ಲದು: ಜೆ.ಪಿ ನಡ್ಡಾ



■ ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವತ್ತ ಗಮನಹರಿಸಬೇಕಿದೆ

■ ಸರ್ಕಾರ ಚರ್ಚೆಗೆ ಮುಕ್ತವಾಗಿದೆ

ನವದೆಹಲಿ, ಜು.22: ನರೇಂದ್ರ ಮೋದಿ ಸರ್ಕಾರವು "ಜವಾಬ್ದಾರಿಯುತ ಮತ್ತು ಸ್ಪಂದಿಸುವ" ಮತ್ತು ಪ್ರಶ್ನೆಪತ್ರಿಕೆ ಸೋರಿಕೆಯ ಗಂಭೀರ ವಿಷಯದ ಕುರಿತು ಸಂಸತ್ತಿನಲ್ಲಿ ಆಳವಾದ ಚರ್ಚೆಗೆ ಸಿದ್ಧವಾಗಿದೆ ಎಂದು ಕೇಂದ್ರ ಆರೋಗ್ಯ ಸಚಿವ ಜೆ.ಪಿ. ನಡ್ಡಾ ಹೇಳಿದ್ದಾರೆ.

ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆಗೆ ವಿರೋಧ ಪಕ್ಷದ ಬೇಡಿಕೆಯ ಮಧ್ಯೆ ಮಾಧ್ಯಮ ಪ್ರತಿನಿಧಿಗಳನ್ನು ಉದ್ದೇಶಿಸಿ ಮಾತನಾಡಿದ ನಡ್ಡಾ, ಇಂಡಿ ಮೈತ್ರಿ ಪಕ್ಷಗಳ ಆಡಳಿತವಿರುವ ರಾಜ್ಯಗಳಲ್ಲಿ ಇದೇ ರೀತಿಯ ಘಟನೆಗಳು ಸಂಭವಿಸಿದಾಗ ರಾಹುಲ್‌ಗಾಂಧಿ ಅವರು ಏಕೆ ಮೌನವಾಗಿದ್ದರು. ಅವರು ಆಯ್ಕೆಯ ರಾಜಕಾರಣವಾಗಿದೆ ಎಂದರು.

ಪ್ರಶ್ನೆಪತ್ರಿಕೆ ಸೋರಿಕೆಯ ಬಗ್ಗೆ ವಿದ್ಯಾರ್ಥಿಗಳ ಕಳವಳವನ್ನು ರಾಜಕೀಯಗೊಳಿಸಬಾರದು ಮತ್ತು ಈ ವಿಷಯದಿಂದ ರಾಜಕೀಯ ಲಾಭ ಪಡೆಯುವುದು ಸೂಕ್ತವಲ್ಲ ಎಂದು ನಡ್ಡಾ ಹೇಳಿದರು. "ಇದು ಒಂದು ಪ್ರಮುಖ ಮತ್ತು ಗಂಭೀರ ವಿಷಯ. ನರೇಂದ್ರ ಮೋದಿ ಸರ್ಕಾರ ಇದರ ಬಗ್ಗೆ ಗಂಭೀರವಾಗಿದೆ, ಅದಕ್ಕಾಗಿಯೇ ನಾವು ಸಂಸತ್ತಿನಲ್ಲಿ ಚರ್ಚೆಯನ್ನು ಪ್ರಸ್ತಾಪಿಸಿದ್ದೇವೆ. ಈ ಸಮಸ್ಯೆಗೆ ಪರಿಹಾರಗಳನ್ನು ಕಂಡುಕೊಳ್ಳುವತ್ತ ನಾವು ಗಮನಹರಿಸಬೇಕು ಮತ್ತು ಅಂತಹ ಚರ್ಚೆಗೆ ಸಂಸತ್ತು ಅತ್ಯುತ್ತಮ ವೇದಿಕೆಯಾಗಿದೆ" ಎಂದು ಅವರು ಹೇಳಿದರು.

ವಿರೋಧ ಪಕ್ಷಗಳು ಆರೋಪ ಮತ್ತು ಪ್ರತಿ–ಆರೋಪಗಳನ್ನು ಮೀರಿ ಮುಂದುವರಿಯಬೇಕು ಎಂದು ಒತ್ತಾಯಿಸಿದ ನಡ್ಡಾ, ಪ್ರಶ್ನೆಪತ್ರಿಕೆ ಸೋರಿಕೆಯ ಹಿಂದಿನ ಕಾರಣಗಳನ್ನು ಗುರುತಿಸುವುದು ಮತ್ತು ವ್ಯವಸ್ಥೆಯನ್ನು ಬಲಪಡಿಸುವ ಮಾರ್ಗಗಳ ಮೇಲೆ ಚರ್ಚೆ ಕೇಂದ್ರೀಕರಿಸಬೇಕು ಎಂದು ಹೇಳಿದರು.

ನಾವು ಆರೋಪ ಮತ್ತು ಆರೋಪಗಳನ್ನು ಮೀರಿ ಈ ವಿಷಯವನ್ನು ಆಳವಾಗಿ ಚರ್ಚಿಸಬೇಕು. ಸಂಸತ್ತು ಅಂತಹ ಚರ್ಚೆಗೆ ಉತ್ತಮ ಮಾಧ್ಯಮವಾಗಿದೆ ಮತ್ತು ನಾವು ಅದಕ್ಕೆ ಸಿದ್ಧರಿದ್ದೇವೆ. "ನಮ್ಮ ಸರ್ಕಾರ ಎಲ್ಲಾ ವಿಷಯಗಳ ಬಗ್ಗೆ ಚರ್ಚೆಗಳಿಗೆ ಮುಕ್ತವಾಗಿದೆ ಮತ್ತು ಅವುಗಳನ್ನು ಪರಿಹರಿಸಲು ಯಾವಾಗಲೂ ಸಿದ್ಧವಾಗಿದೆ ಎಂದರು.

ರಾಹುಲ್ ಗಾಂಧಿಯವರ ಪತ್ರಿಕಾಗೋಷ್ಠಿಯ ನಂತರ, ಕಾಕ್ರೋಚ್ ಜನತಾ ಪಕ್ಷ (ಸಿಜೆಪಿ) ಮತ್ತು ಕಾರ್ಯಕರ್ತೆ ಸೋನಮ್ ವಾಂಗ್ಚುಕ್ ಅವರನ್ನು ತಲುಪುವಲ್ಲಿ ನರೇಂದ್ರ ಮೋದಿ ಸರ್ಕಾರದ ಮುಖವಾಗಿ ಹೊರಹೊಮ್ಮಿರುವ ನಡ್ಡಾ ಅವರನ್ನು ಕಣಕ್ಕಿಳಿಸುವ ನಿರ್ಧಾರ ತೆಗೆದುಕೊಳ್ಳಲಾಗಿದೆ. ಈ ಸಭೆಯಲ್ಲಿ ಎನ್‌ಡಿಎ ಆಳ್ವಿಕೆಯಲ್ಲಿ 150ಕ್ಕೂ ಹೆಚ್ಚು ಪ್ರಶ್ನೆಪತ್ರಿಕೆ ಸೋರಿಕೆಯಾಗಿದೆ ಎಂದು ಹೇಳಿಕೊಂಡರು ಮತ್ತು ಭಾರತದ ಶಿಕ್ಷಣ ವ್ಯವಸ್ಥೆಯು "ಹದಗೆಟ್ಟಿದೆ" ಎಂದು ಆರೋಪಿಸಿದರು. ಕಾಂಗ್ರೆಸ್ ಮತ್ತು ಇತರ ವಿರೋಧ ಪಕ್ಷಗಳ ಆಡಳಿತದಲ್ಲಿರುವ ರಾಜ್ಯಗಳಲ್ಲಿ ಪ್ರಶ್ನೆಪತ್ರಿಕೆ ಸೋರಿಕೆಯ ನಿದರ್ಶನಗಳನ್ನು ಉಲ್ಲೇಖಿಸಿದ ನಡ್ಡಾ, "ನೀವು ಏಕೆ ಇಷ್ಟೊಂದು ಆಯ್ಕೆ ಮಾಡಿಕೊಂಡಿದ್ದೀರಿ ಎಂದು ನಾನು ರಾಹುಲ್ ಗಾಂಧಿಯವರನ್ನು ಕೇಳಲು ಬಯಸುತ್ತೇನೆ. ಭಾರತ ಮೈತ್ರಿಕೂಟದ ಪಾಲುದಾರರು ಅಧಿಕಾರದಲ್ಲಿರುವ ರಾಜ್ಯಗಳನ್ನು ನೀವು ಏಕೆ ಉಲ್ಲೇಖಿಸಲಿಲ್ಲ. ಅಂದರೆ ನಿಮ್ಮ ಕಾಳಜಿ ವಿದ್ಯಾರ್ಥಿಗಳಲ್ಲ; ನೀವು ಈ ವಿಷಯದಿಂದ ರಾಜಕೀಯ ಲಾಭ ಪಡೆಯಲು ಬಯಸುತ್ತಿದ್ದೀರಿ, ಇದು ದುರದೃಷ್ಟಕರ, ಎಂದು ನಡ್ಡಾ ಹೇಳಿದರು.

# ಐಎನ್‌ಎಸ್ ಮಾಲ್ವನ್ ನೌಕಾಪಡೆಗೆ ಅಧಿಕೃತ ಸೇರ್ಪಡೆ



■ ಏರ್‌ಚೀಫ್ ಮಾರ್ಷಲ್ ಎ.ಪಿ. ಸಿಂಗ್ ಲೋಕಾರ್ಪಣೆ

■ ಆಂಟಿ–ಸಬ್‌ಮೆರಿನ್ ವಾರ್‌ಫೇರ್ ಶ್ಯಾಲೋ ವಾಟರ್ ಕ್ರಾಫ್ಟ್

**ಕಾರವಾರ, ಜು.22:** ಭಾರತೀಯ ನೌಕಾಪಡೆಯ ಬಲವರ್ಧನೆಗೆ ಮತ್ತೊಂದು ಮೈಲಿಗಲ್ಲಾಗಿ 'ಐಎನ್‌ಎಸ್ ಮಾಲ್ವನ್' ಯುದ್ಧನೌಕೆಯು ಕಾರವಾರದ ಐಎನ್‌ಎಸ್ ಕದಂಬ ನೌಕಾನೆಲೆಯಲ್ಲಿ ಅಧಿಕೃತವಾಗಿ ನೌಕಾಪಡೆಗೆ ಸೇರ್ಪಡೆಗೊಂಡಿತು. ಮಾಹೆ ವರ್ಗದ ಎರಡನೇ ಆಂಟಿ–ಸಬ್‌ಮೆರಿನ್ ವಾರ್‌ಫೇರ್ ಶ್ಯಾಲೋ ವಾಟರ್ ಕ್ರಾಫ್ಟ್ ಆಗಿರುವ ಈ ನೌಕೆಯನ್ನು ಏರ್‌ಚೀಫ್ ಮಾರ್ಷಲ್ ಎ.ಪಿ. ಸಿಂಗ್ ಅವರು ಬುಧವಾರ ನೌಕಾಪಡೆಗೆ ಲೋಕಾರ್ಪಣೆಗೊಳಿಸಿದರು.

ಈ ಸಂದರ್ಭದಲ್ಲಿ ಮಾತನಾಡಿ, ಸ್ವದೇಶಿ ತಂತ್ರಜ್ಞಾನದಲ್ಲಿ ನಿರ್ಮಾಣಗೊಂಡ ಈ ಯುದ್ಧನೌಕೆಯು ಕರಾವಳಿ ಕಣ್ಗಾವಲು, ಜಲಾಂತರ್ಗಾಮಿ ವಿರೋಧಿ ಕಾರ್ಯಾಚರಣೆ ಹಾಗೂ ಸಮುದ್ರ ಭದ್ರತೆಯನ್ನು ಇನ್ನಷ್ಟು ಬಲಿಷ್ಠಗೊಳಿಸಲಿದೆ. ಜೊತೆಗೆ, ರಾಷ್ಟ್ರೀಯ ಹಿತಾಸಕ್ತಿ ರಕ್ಷಣೆಯಲ್ಲಿ ಮೂರು ಸೇನಾ ಪಡೆಗಳ ಸಮನ್ವಯತೆ ಹೆಚ್ಚಲಿದ್ದು, ಸುರಕ್ಷಿತ ಕಡಲ ವ್ಯಾಪಾರಕ್ಕೆ ಇದು ಪೂರಕವಾಗಲಿದೆ ಎಂದರು.

ಕಾರವಾರದ ನೌಕಾನೆಲೆಯಲ್ಲಿ ಇದೇ ಮೊದಲ ಬಾರಿಗೆ ಯುದ್ಧ ನೌಕೆಯೊಂದರ ಲೋಕಾರ್ಪಣೆ ನೆರವೇರಿರುವುದು ವಿಶೇಷವಾಗಿದ್ದು, ಪಶ್ಚಿಮ ನೌಕಾ ಕಮಾಂಡ್ನ ವೈಸ್ ಅಡ್ಮಿರಲ್ ಸಂಜಯ್ ವತ್ಸಾಯನ್ ಅವರು ಇದನ್ನು 'ಆತ್ಮನಿರ್ಭರ ಭಾರತ' ಪರಿಕಲ್ಪನೆಗೆ ಅತ್ಯುತ್ತಮ ಉದಾಹರಣೆ ಎಂದು ಬಣ್ಣಿಸಿದರು. ಈ ಐತಿಹಾಸಿಕ ಕಾರ್ಯಕ್ರಮದಲ್ಲಿ ನೌಕೆಯ ಕಮಾಂಡರ್ ಪ್ರವೀಣಕುಮಾರ್ ತಿವಾರಿ, ಕೊಚ್ಚಿ ಶಿಪ್ ಯಾರ್ಡ್‌ನ ವ್ಯವಸ್ಥಾಪಕ ಜೋಸ್ ವಿ.ಜೆ ಸೇರಿದಂತೆ ನೌಕಾಪಡೆ ಹಾಗೂ ರಕ್ಷಣಾ ಸಚಿವಾಲಯದ ಹಲವು ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.



**ನೌಕೆಯ ವಿಶೇಷತೆ**

**ಕೊಚ್ಚಿನ್ ಶಿಪ್‌ಯಾರ್ಡ್ ನಿರ್ಮಿಸಿರುವ ಈ ನೌಕೆಯಲ್ಲಿ ಶೇ.80ಕ್ಕೂ ಹೆಚ್ಚು ಸ್ವದೇಶಿ ಉಪಕರಣಗಳನ್ನು ಬಳಸಲಾಗಿದೆ. 78.8 ಮೀಟರ್ ಉದ್ದ ಹಾಗೂ 1,150 ಟನ್ ತೂಕ ಹೊಂದಿರುವ ಈ ನೌಕೆಯು 30 ಎಂಎಂ ನೇವಲ್ ಗನ್, ಟಾರ್ಪಿಡೊ ಲಾಂಚರ್‌ಗಳು, ರಾಕೆಟ್ ಲಾಂಚರ್‌ಗಳು, 'ಅಭಯ್' ಸೋನಾರ್ ಹಾಗೂ ಬಿಇಎಲ್ ಅಭಿವೃದ್ಧಿಪಡಿಸಿದ ಅತ್ಯಾಧುನಿಕ ಯುದ್ಧ ನಿರ್ವಹಣಾ ವ್ಯವಸ್ಥೆಗಳನ್ನು ಹೊಂದಿದೆ. ಮಹಾರಾಷ್ಟ್ರದ ಐತಿಹಾಸಿಕ ಕರಾವಳಿ ಪಟ್ಟಣ 'ಮಾಲ್ವನ್' ಹೆಸರಿಡಲಾದ ಈ ನೌಕೆಯು ಛತ್ರಪತಿ ಶಿವಾಜಿ ಮಹಾರಾಜರ ಕಡಲ ಪರಂಪರೆಗೆ ಗೌರವ ಸಲ್ಲಿಸುತ್ತದೆ. ನೌಕೆಯ ಚಿಹ್ನೆಯಲ್ಲಿ ಧೈರ್ಯ ಮತ್ತು ಚುರುಕುತನದ ಸಂಕೇತವಾದ 'ಬಾಘ್ ನಖ್' (ಹುಲಿ ಉಗುರು) ಬಳಸಲಾಗಿದೆ.**



**ರಾಷ್ಟ್ರವಾದಿ ಕಾಂಗ್ರೆಸ್ ಪಕ್ಷದ ಅಧ್ಯಕ್ಷ ಶರದ್ ಪವಾರ್ ಪ್ರಧಾನಿ ನರೇಂದ್ರ ಮೋದಿಯವರನ್ನು ಸಂಸತ್ತಿನಲ್ಲಿ ಬುಧವಾರ ಭೇಟಿಯಾಗಿ ಮಾತುಕತೆ ನಡೆಸಿದರು. ಈ ಅನಿರೀಕ್ಷಿತ ಭೇಟಿ ಶರದ್ ಪವಾರ್ ಅವರ ಬಣ ಎನ್‌ಡಿಎಗೆ ಹತ್ತಿರವಾಗುತ್ತಿದೆಯೇ ಎಂಬ ಬಗ್ಗೆ ರಾಜಕೀಯ ವಲಯಗಳಲ್ಲಿ ಊಹಾಪೋಹಗಳಿಗೆ ಮತ್ತೆ ನಾಂದಿ ಹಾಡಿದೆ.**

# ಪೊಲೀಸ್ ದೌರ್ಜನ್ಯ ಪ್ರಶ್ನಿಸಿದ್ದ ಸಿಜೆಪಿ ಅರ್ಜಿಗೆ ಸುಪ್ರೀಂ ಕೋರ್ಟ್ ಸಿಜೆಐ ನಕಾರ



**ನವದೆಹಲಿ, ಜು. 22:** ಕಾಕ್ರೋಚ್ ಜನತಾ ಪಾರ್ಟಿ (ಸಿಜೆಪಿ) ನಡೆಸಿದ ಸಂಸತ್ ಚಲೋ ಮೆರವಣಿಗೆಯ ವೇಳೆ ಪ್ರತಿಭಟನಾ ನಿರತ ವಿದ್ಯಾರ್ಥಿಗಳ ಮೇಲೆ ಪೊಲೀಸರು ನಡೆಸಿದ ದೌರ್ಜನ್ಯವನ್ನು ಪ್ರಶ್ನಿಸಿ ಸಲ್ಲಿಕೆಯಾಗಿದ್ದ ಅರ್ಜಿಯ ತುರ್ತು ವಿಚಾರಣೆ ನಡೆಸಲು ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ (ಸಿಜೆಐ) ಸೂರ್ಯಕಾಂತ್ ನಿರಾಕರಿಸಿದ್ದಾರೆ. ನಮಗೆ ವಿಡಿಯೋಗಳಲ್ಲಿ ಆಸಕ್ತಿಯಿಲ್ಲ, ಅದನ್ನು ನೋಡಲು ನಮಗೆ ಸಮಯವೂ ಇಲ್ಲ, ಎಂದು ಅವರು ಖಾರವಾಗಿ ಪ್ರತಿಕ್ರಿಯಿಸಿದ್ದಾರೆ.

ಮುಖ್ಯ ನ್ಯಾಯಮೂರ್ತಿಗಳ ನೇತೃತ್ವದ ಪೀಠದ ಮುಂದೆ ಬುಧವಾರ ಹಾಜರಾದ ವಕೀಲರೊಬ್ಬರು, ಈ ವಿಷಯವನ್ನು ನ್ಯಾಯಾಲಯವು ಸ್ವಯಂಪ್ರೇರಿತವಾಗಿ (ಸುಮೋಟೋ) ಕೈಗೆತ್ತಿಕೊಳ್ಳುವಂತೆ ಮನವಿ ಮಾಡಿದರು. ಆದರೆ, ನ್ಯಾಯಪೀಠವು ಅರ್ಜಿಯನ್ನು ಪುರಸ್ಕರಿಸಲು ನಿರಾಕರಿಸಿತು. ನಮ್ಮ ಸಮಯವನ್ನು ವ್ಯರ್ಥ ಮಾಡಬೇಡಿ ಮತ್ತು ನಿಮ್ಮ ಸಮಯವನ್ನೂ ವ್ಯರ್ಥ ಮಾಡಿಕೊಳ್ಳಬೇಡಿ ಎಂದು ಸಿಜೆಐ ಸೂರ್ಯಕಾಂತ್ ಅವರು ವಕೀಲರಿಗೆ ಕಟ್ಟುನಿಟ್ಟಾಗಿ ತಿಳಿಸಿದರು.

ನೀಟ್–ಯುಜಿ ಪ್ರಶ್ನೆಪತ್ರಿಕೆ ಸೋರಿಕೆ, ಪರೀಕ್ಷಾ ಅಕ್ರಮಗಳು ಮತ್ತು ರಾಷ್ಟ್ರೀಯ ಪರೀಕ್ಷಾ ಸಂಸ್ಥೆಯಲ್ಲಿನ ಸುಧಾರಣೆಗಳಂತಹ ಸಾರ್ವಜನಿಕ ಹಿತಾಸಕ್ತಿಯ ವಿಷಯಗಳ ಕುರಿತು ವಿದ್ಯಾರ್ಥಿಗಳು ಪ್ರತಿಭಟನೆ ನಡೆಸುತ್ತಿದ್ದರು ಎಂದು ವಕೀಲರು ವಾದಿಸಿದರು. ಆದರೆ, ವಕೀಲರ ಮಾತನ್ನು ಮೊಟಕುಗೊಳಿಸಿದ ಮುಖ್ಯ ನ್ಯಾಯಮೂರ್ತಿಗಳು, ತುಂಬಾ ಧನ್ಯವಾದಗಳು ಎಂದು ಹೇಳಿದರು.

ಪೊಲೀಸರ ದೌರ್ಜನ್ಯವನ್ನು ಸಾಬೀತುಪಡಿಸುವ ವಿಡಿಯೋಗಳಿವೆ ಎಂದು ವಕೀಲರು ಮತ್ತೆ ಪ್ರಸ್ತಾಪಿಸಿದಾಗ, ನಮಗೆ ಸಮಯವಿಲ್ಲ. ನಾವು ಯಾವುದೇ ವಿಡಿಯೋಗಳನ್ನು ನೋಡಲು ಬಯಸುವುದಿಲ್ಲ ಎಂದು ಸಿಜೆಐ ಖಚಿತವಾಗಿ ಹೇಳಿದರು.

ಇದೇ ವಿಚಾರವಾಗಿ ಸಲ್ಲಿಕೆಯಾಗಿದ್ದ ಇದೇ ರೀತಿಯ ಅರ್ಜಿಯ ತುರ್ತು ವಿಚಾರಣೆಯನ್ನು ದೆಹಲಿ ಹೈಕೋರ್ಟ್ ಕೂಡ ಮಂಗಳವಾರ ನಿರಾಕರಿಸಿತ್ತು. ಈ ವಿಚಾರದಲ್ಲಿ ನ್ಯಾಯಾಲಯವನ್ನು ಎಳೆದು ತರಬೇಡಿ ಎಂದು ಅದು ಎಚ್ಚರಿಸಿತ್ತು.

ನೀಟ್–ಯುಜಿ 2026ರ ಪ್ರಶ್ನೆಪತ್ರಿಕೆ ಸೋರಿಕೆ ಹಾಗೂ ಇತರ ಪರೀಕ್ಷಾ ಅಕ್ರಮಗಳನ್ನು ಖಂಡಿಸಿ ಕಾಕ್ರೋಚ್ ಜನತಾ ಪಾರ್ಟಿ ನೇತೃತ್ವದಲ್ಲಿ ಯುವಜನರು ಬೃಹತ್ ಪ್ರತಿಭಟನೆಗಳನ್ನು ನಡೆಸುತ್ತಿದ್ದಾರೆ. ಕುತೂಹಲಕಾರಿ ಸಂಗತಿಯೆಂದರೆ, ಇದೇ ವರ್ಷದ ಆರಂಭದಲ್ಲಿ ಸಿಜೆಐ ಸೂರ್ಯಕಾಂತ್ ಅವರು, ನಿರುದ್ಯೋಗಿ ಯುವಕರು ಪತ್ರಿಕೋದ್ಯಮ ಮತ್ತು ಸಾಮಾಜಿಕ ಹೋರಾಟದತ್ತ ವಾಲುತ್ತಿರುವುದನ್ನು ಪ್ರಸ್ತಾಪಿಸುವಾಗ ಕಾಕ್ರೋಚ್ (ಜಿರಲೆ) ಎಂಬ ಪದವನ್ನು ಬಳಸಿದ್ದರು. ಅವರ ಆ ಹೇಳಿಕೆಯನ್ನೇ ವಿಡಂಬನಾತ್ಮಕವಾಗಿ ಅಣಕಿಸಿ, ಯುವ ಸಮೂಹವು ಈ ಕಾಕ್ರೋಚ್ ಜನತಾ ಪಕ್ಷ ವೇದಿಕೆಯನ್ನು ಹುಟ್ಟುಹಾಕಿದೆ.

ಆದರೆ, ಸಿಜೆಐ ಅವರ ಈ ಹೇಳಿಕೆಗೆ ಆಕ್ರೋಶ ಮತ್ತು ಭಾರಿ ವಿರೋಧ ವ್ಯಕ್ತವಾದಾಗ, ನಕಲಿ ಮತ್ತು ಬೋಗಸ್ ಪದವಿಗಳನ್ನು ಹೊಂದಿರುವವರನ್ನು ಉದ್ದೇಶಿಸಿ ಮಾತ್ರ ತಾವು ಆ ರೀತಿ ಹೇಳಿದ್ದಾಗಿ ಅವರು ನಂತರ ಸ್ಪಷ್ಟನೆ ನೀಡಿದ್ದರು.

# ಉದ್ಧವ್ ಠಾಕ್ರೆಗೆ ಸುಪ್ರೀಂನಲ್ಲಿ ಹಿನ್ನಡೆ



**ನವದೆಹಲಿ, ಜು. 22:** ಸುಪ್ರೀಂಕೋರ್ಟ್‌ನಲ್ಲಿ ಶಿವಸೇನೆ (ಯುಬಿಟಿ) ಮುಖ್ಯಸ್ಥ ಉದ್ಧವ್ ಠಾಕ್ರೆ ಅವರಿಗೆ ಮತ್ತೊಮ್ಮೆ ಹಿನ್ನಡೆಯಾಗಿದ್ದು, ಏಕನಾಥ್ ಶಿಂಧೆ ನೇತೃತ್ವದ ಶಿವಸೇನೆಯೊಂದಿಗೆ ತನ್ನ ಆರು ಲೋಕಸಭಾ ಸಂಸದರ ವಿಲೀನಕ್ಕೆ ಲೋಕಸಭೆ ಸ್ಪೀಕರ್ ಅನುಮೋದನೆ ನೀಡಿರುವ ಆದೇಶಕ್ಕೆ ತಡೆ ನೀಡಲು ನಿರಾಕರಿಸಿದ್ದು, ಎಲ್ಲಾ ಪಕ್ಷಗಳ ವಾದಗಳನ್ನು ಆಲಿಸಿದ ನಂತರ ವಿಷಯವನ್ನು ಪರಿಶೀಲಿಸುವುದಾಗಿ ಹೇಳಿದೆ.

ನ್ಯಾಯಮೂರ್ತಿಗಳಾದ ಪಿ.ಎಸ್. ನರಸಿಂಹ ಮತ್ತು ಅಲೋಕ್ ಆರಾಧೆ ಅವರ ದ್ವಿಸದಸ್ಯ ಪೀಠ ಅರ್ಜಿಯ ವಿಚಾರಣೆ ನಡೆಸಿದ್ದು, ಲೋಕಸಭೆ ಸ್ಪೀಕರ್ ಓಂ ಬಿರ್ಲಾ ಮತ್ತು ವಿಲೀನಗೊಂಡ ಆರು ಸಂಸದರಿಗೆ ನೋಟಿಸ್ ಜಾರಿ ಮಾಡಿದ್ದು, ಎರಡು ವಾರಗಳಲ್ಲಿ ತಮ್ಮ ಪ್ರತಿ–ಅಫಿಡವಿಟ್ ಸಲ್ಲಿಸುವಂತೆ ನಿರ್ದೇಶಿಸಿತು.

ಶಿವಸೇನಾ(ಯುಬಿಟಿ) ಬಣದಿಂದ ಸಿಡಿದೆದ್ದು ಹೊರಗೆ ಬಂದಿದ್ದ ಆರು ಸಂಸದರು ತಾವು 2/3 ಬಹುಮತವಿದ್ದು, ಶಿಂಧೆ ಸೇನಾದಲ್ಲಿ ವಿಲೀನಗೊಳ್ಳುವುದಾಗಿ ಸ್ಪೀಕರ್‌ಗೆ ಪತ್ರ ಕೊಟ್ಟಿದ್ದರು. ಈ ಅರ್ಜಿಯನ್ನು ಜು.18ರಂದು ಲೋಕಸಭೆ ಸ್ಪೀಕರ್ ಓಂ ಬಿರ್ಲಾ ಅನುಮೋದಿಸಿದ್ದರು. ಸ್ಪೀಕರ್ ಅವರ ನಿರ್ಧಾರ ಪ್ರಶ್ನಿಸಿ ಉದ್ಧವ್ ಬಣ ಅರ್ಜಿ ಸಲ್ಲಿಸಿದೆ.

ಶಿವಸೇನೆ (ಯುಬಿಟಿ) ಪರ ವಾದಿಸಿದ ಹಿರಿಯ ವಕೀಲ ದೇವದತ್ತ ಕಾಮತ್, ಆರು ಸಂಸದರ ವಿಲೀನದ ಸುತ್ತೋಲೆಗೆ ಜಂಟಿ ಕಾರ್ಯದರ್ಶಿಯೊಬ್ಬರು ಸಹಿ ಮಾಡಿದ್ದಾರೆ. ಮತ್ತು ವಿಲೀನಕ್ಕೆ ಅನುಮೋದನೆ ನೀಡಿ ಸ್ಪೀಕರ್ ಯಾವುದೇ ಅಧಿಕೃತ ಆದೇಶ ಹೊರಡಿಸಿದ್ದಾರೆಯೇ ಎಂಬುದಕ್ಕೆ ಯಾವುದೇ ಆಧಾರವಿಲ್ಲ. ಮೂಲ ರಾಜಕೀಯ ಪಕ್ಷದಿಂದ ಯಾವುದೇ ವಾಸ್ತವಿಕ ವಿಲೀನ ನಡೆಯದೇ, ಈ ಆರು ಜನ ಸಂಸದರು ಏಕಪಕ್ಷೀಯವಾಗಿ ಎದುರಾಳಿ ಪಕ್ಷದೊಂದಿಗೆ ವಿಲೀನಗೊಳ್ಳುವುದಾಗಿ ಘೋಷಿಸಿಕೊಂಡಿದ್ದಾರೆ. ಇಂತಹ ನಡೆಯನ್ನು ಕಾನೂನಿನಡಿಯಲ್ಲಿ ಮಾನ್ಯವಾದ ವಿಲೀನ ಎಂದು ಪರಿಗಣಿಸಲು ಸಾಧ್ಯವಿಲ್ಲ ಎಂದು ವಾದಿಸಿದರು. ಬಳಿಕ ಎಲ್ಲಾ ವಾದಗಳನ್ನು ಆಲಿಸಿದ ಪೀಠವು, ಎರಡೂ ವಾರಗಳ ಬಳಿಕ ವಿಚಾರಣೆ ಕೈಗೆತ್ತಿಕೊಳ್ಳುವುದಾಗಿ ಹೇಳಿ, ವಿಚಾರಣೆಯನ್ನು ಮುಂದೂಡಿದೆ.

# ಶ್ರೀಲಕ್ಷ್ಮೀವರತೀರ್ಥ ಶ್ರೀಪಾದರ 8ನೇ ವರ್ಷದ ಆರಾಧನೆ ಸಂಪನ್ನ



**ಮುಂಬಯಿ, ಜು.22:** ಶಿರೂರುಮಠದ ಕೀರ್ತಿಶೇಷ ಶ್ರೀಲಕ್ಷ್ಮೀವರತೀರ್ಥ ಶ್ರೀಪಾದರ 8ನೇ ವರ್ಷದ ಆರಾಧನಾ ಮಹೋತ್ಸವವು ಉಡುಪಿ ಶ್ರೀರಾಘವೇಂದ್ರ ಮಠದ ಸನ್ನಿಧಾನದಲ್ಲಿ ಬಹು ವೈಭವದಿಂದ ಜರಗಿತು.ಶ್ರೀಲಕ್ಷ್ಮೀವರತೀರ್ಥರ ಪೂರ್ವಾಶ್ರಮದ ಕುಟುಂಬಿಕರಿಂದ ಈ ಸಮಾರಂಭವು ಶಾಸ್ತ್ರೋಕ್ತವಾಗಿ ಆಯೋಜನೆಗೊಂಡಿತ್ತು.

ಪ್ರಾತಃಕಾಲದಲ್ಲಿ ರಾಘವೇಂದ್ರ ಗುರುಸಾರ್ವಭೌಮರ ಸಮ್ಮುಖದಲ್ಲಿ ಪ್ರಾರ್ಥನೆ ಸಲ್ಲಿಸಿದ ನಂತರ ಪವಮಾನ ಕಲಶಾಭಿಷೇಕ ಹೋಮ ಹಾಗೂ ವಿರಜಾ ಹೋಮವನ್ನು ವೇದಮೂರ್ತಿ ನಟರಾಜ ಉಪಾಧ್ಯಾಯ ಹಾಗೂ ವೇದಮೂರ್ತಿ ಅನಿಲ್ ನಡೆಸಿಕೊಟ್ಟರು.

ತದನಂತರ ಲಕ್ಷ್ಮೀವರತೀರ್ಥ ಶ್ರೀಪಾದರ ಮೃತ್ತಿಕಾ ವೃಂದಾವನಕ್ಕೆ ಪಂಚಾಮೃತಾಭಿಷೇಕ ಹಾಗೂ ವಿಶೇಷ ಪೂಜೆಯನ್ನು ಶ್ರೀಲಕ್ಷ್ಮೀವರತೀರ್ಥ ಶ್ರೀಪಾದರ ಪೂರ್ವಾಶ್ರಮದ ಸಹೋದರ ಪಿ.ಲಾತವ್ಯ ಆಚಾರ್ಯರು ನೆರವೇರಿಸಿದರು. ಅಪರಾಹ್ನ ಅನ್ನಸಂತರ್ಪಣೆ ಜರಗಿತು.

ಈ ಶುಭಸಂದರ್ಭದಲ್ಲಿ ಶ್ರೀರಾಯರ ಮಠದ ಜಯತೀರ್ಥ ಆಚಾರ್ಯ, ಅಪ್ಪಣ್ಣಆಚಾರ್ಯ, ಹರಿಕೃಷ್ಣ ಪುನರೂರು, ಶ್ರೀಲಕ್ಷ್ಮೀನಾರಾಯಣ ತಂತ್ರಿ, ಸೊಂಡೂರು ಪ್ರಹ್ಲಾದ ಆಚಾರ್ಯ, ಶ್ರೀಪಿ.ವಾದಿರಾಜ ಆಚಾರ್ಯ, ಪಿ.ಶ್ರೀನಿವಾಸ ಆಚಾರ್ಯ, ಶ್ರೀಪಿ.ವೃಜನಾಥ ಆಚಾರ್ಯ, ಗೋಪಾಲ ಕೃಷ್ಣಭಟ್ ಒಳಕಾಡು, ಡಾ॥ವ್ಯಾಸರಾಜ ತಂತ್ರೀ, ಚೆನ್ನೈನ ರಾಜಗೋಪಾಲ್, ರಾಜೇಂದ್ರ ಆಚಾರ್ಯ ಬಡಗುಬೆಟ್ಟು, ಶ್ರೀಪಾದರ ಪೂರ್ವಾಶ್ರಮದ ಸಹೋದರರು, ಅಕ್ಷೋಭ್ಯ ಆಚಾರ್ಯ, ಅರ್ಜುನ ಆಚಾರ್ಯ,ಶ್ರೀವಿಶಾಲ ಆಚಾರ್ಯ, ಶಂಕರನಾರಾಯಣ ಹೊಳ್ಳ ಕುಂದಾಪುರ, ಇಮೇಜ್ ಮೊಬೈಲ್ ಸಂಸ್ಥೆಯ ಯಾದವ, ರಾಕೇಶ್ ಹಾಗೂ ಇನ್ನೂ ಅನೇಕ ಮಹನೀಯರು ಶ್ರೀಪಾದರ ಆರಾಧನಾ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಕೇಮಾರು ಶ್ರೀಸಾಂದೀಪನಿ ಮಠದ ಆಶ್ರಮದಲ್ಲಿ ಈಶವಿಠಲದಾಸ ಸ್ವಾಮೀಜಿಯವರು ಶಿರೂರು ಶ್ರೀಪಾದರ ಆರಾಧನಾ ನಿಮಿತ್ತ ವಿಶೇಷ ಪೂಜೆ ಹಾಗೂ ಪುಷ್ಪಾರ್ಚನೆಯನ್ನು ಆಯೋಜಿಸಿದ್ದರು.



**ಮುಲ್ಕಿಯ ವಿಜಯ ಕಾಲೇಜಿನ ಜಾಗತಿಕ ಹಳೇ ವಿದ್ಯಾರ್ಥಿ ಸಂಘ, ಮುಂಬಯಿಯ ಗೌರವ ಅಧ್ಯಕ್ಷ ವಾಸುದೇವ ಸಾಲಿಯಾನ್ ಅವರು ಇತ್ತೀಚೆಗೆ ಮುಲ್ಕಿಯ ವಿಜಯ ಕಾಲೇಜಿಗೆ ಭೇಟಿ ನೀಡಿ ಸಂಘದ ಪರವಾಗಿ 5 ಲಕ್ಷ ರೂ.ಗಳ ಚೆಕ್ಕನ್ನು ಪ್ರಾಂಶುಪಾಲೆ ಡಾ. ವೈ.ವಿ. ಶೈಲಜಾ ಅವರಿಗೆ ಹಸ್ತಾಂತರಿಸಿದರು. ಹಳೇ ವಿದ್ಯಾರ್ಥಿಗಳ ಸಂಘವು ಪ್ರತಿವರ್ಷ ಕಾಲೇಜಿನ ಬಡ ವಿದ್ಯಾರ್ಥಿಗಳಿಗೆ ಸಹಾಯಧನ ನೀಡುತ್ತಲಿದೆ. ವಿಜಯ ಪಿಯು ಕಾಲೇಜು ಪ್ರಾಂಶುಪಾಲ ಬಿ.ಅರುಣಕುಮಾರ್ ಇದ್ದರು.**

# ಇಂದು ಜಾಗತಿಕ ಸಾಂಸ್ಥಿಕ ಸಾಮಾಜಿಕ ಹೊಣೆಗಾರಿಕೆ ಸಮ್ಮೇಳನ: ಸಿಎಂ ಉದ್ಘಾಟನೆ

**ಬೆಂಗಳೂರು, ಜು.22:** ಕರ್ನಾಟಕವನ್ನು ಸುಸ್ಥಿರ ವ್ಯವಹಾರಗಳ ಕ್ಷೇತ್ರದಲ್ಲಿ ಮುಂಚೂಣಿಗೆ ತರುವ ನಿಟ್ಟಿನಲ್ಲಿ ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾಸಂಸ್ಥೆ (ಎಫ್‌ಕೆಸಿಸಿಐ) ಮತ್ತು ಯುಎನ್ ಗ್ಲೋಬಲ್ ಕಾಂಪ್ಯಾಕ್ಟ್ ನೆಟ್‌ವರ್ಕ್ ಇಂಡಿಯಾ ಸಹಯೋಗದಲ್ಲಿ ಗುರುವಾರ ಜಾಗತಿಕ ಸಾಂಸ್ಥಿಕ ಸಾಮಾಜಿಕ ಹೊಣೆಗಾರಿಕೆ ಸಮ್ಮೇಳನ 2026 ಆಯೋಜಿಸಲಾಗಿದೆ. ಜು.23ರ ಬೆಳಿಗ್ಗೆ 10 ಗಂಟೆಗೆ ಕೆ.ಜಿ ರಸ್ತೆಯ ಎಫ್‌ಕೆಸಿಸಿಐನ ಸರ್ ಎಂ.ವಿ. ಆಡಿಟೋರಿಯಂನಲ್ಲಿ ನಡೆಯಲಿರುವ ಈ ಪ್ರತಿಷ್ಠಿತ ಸಮ್ಮೇಳನವನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಉದ್ಘಾಟಿಸಲಿದ್ದಾರೆ.

ಸುಸ್ಥಿರತೆಯನ್ನು ವ್ಯಾಪಕಗೊಳಿಸುವುದು ಸ್ಥಳೀಯ ಕ್ರಿಯೆ, ಜಾಗತಿಕ ಪ್ರಭಾವ ಎಂಬ ಧ್ಯೇಯವಾಕ್ಯದಡಿ ಸಮ್ಮೇಳನ ನಡೆಯುತ್ತಿದ್ದು, ಕೃತಕ ಬುದ್ಧಿಮತ್ತೆ, ಸಮಗ್ರತೆ, ಆರೋಗ್ಯ, ಶಿಕ್ಷಣ, ಸುಸ್ಥಿರ ನಗರಗಳು, ಮಹಿಳಾ ನಾಯಕತ್ವ ಮತ್ತು ಹವಾಮಾನ ಕ್ರಿಯೆಗಳ ಬಗ್ಗೆ ವಿಸ್ತೃತ ಚರ್ಚೆಗಳು, ವ್ಯವಹಾರದ ಪ್ರಮುಖ ಆಯಾಮಗಳ ಕುರಿತ ಐದು ಗೋಷ್ಠಿಗಳನ್ನು ಇದು ಒಳಗೊಂಡಿದೆ.

ನಾಯಕತ್ವ ಸಂವಾದ ಸರಣಿ, ಸಾಮಾಜಿಕ ವಲಯಕ್ಕಾಗಿ ಕೃತಕ ಬುದ್ಧಿಮತ್ತೆ ಕುರಿತ ಪೂರ್ವ–ಸಮ್ಮೇಳನ ಮಾಸ್ಟರ್‌ಕ್ಲಾಸ್ ಕೂಡ ನಡೆಯಲಿದ್ದು, ಗೂಗಲ್, ಇನ್ಫೋಸಿಸ್, ಕೋಲ್ಗೇಟ್–



ಪಾಮೋಲಿವ್, ಮರ್ಸಿಡಿಸ್ ಬೆಂಜ್, ನಿಮ್ಹಾನ್ಸ್, ಪೇಪಾಲ್, ಟೊಯೊಟಾ ಕಿರ್ಲೋಸ್ಕರ್ ಮೋಟಾರ್ ಸೇರಿದಂತೆ ಪ್ರಮುಖ ಶೈಕ್ಷಣಿಕ ಮತ್ತು ಸ್ವಯಂಸೇವಾ ಸಂಸ್ಥೆಗಳ ಗಣ್ಯರು ಸಮ್ಮೇಳನದಲ್ಲಿ ಭಾಗವಹಿಸಲಿದ್ದಾರೆ.

ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾಸಂಸ್ಥೆಯ ಅಧ್ಯಕ್ಷರಾದ ಉಮಾ ರೆಡ್ಡಿ ಮಾತನಾಡಿ, ಇದು ಬದಲಾವಣೆಯತ್ತ ಸಾಗುವ ಮಹತ್ವದ ಹೆಜ್ಜೆಯಾಗಿದೆ. ಇಂದಿನ ಆರ್ಥಿಕ ಬೆಳವಣಿಗೆಯ ಜೊತೆಗೆ ಸುಸ್ಥಿರತೆ ಮತ್ತು ಸಮಾನತೆಯನ್ನು ಸಾಧಿಸುವುದು ಅಗತ್ಯವಾಗಿದೆ.

ಕೈಗಾರಿಕೆಗಳು, ಸರ್ಕಾರ ಹಾಗೂ ಸಮಾಜ ಒಗ್ಗೂಡಿ ಕಾರ್ಯನಿರ್ವಹಿಸಿದಾಗ ಮಾತ್ರ ಸುಸ್ಥಿರ ಅಭಿವೃದ್ಧಿಯ ಗುರಿ ಸಾಧಿಸಲು ಸಾಧ್ಯ. ಕರ್ನಾಟಕ ಹಸಿರು ಅಭಿವೃದ್ಧಿ, ನವೋದ್ಯಮ ಮತ್ತು ಸಮಗ್ರ ಬೆಳವಣಿಗೆಯಲ್ಲಿ ದೇಶಕ್ಕೆ ಮಾದರಿ ಯಾಗುವ ಸಾಮರ್ಥ್ಯ ಹೊಂದಿದ್ದು, ಈ ಬದಲಾವಣೆಗೆ ನಾಯಕತ್ವ ವಹಿಸಲು ಸಂಪೂರ್ಣ ಸಿದ್ಧವಾಗಿದೆ.

ಸಂಜೆ 5:00 ಗಂಟೆಗೆ 11 ವಲಯಗಳಲ್ಲಿ ಎಫ್‌ಕೆಸಿಸಿಐ ಜಾಗತಿಕ ಸಾಂಸ್ಥಿಕ ಸಾಮಾಜಿಕ ಹೊಣೆಗಾರಿಕೆ ಮತ್ತು ಸುಸ್ಥಿರತಾ ಪ್ರಶಸ್ತಿ ಪ್ರದಾನ ಮಾಡಲಾಗುತ್ತಿದೆ.

ಬೆಂಗಳೂರಿನ ಐಐಎಂ ಪ್ರಾಧ್ಯಾಪಕ ಪ್ರೊ. ಪಿ ಡಿ ಜೋಸ್ ಪ್ರಧಾನ ಭಾಷಣ ಮಾಡಲಿದ್ದು, ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್, ಅದಮ್ಯ ಚೇತನ ಫೌಂಡೇಶನ್ ಅಧ್ಯಕ್ಷೆ ತೇಜಸ್ವಿನಿ ಅನಂತ್‌ಕುಮಾರ್, ಯುಎನ್ ಇಂಡಿಯಾ ಯುಎನ್ ಎಚ್‌ಆರ್ ಸಿ ಮುಖ್ಯಸ್ಥರಾದ ಸ್ಟೀಫನ್ ಪ್ರೈಸ್ನರ್, ದಕ್ಷಿಣ ಭಾರತದ ಇಸ್ರೇಲ್‌ನ ರಾಯಭಾರಿ ಓರ್ಲಿನ್ ವೈಟ್ಜ್‌ಮ್ಯಾನ್, ಯುಎನ್ ಗ್ಲೋಬಲ್ ಕಾಂಪೆಕ್ಟ್ ಭಾಗವಹಿಸಲಿದ್ದಾರೆ.




ದೆಹಲಿ ಪೊಲೀಸರು ವಿದ್ಯಾರ್ಥಿಗಳ ಮೇಲೆ ಲಾಠಿ ಚಾರ್ಜ್ ನಡೆಸಿದ್ದನ್ನು ಖಂಡಿಸಿ ಮತ್ತು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆಗೆ ಒತ್ತಾಯಿಸಿ ಎನ್‌ಎಸ್‌ಯುಐ ಸದಸ್ಯರು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಬುಧವಾರ ಪ್ರತಿಭಟನೆ ನಡೆಸಿದರು.

### ಫಲಾನುಭವಿಗಳಿಗೆ ವಿಳಂಬವಾಗದಂತೆ ಪಡಿತರ ತಲುಪಿಸುವ ನಿಟ್ಟಿನಲ್ಲಿ ಆಹಾರ ಇಲಾಖೆ ಕಟ್ಟುನಿಟ್ಟಿನ ನಿರ್ದೇಶನ

# ಬೆಳಗ್ಗೆ 6 ರಿಂದ ರಾತ್ರಿ 10 ಗಂಟೆವರೆಗೆ ನ್ಯಾಯಬೆಲೆ ಅಂಗಡಿ ಕಾರ್ಯಾಚರಣೆ

**ಬೆಂಗಳೂರು, ಜು.22:** ರಾಜ್ಯದ ಪಡಿತರ ಚೀಟಿದಾರರಿಗೆ ಅನುಕೂಲವಾಗುವಂತೆ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಮಹತ್ವದ ಆದೇಶ ಹೊರಡಿಸಿದೆ. ಇನ್ನು ಮುಂದೆ ರಾಜ್ಯದ ಎಲ್ಲಾ ನ್ಯಾಯಬೆಲೆ ಅಂಗಡಿಗಳು ಪ್ರತಿದಿನ ಬೆಳಗ್ಗೆ 6 ಗಂಟೆಯಿಂದ ರಾತ್ರಿ 10 ಗಂಟೆಯವರೆಗೆ ಕಡ್ಡಾಯವಾಗಿ ತೆರೆದಿರಬೇಕು ಹಾಗೂ ಈ ಅವಧಿಯಲ್ಲಿ ಪಡಿತರ ವಿತರಣೆ ನಡೆಸಬೇಕು ಎಂದು ಇಲಾಖೆ ಆಯುಕ್ತರು ನಿರ್ದೇಶನ ನೀಡಿದ್ದಾರೆ.

ಜುಲೈ–2026ರ ಅನ್ನಭಾಗ್ಯ ಅಕ್ಕಿ ಹಾಗೂ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ ಅಡಿ ವಿತರಿಸಲಾಗುವ ಅಕ್ಕಿಯನ್ನು ಫಲಾನುಭವಿಗಳಿಗೆ ಯಾವುದೇ ವಿಳಂಬವಿಲ್ಲದೆ ತಲುಪಿಸುವ ಉದ್ದೇಶದಿಂದ ಈ ಆದೇಶ ಹೊರಡಿಸಲಾಗಿದೆ. ಕೆಲವು ಜಿಲ್ಲೆಗಳಲ್ಲಿ ನ್ಯಾಯಬೆಲೆ ಅಂಗಡಿ ಮಾಲೀಕರು ಸಗಟು ಮಳಿಗೆಗಳಿಂದ ಆಹಾರಧಾನ್ಯವನ್ನು ಸಂಪೂರ್ಣವಾಗಿ ಪಡೆದುಕೊಂಡಿದ್ದರೂ ಪಡಿತರ ವಿತರಣೆಯನ್ನು ತಕ್ಷಣ ಆರಂಭಿಸದೆ ವಿಳಂಬ ಮಾಡುತ್ತಿರುವುದು ಇಲಾಖೆಯ ಗಮನಕ್ಕೆ ಬಂದಿದೆ. ಕೆಲವು ಕಡೆ ಎಲ್ಲಾ ಆಹಾರಧಾನ್ಯ ಬಂದ ಬಳಿಕವೇ ವಿತರಣೆ ಆರಂಭಿಸುತ್ತಿರುವ ಪ್ರಕರಣಗಳೂ ವರದಿಯಾಗಿವೆ. ಈ ಹಿನ್ನೆಲೆಯಲ್ಲಿ, ಯಾವ ಪ್ರಮಾಣದ ಆಹಾರಧಾನ್ಯ ಲಭ್ಯವಾಗುತ್ತದೆಯೋ ಅದನ್ನು ಕೂಡಲೇ ಫಲಾನುಭವಿಗಳಿಗೆ ವಿತರಿಸಬೇಕು. ಎಲ್ಲಾ ದಾಸ್ತಾನು ಬರುವವರೆಗೆ ಕಾಯಬಾರದು ಎಂದು ಇಲಾಖೆ ಕಟ್ಟುನಿಟ್ಟಿನ ಸೂಚನೆ ನೀಡಿದೆ.

ಜುಲೈ ಅಂತ್ಯದೊಳಗೆ ವಿತರಣೆ ಪೂರ್ಣಗೊಳಿಸಲು ಸೂಚನೆ, ಜುಲೈ ತಿಂಗಳ ಎನ್‌ಎಫ್‌ಎಸ್‌ಎ ಆಹಾರ ಧಾನ್ಯ ಹಾಗೂ ಅನ್ನಭಾಗ್ಯ ಅಕ್ಕಿಯ ವಿತರಣೆಯನ್ನು ಜುಲೈ 31ರೊಳಗೆ ಪೂರ್ಣಗೊಳಿಸಬೇಕು ಎಂದು ಆದೇಶದಲ್ಲಿ ಸ್ಪಷ್ಟಪಡಿಸಲಾಗಿದೆ.

ಇದಕ್ಕಾಗಿ ಎಲ್ಲಾ ನ್ಯಾಯಬೆಲೆ ಅಂಗಡಿಗಳು ಪ್ರತಿದಿನ ಬೆಳಗ್ಗೆ 6 ಗಂಟೆಯಿಂದ ರಾತ್ರಿ 10 ಗಂಟೆಯವರೆಗೆ ಕಾರ್ಯನಿರ್ವಹಿಸುವುದು ಕಡ್ಡಾಯವಾಗಿದೆ. ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ಜಿಲ್ಲೆಗಳ ಜಂಟಿ ಹಾಗೂ ಉಪನಿರ್ದೇಶಕರು ತಮ್ಮ ವ್ಯಾಪ್ತಿಯ ಎಲ್ಲಾ ನ್ಯಾಯಬೆಲೆ ಅಂಗಡಿಗಳು ನಿಗದಿತ ಸಮಯವನ್ನು ಕಟ್ಟುನಿಟ್ಟಾಗಿ ಪಾಲಿಸುತ್ತಿವೆಯೇ ಎಂಬುದನ್ನು ಪರಿಶೀಲಿಸಬೇಕು ಎಂದು ಸೂಚಿಸಲಾಗಿದೆ. ಆಹಾರ ನಿರೀಕ್ಷಕರು ನಿಯಮಿತವಾಗಿ ಮೇಲ್ವಿಚಾರಣೆ ನಡೆಸಿ, ಅರ್ಹ ಪಡಿತರ ಚೀಟಿದಾರರಿಗೆ ಸಂಪೂರ್ಣ ಆಹಾರಧಾನ್ಯ ವಿತರಣೆ ಆಗುವುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ಇಲಾಖೆ ಆದೇಶಿಸಿದೆ.

ಸರ್ಕಾರದ ಆದೇಶವನ್ನು ಉಲ್ಲಂಘಿಸಿ ನಿಗದಿತ ಸಮಯದಲ್ಲಿ ಅಂಗಡಿ ತೆರೆಯದಿದ್ದರೆ ಅಥವಾ ಪಡಿತರ ವಿತರಣೆಯಲ್ಲಿ ಅನಗತ್ಯ ವಿಳಂಬ ಮಾಡಿದರೆ, ಸಂಬಂಧಪಟ್ಟ ನ್ಯಾಯಬೆಲೆ ಅಂಗಡಿ ವಿತರಕರ ವಿರುದ್ಧ ನಿಯಮಾನುಸಾರ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಎಚ್ಚರಿಕೆ ನೀಡಿದೆ.

### ಇಲಾಖೆ ವ್ಯಾಪ್ತಿಯಲ್ಲಿರುವ ಮಯೂರ ಹೋಟೆಲ್‌ಗಳ ಉನ್ನತೀಕರಣ: ಸಚಿವ ಕೆ.ಜೆ. ಜಾರ್ಜ್

# ರಾಜ್ಯ ಪ್ರವಾಸೋದ್ಯಮ ಮೂಲಸೌಕರ್ಯ ಜಾಗತಿಕ ಮಟ್ಟಕ್ಕೇರಿಸುವ ಉದ್ದೇಶ

**ಬೆಂಗಳೂರು, ಜು.22:** ರಾಜ್ಯದ ಪ್ರವಾಸೋದ್ಯಮ ಮೂಲಸೌಕರ್ಯವನ್ನು ಜಾಗತಿಕ ಗುಣಮಟ್ಟಕ್ಕೆ ಏರಿಸುವ ಉದ್ದೇಶದಿಂದ ಇಲಾಖೆ ವ್ಯಾಪ್ತಿಯಲ್ಲಿರುವ ಮಯೂರ ಹೋಟೆಲ್‌ಗಳು ಹಾಗೂ ಇತರ ಆತಿಥ್ಯ ಕೇಂದ್ರಗಳನ್ನು ಖಾಸಗಿ ಆತಿಥ್ಯ ಕ್ಷೇತ್ರದ ಪರಿಣತಿ ಮತ್ತು ಅತ್ಯುತ್ತಮ ನಿರ್ವಹಣಾ ಪದ್ಧತಿಗಳನ್ನು ಅಳವಡಿಸಿಕೊಂಡು ಹಂತ ಹಂತವಾಗಿ ಉನ್ನತೀಕರಿಸಲಾಗುವುದು ಎಂದು ಇಂಧನ ಹಾಗೂ ಪ್ರವಾಸೋದ್ಯಮ ಸಚಿವ ಕೆ.ಜೆ. ಜಾರ್ಜ್ ತಿಳಿಸಿದ್ದಾರೆ.

ರಾಜ್ಯದ ಅತ್ಯಂತ ಸುಂದರ ಹಾಗೂ ಪ್ರಮುಖ ಪ್ರವಾಸಿ ತಾಣಗಳಲ್ಲಿ ಕೆಎಸ್‌ಟಿಡಿಸಿ ಹಾಗೂ ಜಂಗಲ್ ಲಾಡ್ಜಸ್ ಅಂಡ್ ರೆಸಾರ್ಟ್ಸ್ ಆಸ್ತಿಗಳಿದ್ದರೂ, ಅವುಗಳ ಸಂಪೂರ್ಣ ಸಾಮರ್ಥ್ಯವನ್ನು ಬಳಸಿಕೊಳ್ಳುವ ಅಗತ್ಯವಿದೆ. ಉತ್ತಮ ನಿರ್ವಹಣೆ, ಆಧುನಿಕ ಸೌಲಭ್ಯಗಳು, ವೃತ್ತಿಪರ ಆತಿಥ್ಯ ಸೇವೆಗಳು ಹಾಗೂ ಅಂತರ ರಾಷ್ಟ್ರೀಯ ಮಟ್ಟದ ಕಾರ್ಯಾಚರಣಾ ಪದ್ಧತಿಗಳನ್ನು ಅಳವಡಿಸುವ ಮೂಲಕ ಈ ಆಸ್ತಿಗಳಿಗೆ ಹೊಸ ಮೆರುಗು ನೀಡಲಾಗುವುದು ಎಂ ದರು.

ಚಿಕ್ಕಮಗಳೂರಿನಲ್ಲಿ ಪ್ರವಾಸೋದ್ಯಮ ಇಲಾಖೆ ಮತ್ತು ತಾಜ್ ಸಂಸ್ಥೆಯ ಸಹಯೋಗದ ಅನುಭವವು ಸರ್ಕಾರಿ ಆತಿಥ್ಯ ಕ್ಷೇತ್ರದಲ್ಲಿ ವೃತ್ತಿಪರ ನಿರ್ವಹಣೆಯ ಮಹತ್ವವನ್ನು ತೋರಿಸಿದೆ. ಇದೇ ಅನುಭವದ ಆಧಾರದ ಮೇಲೆ ರಾಜ್ಯದ ಇತರೆ ಪ್ರಮುಖ ಪ್ರವಾಸಿ ತಾಣಗಳಲ್ಲಿರುವ ಮಯೂರ ಹೋಟೆಲ್‌ಗಳು ಮತ್ತು ಪ್ರವಾಸೋದ್ಯಮ ಇಲಾಖೆಯ ಆಸ್ತಿಗಳಲ್ಲಿ ಖಾಸಗಿ ಆತಿಥ್ಯ ಕ್ಷೇತ್ರದ ಅತ್ಯುತ್ತಮ ಕಾರ್ಯಪದ್ಧತಿಗಳನ್ನು ಅಳವಡಿಸಿಕೊಳ್ಳಲಾಗುವುದು ಎಂದು ತಿಳಿಸಿದರು.

**ತಜ್ಞರ ಸಲಹಾ ಸಮಿತಿ ರಚನೆ**

ಪ್ರೀಮಿಯಂ ಆತಿಥ್ಯ ಸೇವೆಗಳು ಕೇವಲ ಐಷಾರಾಮಿ ಪ್ರವಾಸಿಗರಿಗೆ ಮಾತ್ರ ಸೀಮಿತವಾಗಬಾರದು. ಉತ್ತಮ ಗುಣಮಟ್ಟದ ವಸತಿ, ಆಹಾರ ಹಾಗೂ ಸೇವೆಗಳು ಮಧ್ಯಮ ವರ್ಗದ ಕುಟುಂಬಗಳಿಗೂ ಕೈಗೆಟುಕುವ ದರದಲ್ಲಿ ದೊರೆಯಬೇಕು. ಪ್ರವಾಸೋದ್ಯಮವನ್ನು ಜನಸ್ನೇಹಿಯಾಗಿ ಹಾಗೂ ಎಲ್ಲರಿಗೂ ಲಭ್ಯವಾಗುವಂತೆ ರೂಪಿಸುವುದು ಸರ್ಕಾರದ ಆದ್ಯತೆಯಾಗಿದೆ. ಮಯೂರ ಹೋಟೆಲ್‌ಗಳ



ಉನ್ನತೀಕರಣಕ್ಕೆ ಸಂಬಂಧಿಸಿದಂತೆ ದೇಶದ ಪ್ರಮುಖ ಹೋಟೆಲ್ ಉದ್ಯಮಿಗಳು, ಆತಿಥ್ಯ ಕ್ಷೇತ್ರದ ಪರಿಣಿತರು ಹಾಗೂ ಪ್ರವಾಸೋದ್ಯಮ ತಜ್ಞರನ್ನು ಒಳಗೊಂಡ ಸಲಹಾ ಸಮಿತಿ ರಚಿಸಲಾಗುವುದು. ಈ ಸಮಿತಿಯ ಶಿಫಾರಸುಗಳ ಆಧಾರದ ಮೇಲೆ ಮಯೂರ ಹೋಟೆಲ್‌ಗಳ ವಿನ್ಯಾಸ, ಕೊಠಡಿ ಸೌಲಭ್ಯಗಳು, ಆಹಾರ ಸೇವೆ, ಕಾರ್ಯಾಚರಣೆ, ಅತಿಥಿ ಸೇವೆ ಹಾಗೂ ನಿರ್ವಹಣಾ ಗುಣಮಟ್ಟವನ್ನು ಹಂತ ಹಂತವಾಗಿ ಉನ್ನತೀಕರಿಸಲಾಗುವುದು. ಹೋಟೆಲ್‌ಗಳ ಮಾಲೀಕತ್ವ ಸರ್ಕಾರದ ಬಳಿಯೇ ಮುಂದುವರಿಯಲಿದ್ದು, ಖಾಸಗಿ ಆತಿಥ್ಯ ಕ್ಷೇತ್ರದ ಪರಿಣತಿಯನ್ನು ಮಾತ್ರ ಬಳಸಿಕೊಳ್ಳಲಾಗುವುದು ಎಂದು ಕೆ.ಜೆ. ಜಾರ್ಜ್ ಸ್ಪಷ್ಟಪಡಿಸಿದರು.

**ನಂದಿಬೆಟ್ಟದ ಕೆಳಭಾಗದಲ್ಲಿ ಸುಸಜ್ಜಿತ ಪಾರ್ಕಿಂಗ್ ವ್ಯವಸ್ಥೆ, ರೋಪ್‌ವೇ:** ನಂದಿಬೆಟ್ಟದಲ್ಲಿ ಹೆಚ್ಚುತ್ತಿರುವ ವಾಹನ ದಟ್ಟಣೆ ಕುರಿತು ಮಾತನಾಡಿದ ಸಚಿವರು, ವಾರಾಂತ್ಯ ಹಾಗೂ ರಜಾ ದಿನಗಳಲ್ಲಿ ಬೆಟ್ಟದ ಮೇಲ್ಭಾಗಕ್ಕೆ ಖಾಸಗಿ ವಾಹನಗಳ ಪ್ರವೇಶವನ್ನು ನಿಯಂತ್ರಿಸಿ, ಕೆಳಭಾಗದಲ್ಲಿಯೇ ಸುಸಜ್ಜಿತ ಪಾರ್ಕಿಂಗ್ ವ್ಯವಸ್ಥೆ ಅಭಿವೃದ್ಧಿಪಡಿಸಲು ಸರ್ಕಾರ ಯೋಜನೆ ರೂಪಿಸುತ್ತಿದೆ. ಅಲ್ಲಿಂದ ಪ್ರವಾಸಿಗರ ಸಂಚಾರಕ್ಕಾಗಿ ನಿಯೋಜಿತ ವಾಹನಗಳ ವ್ಯವಸ್ಥೆ ಕಲ್ಪಿಸಲಾಗುವುದು. ಜೊತೆಗೆ, ಬಹುನಿರೀಕ್ಷಿತ ನಂದಿಬೆಟ್ಟ ರೋಪ್‌ವೇ ಯೋಜನೆಯನ್ನು ತ್ವರಿತವಾಗಿ ಅನುಷ್ಠಾನಗೊಳಿಸುವ ಮೂಲಕ ಸಂಚಾರ ದಟ್ಟಣೆಗೆ ಶಾಶ್ವತ ಪರಿಹಾರ ಒದಗಿಸಲಾಗುವುದು ಎಂದು ಕೆ.ಜೆ. ಜಾರ್ಜ್ ಹೇಳಿದರು.

ಪ್ರವಾಸಿ ತಾಣಗಳಲ್ಲಿ ಸ್ವಚ್ಛತೆ, ಗುಣಮಟ್ಟದ ಸೇವೆ ಹಾಗೂ ಪ್ರವಾಸಿಗರೊಂದಿಗೆ ಸೌಜನ್ಯದ ವರ್ತನೆಗೆ ಅತ್ಯುನ್ನತ ಆದ್ಯತೆ ನೀಡಬೇಕು. 'ಅತಿಥಿ ದೇವೋಭವ' ಎಂಬ ಭಾರತೀಯ ಆತಿಥ್ಯ ಸಂಸ್ಕೃತಿಯೇ ನಮ್ಮ ಸೇವೆಯ ಮೂಲಮಂತ್ರವಾಗಬೇಕು ಎಂದು ಸಚಿವರು ಅಧಿಕಾರಿಗಳಿಗೆ ಸೂಚಿಸಿದರು.

ಪ್ರವಾಸೋದ್ಯಮ ಇಲಾಖೆಯ ಕಾರ್ಯದರ್ಶಿ ಡಾ. ವಿ. ರಾಮ್ ಪ್ರಸಾತ್ ಮನೋಹರ್ ಮಾತನಾಡಿ, ಸರ್ಕಾರಿ ಆತಿಥ್ಯ ಕ್ಷೇತ್ರದ ಗುರುತನ್ನು ಉಳಿಸಿಕೊಂಡೇ, ಖಾಸಗಿ ಆತಿಥ್ಯ ಕ್ಷೇತ್ರದ ಪರಿಣತಿ, ಸೇವಾ ಗುಣಮಟ್ಟ ಹಾಗೂ ನಿರ್ವಹಣಾ ಕಾರ್ಯ ಪದ್ಧತಿಗಳನ್ನು ಅಳವಡಿಸಿಕೊಂಡು ಮಯೂರ ಹೋಟೆಲ್‌ಗಳನ್ನು ಹೊಸ ಮಟ್ಟಕ್ಕೆ ಕೊಂಡೊಯ್ಯುವ ಗುರಿಯನ್ನು ಇಲಾಖೆ ಹೊಂದಿದೆ ಎಂದು ತಿಳಿಸಿದರು. ನಂದಿಬೆಟ್ಟ ರೋಪ್‌ವೇ ಯೋಜನೆ ಇಲಾಖೆಯ ಪ್ರಮುಖ ಆದ್ಯತೆಗಳಲ್ಲಿ ಒಂದಾಗಿದೆ. ಯೋಜನೆಗೆ ಅಗತ್ಯವಿರುವ ಅರಣ್ಯ ಇಲಾಖೆಯ ಅನುಮತಿ ಪಡೆಯುವ ಪ್ರಕ್ರಿಯೆಯನ್ನು ವೇಗಗೊಳಿಸಲಾಗಿದ್ದು, ಸಚಿವರ ನಿರ್ದೇಶನದಂತೆ ದೆಹಲಿಯಲ್ಲಿ ವಿಶೇಷ ಸಮನ್ವಯ ವ್ಯವಸ್ಥೆ ರೂಪಿಸಲಾಗಿದೆ. ಅಗತ್ಯ ಅನುಮತಿಗಳನ್ನು ಶೀಘ್ರದಲ್ಲೇ ಪಡೆದು ಯೋಜನೆಯನ್ನು ಅನುಷ್ಠಾನದ ಹಂತಕ್ಕೆ ತರಲಾಗುವುದು ಎಂದು ಹೇಳಿದರು.

# ನಾಗರಿಕ ಸೇವೆ ಸಮಾಜಮುಖಿ ಬದಲಾವಣೆಗೆ ಉತ್ತಮ ಅವಕಾಶ: ಡಾ.ಶಾಲಿನಿ ರಜನೀಶ್

**ಬೆಂಗಳೂರು, ಜು.22:** ಭಾರತೀಯ ನಾಗರಿಕ ಸೇವೆಗೆ ಕರ್ನಾಟಕದಿಂದ 2025ನೇ ಸಾಲಿನಲ್ಲಿ ಆಯ್ಕೆಯಾದ 16 ಪ್ರಶಿಕ್ಷಣಾರ್ಥಿಗಳು ಇಂದು ರಾಜ್ಯದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಅವರನ್ನು ಭೇಟಿ ಮಾಡಿ ಚರ್ಚಿಸಿದರು.

ಈ ಪೈಕಿ ಪ್ರಥಮ ಭಾರಿಗೆ ಕಲ್ಯಾಣ ಕರ್ನಾಟಕ ಭಾಗದ ಮಹತ್ವಾಕಾಂಕ್ಷಿ ಜಿಲ್ಲೆಯಾದ ಯಾದಗಿರಿಯಿಂದ ನಾಲ್ವರು ಅಭ್ಯರ್ಥಿಗಳು ಭಾರತೀಯ ನಾಗರಿಕ ಸೇವೆಗೆ ಆಯ್ಕೆಯಾಗಿರುವುದು ವಿಶೇಷ ಸಾಧನೆಯಾಗಿದೆ. ಅವರಲ್ಲಿ ನಿವೇದಿತಾ ಸಿ. ಭಾವಿಮಾನಿ ಅವರು ಪ್ರಥಮ ಮಹಿಳೆ ಎಂಬ ಹೆಗ್ಗಳಿಕೆಗೆ ಪಾತ್ರರಾಗಿರುವುದು ಜಿಲ್ಲೆಯ ಹೆಮ್ಮೆಯ ಸಂಗತಿಯಾಗಿದೆ ಎಂದು ಮುಖ್ಯ ಕಾರ್ಯದರ್ಶಿ ಅಭಿನಂದಿಸಿದರು.

ಇದೇ ರೀತಿ ಕೋಲಾರ ಜಿಲ್ಲೆಯಿಂದಲೂ ನಾಲ್ವರು ಅಭ್ಯರ್ಥಿಗಳು ಆಯ್ಕೆಯಾಗಿರುವುದು ಜಿಲ್ಲೆಯ ಪ್ರತಿಭೆ ಮತ್ತು ಸಾಧನೆಯನ್ನು ಪ್ರತಿಬಿಂಬಿಸುತ್ತದೆ. ನಾಗರಿಕ ಸೇವೆಗೆ ಆಯ್ಕೆಯಾದ ಪ್ರಶಿಕ್ಷಣಾರ್ಥಿಗಳು ತಾವು ಕಾರ್ಯ ನಿರ್ವಹಿಸುವ



ಜಿಲ್ಲೆಗಳಲ್ಲಿ ಸಮಾಜ ಮುಖಿ ಆದರ್ಶಗಳನ್ನು, ಪ್ರಾಮಾಣಿಕತೆ ಹಾಗೂ ಧೈರ್ಯವನ್ನು ಅಳವಡಿಸಿಕೊಂಡು ಸಮಾಜದಲ್ಲಿ ಸಕಾರಾತ್ಮಕ ಬದಲಾವಣೆ ತರಲು ಶ್ರಮಿಸಬೇಕು ಎಂದು ಹೇಳಿದರು.

ಕರ್ನಾಟಕ ರಾಜ್ಯದಲ್ಲಿ ಉತ್ತಮ ಆಡಳಿತ ಸಂಸ್ಕೃತಿ ಇರುವುದರಿಂದ, ಕರ್ನಾಟಕವು ವಿವಿಧ ಕ್ಷೇತ್ರಗಳಲ್ಲಿ ದೇಶದ ಮುಂಚೂಣಿ ರಾಜ್ಯವಾಗಿ ಗುರುತಿಸಿಕೊಂಡಿದೆ. ನೂತನ ಅಧಿಕಾರಿಗಳಿಗೆ ಮೊದಲ ನೇಮಕಾತಿಯೇ ಅತ್ಯಂತ ಮಹತ್ವದ ಹಂತವಾಗಿದ್ದು, ಯಾವ ರಾಜ್ಯದಲ್ಲಿ ಸೇವೆ ಸಲ್ಲಿಸುವ ಅವಕಾಶ ದೊರಕುತ್ತದೆಯೋ ಅಲ್ಲಿನ ಭಾಷೆ, ಸಂಸ್ಕೃತಿ ಹಾಗೂ ಜನಜೀವನವನ್ನು ಅರ್ಥಮಾಡಿಕೊಂಡು ಜನರೊಂದಿಗೆ ಬೆರೆತು ಕಾರ್ಯನಿರ್ವಹಿಸಿದರೆ ಉತ್ತಮ ಆಡಳಿತ ನೀಡಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

**ಸಮಸ್ಯೆಗಳಿಗೆ ಶಾಶ್ವತ ಪರಿಹಾರ:** ಉನ್ನತ ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸುವಾಗ ಜನರ ಸಮಸ್ಯೆಗಳನ್ನು ಆಲಿಸಿ, ಅವುಗಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳುವ ದೃಷ್ಟಿಕೋನವನ್ನು ಬೆಳೆಸಿಕೊಳ್ಳಬೇಕು. ಸಮಸ್ಯೆಗಳ ಮೂಲ ಕಾರಣಗಳನ್ನು ಸಮಗ್ರವಾಗಿ ವಿಶ್ಲೇಷಿಸಿ, ಅವುಗಳನ್ನು ಪರಿಣಾಮಕಾರಿಯಾಗಿ ಪರಿಹರಿಸುವ ಆಡಳಿತಾತ್ಮಕ ಸಾಮರ್ಥ್ಯವನ್ನು ರೂಢಿಸಿಕೊಳ್ಳುವುದು ನಾಗರಿಕ ಸೇವೆಯ ಮುಖ್ಯ ಜವಾಬ್ದಾರಿಯಾಗಿದೆ. 'ಕಾಯಕವೇ ಕೈಲಾಸ' ತತ್ವ: 'ಕಾಯಕವೇ ಕೈಲಾಸ' ಎಂಬ ನಾಣ್ಣುಡಿಯಂತೆ ಸಮಾಜಕ್ಕೆ ಸೇವೆ ಸಲ್ಲಿಸುವುದು ನಮ್ಮ ಸಂಸ್ಕೃತಿಯ ಅವಿಭಾಜ್ಯ ಅಂಗವಾಗಿದೆ. ಸಮಾಜವು ಪ್ರತಿಯೊಬ್ಬರ ಬೆಳವಣಿಗೆಗೆ ಪರೋಕ್ಷವಾಗಿ ಕೊಡುಗೆ ನೀಡಿರುವುದರಿಂದ, ದೊರೆತಿರುವ ಈ ಅವಕಾಶವನ್ನು ನಿಸ್ವಾರ್ಥ ಸೇವೆಗೆ ಬಳಸಿಕೊಂಡು ಜನರ ಬದುಕಿನಲ್ಲಿ ಅರ್ಥಪೂರ್ಣ ಬದಲಾವಣೆ ತರಬೇಕು ಎಂದು ಪ್ರಶಿಕ್ಷಣಾರ್ಥಿಗಳಿಗೆ ಕಿವಿ ಮಾತು ಹೇಳಿದರು.

### ಪ್ರತಿಭೆ ಯಾರೊಬ್ಬರ ಸ್ವತ್ತಲ್ಲ, ಕಷ್ಟಪಟ್ಟು ಅಭ್ಯಾಸ ಮಾಡುವವರಿಗೆ ವಿದ್ಯೆ ಒಲಿಯುತ್ತದೆ

# ಶೋಷಿತ ಸಮುದಾಯಗಳ ಏಳಿಗೆಗೆ ಶಿಕ್ಷಣವೇ ಏಕೈಕ ಅಸ್ತ್ರ: ಸಚಿವ ಡಾ. ಯತೀಂದ್ರ ಸಿದ್ಧರಾಮಯ್ಯ

**ಬೆಂಗಳೂರು, ಜು.22:** ಸಮಾಜ ದಲ್ಲಿ ಶೋಷಿತ ಮತ್ತು ಹಿಂದುಳಿದ ವರ್ಗಗಳ ಜನರು ಮುನ್ನೆಲೆಗೆ ಬರಲು ಶಿಕ್ಷಣವೇ ಏಕೈಕ ಅಸ್ತ್ರ. ವಿದ್ಯೆ ಹಾಗೂ ಪ್ರತಿಭೆ ಯಾರೊಬ್ಬರ ಸ್ವತ್ತಲ್ಲ. ಕಷ್ಟಪಟ್ಟು ಅಭ್ಯಾಸ ಮಾಡುವ ಪ್ರತಿಯೊಬ್ಬರಿಗೂ ವಿದ್ಯೆ ಒಲಿಯುತ್ತದೆ ಎಂದು ನಗರಾಭಿವೃದ್ಧಿ ಸಚಿವ ಡಾ. ಯತೀಂದ್ರ ಸಿದ್ಧರಾಮಯ್ಯ ಪ್ರತಿ ಪಾದಿಸಿದರು.

ಶ್ರೀ ಕಾಗಿನೆಲೆ ಮಹಾಸಂಸ್ಥಾನ ಕನಕ ಗುರುಪೀಠದ ಹೊಸದುರ್ಗ ಶಾಖಾಮಠದ ವತಿಯಿಂದ ಬೆಂಗಳೂರಿ ನಲ್ಲಿ ಆಯೋಜಿಸಿದ್ದ 'ಪ್ರತಿಭಾ ಪುರಸ್ಕಾರ – 2026' ಕಾರ್ಯಕ್ರಮ ಉದ್ಘಾಟಿಸಿ, ಎಸ್‌ಎಸ್‌ಎಲ್ಸಿ, ಪಿಯುಸಿ ಸಾಧಕ ವಿದ್ಯಾರ್ಥಿಗಳಿಗೆ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ಕನಕಶ್ರೀ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದರು.

ಬಾಬಾಸಾಹೇಬ್ ಅಂಬೇಡ್ಕರ್ ಅವರ ಶಿಕ್ಷಣದ ಹಾಲು ಕುಡಿದವರು ಗರ್ಜಿಸಲೇಬೇಕು ಎಂಬ ಮಾತನ್ನು ಸ್ಮರಿಸಿದ ಸಚಿವರು, ಶಿಕ್ಷಣವು ಕೇವಲ ಜೀವನೋಪಾಯಕ್ಕಷ್ಟೇ ಸೀಮಿತವಾಗಿರದೆ, ಜಾಗೃತಿ ಮತ್ತು ಹಕ್ಕುಗಳ ಹೋರಾಟಕ್ಕೆ ದಾರಿದೀಪ ವಾಗಿದೆ ಎಂದರು.

ನಮ್ಮ ಸಮುದಾಯದ ಯುವಜನರು ಕೇವಲ ಮೂಲಭೂತ ಶಿಕ್ಷಣಕ್ಕೆ ತೃಪ್ತರಾಗದೆ ಉನ್ನತ ಶಿಕ್ಷಣ ಪಡೆಯಬೇಕು. ರಾಜಕೀಯ, ಐಎಎಸ್, ಕೆಎಎಸ್, ನ್ಯಾಯಾಂಗ, ಮಾಧ್ಯಮ ಹಾಗೂ ಉದ್ಯಮ



ಕ್ಷೇತ್ರಗಳಲ್ಲಿ ಅಧಿಕಾರದ ಚುಕ್ಕಾಣಿ ಹಿಡಿಯುವ ಮಟ್ಟಕ್ಕೆ ಬೆಳೆಯಬೇಕು ಎಂದು ಕರೆ ನೀಡಿದರು.

ಕಾಗಿನೆಲೆ ಸಂಸ್ಥಾನದ ಶಾಖಾಮಠಗಳು ಸಮುದಾಯದ ಹಿತರಕ್ಷಣೆಗೆ ಸದಾ ಮುಂದಿರುತ್ತವೆ. ಶಿಕ್ಷಣ ಸಂಸ್ಥೆಗಳು, ವಸತಿ ನಿಲಯ ಗಳನ್ನು ಸ್ಥಾಪಿಸಿ, ಶೈಕ್ಷಣಿಕ ಪ್ರಗತಿಗೆ ನಿರಂತರವಾಗಿ ಶ್ರಮಿಸುತ್ತಿವೆ. ಶ್ರೀ ನಿರಂಜನಾನಂದಪುರಿ ಸ್ವಾಮೀಜಿ ಹಾಗೂ ಶ್ರೀ ಈಶ್ವರಾನಂದಪುರಿ ಸ್ವಾಮೀಜಿ ಅವರು ಸಮುದಾಯದ ಹಕ್ಕುಗಳ ಹೋರಾಟದಲ್ಲಿ ಮುಂಚೂಣಿ ಯಲ್ಲಿರುತ್ತಾರೆ ಎಂದು ಶ್ಲಾಘಿಸಿದರು.

ಸಚಿವರು ಶ್ರೀ ಕಾಗಿನೆಲೆ ಕನಕ ಗುರುಪೀಠದ ಜಗದ್ಗುರು ಶ್ರೀ ನಿರಂಜನಾನಂದಪುರಿ ಸ್ವಾಮೀಜಿಯವರಿಗೆ ವೇದಿಕೆಯಲ್ಲಿ ಗೌರವ ಸಲ್ಲಿಸಿದರು. ಕಾರ್ಯಕ್ರಮದಲ್ಲಿ ಸುಮಾರು 1300 ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮಾಡಲಾಯಿತು.

# ಬರ ಸಾಧ್ಯತೆ: ಹಲವು ಉತ್ತೇಜನಾ ಕ್ರಮಗಳಿಗೆ ಸರ್ಕಾರ ಆದ್ಯತೆ

**ಬೆಂಗಳೂರು, ಜು.22:** ಜಾಗತಿಕ ಮಟ್ಟದಲ್ಲಿ ತೀವ್ರಗೊಳ್ಳುತ್ತಿರುವ ಎಲ್ ನಿನೋ ಹವಾಮಾನ ವೈಪರೀತ್ಯದ ಪರಿಣಾಮವಾಗಿ ಕರ್ನಾಟಕದಲ್ಲಿ ಮುಂಗಾರು ಕ್ಷೀಣಿಸಿ ಬರದ ಪರಿಸ್ಥಿತಿ ಎದುರಾಗುವ ಸಾಧ್ಯತೆ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಸಮಗ್ರ ಮುನ್ನೆಚ್ಚರಿಕೆ ಕಾರ್ಯತಂತ್ರ ರೂಪಿಸಿದೆ. ಅಂತರ್ಜಲ ಸಂರಕ್ಷಣೆ, ಬೋರ್‌ವೆಲ್ ಮರುಪೂರಣ, ಮಳೆನೀರು ಸಂಗ್ರಹಣೆ, ಜಲ ಆಯವ್ಯಯ ಹಾಗೂ ಬರನಿರೋಧಕ ಬೆಳೆಗಳ ಉತ್ತೇಜನಕ್ಕೆ ಸರ್ಕಾರ ಆದ್ಯತೆ ನೀಡಿದೆ. ಭಾರತೀಯ ರಾಷ್ಟ್ರೀಯ ಸಾಗರ ಮಾಹಿತಿ ಸೇವೆಗಳ ಕೇಂದ್ರ ಅಂದಾಜಿನ ಪ್ರಕಾರ, ಎಲ್ ನಿನೋ ಪರಿಣಾಮ 2027ರ ಮೇ ತಿಂಗಳವರೆಗೆ ಮುಂದುವರಿಯುವ ಸಾಧ್ಯತೆ ಇದೆ. ಇದರ ಪರಿಣಾಮ ರಾಜ್ಯದಲ್ಲಿ ತಾಪಮಾನ ಹೆಚ್ಚಳ, ಮಳೆಯ ಕೊರತೆ, ಜಲಾಶಯಗಳ ನೀರಿನ ಮಟ್ಟ ಕುಸಿತ, ಕೃಷಿ ಉತ್ಪಾದನೆ ಇಳಿಕೆ ಹಾಗೂ ಕುಡಿಯುವ ನೀರಿನ ಅಭಾವದ ಆತಂಕ ವ್ಯಕ್ತವಾಗಿದೆ. ಈ ಸವಾಲನ್ನು ಎದುರಿಸಲು ರಾಜ್ಯದಲ್ಲಿನ ಸುಮಾರು 37 ಲಕ್ಷ ಬೋರ್‌ವೆಲ್‌ಗಳ ಮಾಹಿತಿಯನ್ನು ಕೆ–ಜಿಸ್ ಪೋರ್ಟಲ್‌ನಲ್ಲಿ ದಾಖಲಿಸಿ, ಬೋರ್‌ವೆಲ್‌ಗಳ ತಾಂತ್ರಿಕ ಪರಿಶೀಲನೆ ಹಾಗೂ ರೀಚಾರ್ಜ್ ಕಾಮಗಾರಿಗಳಿಗೆ ವಿಶೇಷ ತರಬೇತಿ ನೀಡಲಾಗುತ್ತಿದೆ. ಅಂತರ್ಜಲ ತೀವ್ರವಾಗಿ ಕುಸಿದಿರುವ ಪ್ರದೇಶಗಳಲ್ಲಿ ಹೊಸ ಬೋರ್‌ವೆಲ್ ಕೊರೆಯುವುದಕ್ಕೂ ನಿರ್ಬಂಧ ಹೇರಲಾಗಿದೆ ಗ್ರಾಮೀಣ ಭಾಗಗಳಲ್ಲಿ ಮಳೆನೀರು ಸಂಗ್ರಹಣೆ, ಚೆಕ್‌ಡ್ಯಾಂ ನಿರ್ಮಾಣ ಹಾಗೂ ಸಾಂಪ್ರದಾಯಿಕ ಜಲಮೂಲಗಳ ಪುನರುಜ್ಜೀವನಕ್ಕೆ ವಿಜಿ ರಾಮ್ ಜಿ ಯೋಜನೆಯಡಿ ಕ್ರಮ ಕೈಗೊಳ್ಳಲಾಗುತ್ತಿದೆ. ಜೊತೆಗೆ ಸಂಸ್ಕರಿಸಿದ ತ್ಯಾಜ್ಯ ನೀರನ್ನು ಕೈಗಾರಿಕೆ, ಉದ್ಯಾನ ಹಾಗೂ ನಿರ್ಮಾಣ ಕಾಮಗಾರಿಗಳಿಗೆ ಮರುಬಳಕೆ ಮಾಡುವ ವ್ಯವಸ್ಥೆ ಜಾರಿಗೊಳ್ಳುತ್ತಿದೆ. ಸ್ಥಳೀಯ ಸಂಸ್ಥೆಗಳ ಮಟ್ಟದಲ್ಲಿ ವಾಟರ್ ಬಜೆಟಿಂಗ್ ವ್ಯವಸ್ಥೆಯನ್ನೂ ಅನುಷ್ಠಾನ ಗೊಳಿಸಲಾಗುತ್ತಿದೆ. ಬರದ ಪರಿಣಾಮವನ್ನು ಕಡಿಮೆ ಮಾಡಲು ರೈತರು ಕಡಿಮೆ ನೀರಿನಲ್ಲಿ ಬೆಳೆಯಬಹುದಾದ ಸಿರಿಧಾನ್ಯಗಳು, ದ್ವಿದಳ ಧಾನ್ಯಗಳು ಹಾಗೂ ಎಣ್ಣೆಕಾಳುಗಳ ಬೆಳೆಗೆ ಆದ್ಯತೆ ನೀಡುವಂತೆ ಸರ್ಕಾರ ಪ್ರೋತ್ಸಾಹ ನೀಡುತ್ತಿದೆ. ರಾಗಿ, ಜೋಳ, ಶೇಂಗಾ, ಕಡಲೆ, ತೊಗರಿ, ಸೂರ್ಯಕಾಂತಿ ಮತ್ತು ಎಳ್ಳಿನಂತಹ ಬೆಳೆಗಳು ಕಡಿಮೆ ಮಳೆಯಲ್ಲಿಯೂ ಉತ್ತಮ ಇಳುವರಿ ನೀಡಬಲ್ಲವು ಎಂದು ಕೃಷಿ ಇಲಾಖೆ ತಿಳಿಸಿದೆ.

## ಬೋವಿ ಸಮಾಜದ ಸದಸ್ಯರಿಗೆ ಜಾತಿ ಪ್ರಮಾಣಪತ್ರ ವಿತರಿಸಿ



**ವಿಜಯಪುರ, ಜು.22:** ಭೋವಿ ಸಮಾಜದ ಜಾತಿ ಪ್ರಮಾಣಪತ್ರ ನೀಡುವ ಕುರಿತು ಬುದವಾರ 22–07–2026 ರಂದು ನಮ್ಮ ಸಮಾಜದವರು ಮತ್ತು ಬಿಜಾಪುರ ಜಿಲ್ಲಾ ಭೋವಿ ವಡ್ಡರ ಸಮಾಜದ ಅಧ್ಯಕ್ಷರಾದ ರಾಮು ಹೊಸಪೇಟೆ ಹಾಗೂ ಬಿಜಾಪುರ ಕನ್ನಡ ಸೇನೆಯ ಅಧ್ಯಕ್ಷರಾದ ದೇವೇಂದ್ರ ಮಿರೇಕರ್ ಮತ್ತು ವಿಜಯಪುರ ಜಿಲ್ಲಾ ಭೋವಿ ವಡ್ಡರ್ ಯುವ ಮುಖಂಡರಾದ ರವಿಕುಮಾರ್ ಬಿದರಕುಂದಿ ಹಾಗೂ ನಮ್ಮ ಸಮಾಜದ ಭೋವಿ ವಡ್ಡರ ಮುಖಂಡರಾದ ನಾಗಪ್ಪ ಗುಜ್ಜಲಕರ್, ಅಶೋಕ ಅಲಕುಂಟೆ, ಶಶಿಕಾಂತ್ ಮ್ಯಾಗೇರಿ, ಪರಶುರಾಮ್ ಅಲಕುಂಟೆ, ಯಂಪೂರೆ, ವಿಲಾಸ್, ಮ್ಯಾಗೇರಿ ಶಂಕರ್ ಮ್ಯಾಗೇರಿ, ಸತೀಶ್ ಪಾತ್ರೋಟ್ ನೇತೃತ್ವದಲ್ಲಿ ನಮ್ಮ ಜಿಲ್ಲಾ ಭೋವಿ ವಡ್ಡರ್ ಸಮಾಜ ವತಿಯಿಂದ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

### ಪ್ರತಿನಿತ್ಯ ಸರಾಸರಿ ಉತ್ಪಾದನೆಗೆ 84.34 ದಶಲಕ್ಷ ಯೂನಿಟ್, 100 ದಶಲಕ್ಷ ಯೂನಿಟ್‌ಗೆ ಹೆಚ್ಚಿಸಲು ಕ್ರಮ

# ಜಲವಿದ್ಯುತ್ ಉತ್ಪಾದನೆ ಕುಂಠಿತ, ಶಾಖೋತ್ಪನ್ನ ವಿದ್ಯುತ್ ಉತ್ಪಾದನೆ ಏರಿಕೆ

**ಬೆಂಗಳೂರು, ಜು,22:** ರಾಜ್ಯದಲ್ಲಿ ಮಳೆ ಕೊರತೆಯಿಂದ ಜಲ ವಿದ್ಯುತ್ ಉತ್ಪಾದನೆ ಕುಂಠಿತವಾಗಿರುವ ಹಿನ್ನೆಲೆಯಲ್ಲಿ ಶಾಖೋತ್ಪನ್ನ ಕೇಂದ್ರಗಳಲ್ಲಿ ವಿದ್ಯುತ್ ಉತ್ಪಾದನೆಯನ್ನು ಗಣನೀಯವಾಗಿ ಹೆಚ್ಚಿಸಲಾಗಿದ್ದು, ಜುಲೈ ತಿಂಗಳಲ್ಲಿ ಪ್ರತಿನಿತ್ಯ ಸರಾಸರಿ 84.34 ದಶಲಕ್ಷ ಯೂನಿಟ್ ಶಾಖೋತ್ಪನ್ನ ವಿದ್ಯುತ್ ಉತ್ಪಾದನೆ ಮಾಡಲಾಗುತ್ತಿದೆ.

ಕರ್ನಾಟಕ ವಿದ್ಯುತ್ ನಿಗಮ ನಿಯಮಿತ (ಕೆಪಿಸಿಎಲ್) ರಾಜ್ಯದಲ್ಲಿ ಜಲ ವಿದ್ಯುತ್ ಮತ್ತು ಶಾಖೋತ್ಪನ್ನ ವಿದ್ಯುತ್ ಉತ್ಪಾದನಾ ಸ್ಥಾವರಗಳನ್ನು ನಿರ್ವಹಿಸುತ್ತಿದ್ದು, ಜಲಾಶಗಳಲ್ಲಿ ನೀರಿನ ಪ್ರಮಾಣ ಕಡಿಮೆ ಇರುವುದರಿಂದ ಶಾಖೋತ್ಪನ್ನ ವಿದ್ಯುತ್ ಸ್ಥಾವರಗಳನ್ನು ಸುಸ್ಥಿತಿಯಲ್ಲಿಟ್ಟು ಹೆಚ್ಚು ವಿದ್ಯುತ್ ಉತ್ಪಾದನೆ ಮಾಡಲಾಗುತ್ತಿದೆ. ಶಾಖೋತ್ಪನ್ನ ವಿದ್ಯುತ್ ಸ್ಥಾವರಗಳಲ್ಲಿ ಉತ್ಪಾದನೆಯನ್ನು ಪ್ರತಿನಿತ್ಯ 100 ದಶಲಕ್ಷ ಯೂನಿಟ್‌ಗೆ ಹೆಚ್ಚಿಸಲು ಕ್ರಮ ವಹಿಸಲಾಗುತ್ತಿದೆ. ಇಂಧನ ಮತ್ತು ಪ್ರವಾಸೋದ್ಯಮ ಸಚಿವ ಕೆ.ಜೆ. ಜಾರ್ಜ್ ವಿದ್ಯುತ್ ಉತ್ಪಾದನೆ ಕುರಿತಂತೆ ಈಗಾಗಲೇ ಕೆಪಿಸಿಎಲ್‌ನ ಪ್ರಗತಿ ಪರಿಶೀಲನೆ ನಡೆಸಿದ್ದು, ಬೇಡಿಕೆಗೆ ತಕ್ಕಂತೆ ವಿದ್ಯುತ್ ಉತ್ಪಾದಿಸಲು



ಅಗತ್ಯ ಕ್ರಮ ವಹಿಸುವಂತೆ ಸೂಚಿಸಿದ್ದಾರೆ.

ಈ ಬಾರಿ ಮಳೆಗಾಲದಲ್ಲಿ, ಅದರಲ್ಲೂ ಮುಖ್ಯವಾಗಿ ಜುಲೈ ತಿಂಗಳಲ್ಲಿ ರಾಜ್ಯದ ಮೂರು ಶಾಖೋತ್ಪನ್ನ ವಿದ್ಯುತ್ ಸ್ಥಾವರಗಳಲ್ಲಿ ಅಗತ್ಯ ಕಲ್ಲಿದ್ದಲು ಪೂರೈಕೆ ಜತೆಗೆ ವಿದ್ಯುತ್ ಉತ್ಪಾದನೆಯಲ್ಲೂ ಗಣನೀಯವಾಗಿ ಏರಿಕೆಯಾಗಿದೆ. ಇದರಿಂದಾಗಿ ಪ್ರತಿನಿತ್ಯ ಸರಾಸರಿ 84.34 ದಶಲಕ್ಷ ಯೂನಿಟ್ ಶಾಖೋತ್ಪನ್ನ ವಿದ್ಯುತ್ ಉತ್ಪಾದನೆಯಾಗುತ್ತಿದೆ. ಕಳೆದ ವರ್ಷ ಜುಲೈ ತಿಂಗಳಲ್ಲಿ ನಿತ್ಯ ಸರಾಸರಿ 54.47 ದಶಲಕ್ಷ ಯೂನಿಟ್ ಉತ್ಪಾದನೆ ಮಾಡಲಾಗಿತ್ತು.

ಜಲ ವಿದ್ಯುತ್ ಉತ್ಪಾದನೆ ಕುಂಠಿತವಾಗಿರುವ ಕಾರಣ ಪೂರೈಕೆಗೆ ಸಮಸ್ಯೆಯಾಗದಂತೆ ಮುಕ್ತ ಮಾರುಕಟ್ಟೆಯಿಂದ ವಿದ್ಯುತ್ ಖರೀದಿಸಬೇಕಾಗುತ್ತದೆ. ಇದರಿಂದ ಸರ್ಕಾರದ ಬೊಕ್ಕಸದ ಮೇಲೆ ಹೊರೆ ಬೀಳುತ್ತದೆ. ಇದನ್ನು ತಪ್ಪಿಸಿ ರಾಜ್ಯದಲ್ಲೇ

**ಶಾಖೋತ್ಪನ್ನ ವಿದ್ಯುತ್ ಉತ್ಪಾದನೆಯನ್ನು ಹೆಚ್ಚಿಸಿ ಜಲ ವಿದ್ಯುತ್ ಕೊರತೆಯನ್ನು ನೀಗಿಸಲು ಮತ್ತು ಸಮರ್ಪಕ ವಿದ್ಯುತ್ ಪೂರೈಕೆಗೆ ಶಾಖೋತ್ಪನ್ನ ವಿದ್ಯುತ್ ಸ್ಥಾವರಗಳಲ್ಲಿ ಪ್ರತಿನಿತ್ಯ 100 ದಶಲಕ್ಷ ಯೂನಿಟ್ ವಿದ್ಯುತ್ ಉತ್ಪಾದಿಸಲು ಸ್ಥಾವರಗಳನ್ನು ಶೇ. 100ರಷ್ಟು ಸನ್ನದ್ಧಗೊಳಿಸಲಾಗುತ್ತಿದೆ.**



**– ರಾಜೇಂದ್ರ ಚೋಳನ್ ಪಿ., ವ್ಯವಸ್ಥಾಪಕ ನಿರ್ದೇಶಕರು, ಕೆಪಿಸಿಎಲ್**

ಹೆಚ್ಚು ವಿದ್ಯುತ್ ಉತ್ಪಾದನೆ ಮಾಡಲು ಶಾಖೋತ್ಪನ್ನ ವಿದ್ಯುತ್ ಸ್ಥಾವರಗಳನ್ನು ಸನ್ನದ್ಧಗೊಳಿಸಲಾಗಿದೆ.

**ಶಾಖೋತ್ಪನ್ನ ಸ್ಥಾವರಗಳಲ್ಲಿ ವಿದ್ಯುತ್ ಉತ್ಪಾದನೆ ಪ್ರಮಾಣ:** ಈ ವರ್ಷದ ಜುಲೈನಲ್ಲಿ ರಾಯಚೂರು ಶಾಖೋತ್ಪನ್ನ ವಿದ್ಯುತ್ ಸ್ಥಾವರದಲ್ಲಿ ಜುಲೈ ತಿಂಗಳಲ್ಲಿ ಸರಾಸರಿ 24.45 ದಶಲಕ್ಷ ಯೂನಿಟ್ ವಿದ್ಯುತ್ ಉತ್ಪಾದನೆ ಮಾಡಲಾಗಿದೆ. ಕಳೆದ ವರ್ಷದ ಜುಲೈ ತಿಂಗಳಲ್ಲಿ ಸರಾಸರಿ 13.12 ದಶಲಕ್ಷ ಯೂನಿಟ್ ವಿದ್ಯುತ್ ಉತ್ಪಾದನೆಯಾಗಿತ್ತು.

ಬಳ್ಳಾರಿ ಶಾಖೋತ್ಪನ್ನ ವಿದ್ಯುತ್ ಸ್ಥಾವರದಲ್ಲಿ 33.64 ದಶಲಕ್ಷ ಯೂನಿಟ್ ವಿದ್ಯುತ್ ಉತ್ಪಾದನೆಯಾಗುತ್ತಿದೆ. ಕಳೆದ ವರ್ಷ ಜುಲೈ ತಿಂಗಳಲ್ಲಿ ಸರಾಸರಿ 25.35 ದಶಲಕ್ಷ ಯೂನಿಟ್ ವಿದ್ಯುತ್ ಉತ್ಪಾದನೆ ಮಾಡಲಾಗಿತ್ತು.

ಯರಮರಸ್ ಶಾಖೋತ್ಪನ್ನ ಸ್ಥಾವರದಲ್ಲಿ ಸರಾಸರಿ26.25 ದಶಲಕ್ಷ ಯೂನಿಟ್ ವಿದ್ಯುತ್ ಉತ್ಪಾದನೆ ಮಾಡಲಾಗುತ್ತಿದೆ. ಕಳೆದ ವರ್ಷ ಜುಲೈ ತಿಂಗಳಲ್ಲಿ ಸರಾಸರಿ 16 ದಶಲಕ್ಷ ಯೂನಿಟ್ ವಿದ್ಯುತ್ ಉತ್ಪಾದನೆಯಾಗಿತ್ತು.

**ಮಳೆ ಕೊರತೆಯಿಂದ ಜಲ ವಿದ್ಯುತ್ ಉತ್ಪಾದನೆ ಕುಂಠಿತವಾಗಿರುವ ಹಿನ್ನೆಲೆಯಲ್ಲಿ ಶಾಖೋತ್ಪನ್ನ ವಿದ್ಯುತ್ ಉತ್ಪಾದನೆ ಹೆಚ್ಚಿಸಲಾಗಿದೆ. ಶಾಖೋತ್ಪನ್ನ ವಿದ್ಯುತ್ ಸ್ಥಾವರಗಳನ್ನು ಸಮರ್ಪಕವಾಗಿ ನಿರ್ವಹಿಸುತ್ತಿರುವುದರ ಜತೆಗೆ ಹೆಚ್ಚುವರಿ ಕಲ್ಲಿದ್ದಲು ಸಂಗ್ರಹಿಸಲಾಗುತ್ತಿದೆ. ಶಾಖೋತ್ಪನ್ನ ವಿದ್ಯುತ್ ಉತ್ಪಾದನೆ ಹೆಚ್ಚಿಸುವ ಮೂಲಕ ಸಮರ್ಪಕ ವಿದ್ಯುತ್ ಪೂರೈಕೆಗೆ ಕ್ರಮ ವಹಿಸಲಾಗುತ್ತಿದೆ.**



**– ಕೆ.ಜೆ.ಜಾರ್ಜ್, ಇಂಧನ ಮತ್ತು ಪ್ರವಾಸೋದ್ಯಮ ಸಚಿವರು**

**ಕಲ್ಲಿದ್ದಲು ಸಂಗ್ರಹ ಹೆಚ್ಚಳ:** ಶಾಖೋತ್ಪನ್ನ ಕೇಂದ್ರಗಳಲ್ಲಿ ಹೆಚ್ಚುವರಿ ವಿದ್ಯುತ್ ಉತ್ಪಾದನೆ ಮಾಡಲು ಕಲ್ಲಿದ್ದಲು ಸಂಗ್ರಹ ಹೆಚ್ಚಿಸುವ ನಿಟ್ಟಿನಲ್ಲಿ ಈಗಾಗಲೇ ಕ್ರಮ ವಹಿಸಲಾಗಿದೆ. ಕಳೆದ ವರ್ಷ ಈ ಅವಧಿಯಲ್ಲಿ 12 ದಿನಕ್ಕೆ ಬೇಕಾಗುವ ಕಲ್ಲಿದ್ದಲು ಸಂಗ್ರಹವಿತ್ತು. ಜುಲೈ ತಿಂಗಳಲ್ಲಿ 15 ದಿನಕ್ಕೆ ಬೇಕಾಗುವ ಕಲ್ಲಿದ್ದಲು ಸಂಗ್ರಹವಾಗಿದೆ. ಜತೆಗೆ ಕಲ್ಲಿದ್ದಲು ಸಂಗ್ರಹವನ್ನು 20 ದಿನಕ್ಕೆ ಬೇಕಾಗುವಷ್ಟು ಹೆಚ್ಚಿಸಲು ಕ್ರಮ ವಹಿಸಲಾಗುತ್ತಿದ್ದು, ದಿನಕ್ಕೆ 17ರಿಂದ 18 ರೇಕ್ ಕಲ್ಲಿದ್ದಲು ತರಿಸಿಕೊಳ್ಳಲಾಗುತ್ತಿದೆ.

# ರಾಜ್ಯದ ಮತ್ತೊಂದು ಪಂಪ್ಡ್ ಸ್ಟೋರೇಜ್, ವಿದ್ಯುತ್ ಘಟಕ ನಿರ್ಮಾಣ

**ಕಲಬುರಗಿ, ಜು. 22:** ಮಲೆನಾಡಿನಲ್ಲಿ ಶರಾವತಿ ಪಂಪ್ಡ್ ಸ್ಟೋರೇಜ್ ಯೋಜನೆಗೆ ಪರಿಸರ ವಾದಿಗಳ ತೀವ್ರ ವಿರೋಧ ವ್ಯಕ್ತವಾದ ಬೆನ್ನಲ್ಲೇ ರಾಜ್ಯದಲ್ಲಿ ಮತ್ತೊಂದು ಇಂಥದ್ದೇ ಯೋಜನೆಗೆ ರಾಜ್ಯ ಸರ್ಕಾರ ಉತ್ಸುಕತೆ ತೋರಿದೆ. ಸಚಿವ ಪ್ರಿಯಾಂಕ್ ಖರ್ಗೆ ಪ್ರತಿನಿಧಿಸುವ ಕಲಬುರಗಿ ಜಿಲ್ಲೆಯ ಚಿತ್ತಾಪುರ ತಾಲೂಕಿನ ಭೀಮಾ ನದಿ ತೀರದಲ್ಲಿ ಪಂಪ್ಡ್ ಸ್ಟೋರೇಜ್ ಯೋಜನೆಯ ಅನುಷ್ಠಾನಕ್ಕೆ ರಾಜ್ಯ ಸರ್ಕಾರ ಭರದಿಂದ ಸಿದ್ಧತೆಗಳು ನಡೆಸಿದ್ದು, ಇದಕ್ಕಾಗಿ ಖಾಸಗಿ ಕಂಪನಿಯೊಂದು ಪ್ರಸ್ತಾವನೆ ಕೂಡ ಸಿದ್ಧಪಡಿಸಿ ಸರ್ಕಾರಕ್ಕೆ ಸಲ್ಲಿಸಿದೆ.

ಎಲ್ಲವೂ ಅಂದುಕೊಂಡಂತೆ ನಡೆದರೆ ರಾಜ್ಯದ 4ನೇ ಪಂಪ್ಡ್ ಸ್ಟೋರೇಜ್ ಯೋಜನೆ ಚಿತ್ತಾಪುರ ತಾಲೂಕಿನ ಸಂಕನೂರು ಗ್ರಾಮದ ಬಳಿಯ ಭೀಮಾ ನದಿ ತೀರದಲ್ಲಿ ಕಾರ್ಯಗತವಾಗಲಿದೆ.

ಬೆಂಗಳೂರು ಮೂಲದ 'ಸೆರುಲಿಯನ್ ಎನರ್ಜಿ ಸೋಲ್ಯುಷನ್ಸ್ ಕಂಪನಿ ಈ ಯೋಜನೆಯ ಪ್ರಸ್ತಾನವೆ ಸಿದ್ಧಪಡಿಸಿ ಸಲ್ಲಿಸಿದೆ ಎಂದು ಹೇಳಲಾಗಿದೆ.



ಇದಕ್ಕಾಗಿ ಚಿತ್ತಾಪುರ ತಾಲೂಕಿನ ಸಂಕನೂರು ಗ್ರಾಮದ ವ್ಯಾಪ್ತಿಯಲ್ಲಿ 65 ಎಕರೆ ಅರಣ್ಯ ಭೂಮಿ ಸೇರಿದಂತೆ ಒಟ್ಟು 747 ಎಕರೆ ಭೂಮಿ ನೀಡುವಂತೆ ಕಂಪನಿಯು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದೆ. ಅರಣ್ಯ ಇಲಾಖೆ ಮೂಲಗಳ ಪ್ರಕಾರ ಈ ಯೋಜನೆಗೆ ಇತ್ತೀಚೆಗಷ್ಟೇ 'ಟರ್ಮ್ಸ್ ಆಫ್ ರೆಫರೆನ್ಸ್' ದೊರೆತಿದೆ ಎನ್ನಲಾಗಿದೆ.

ಭೀಮಾನದಿಯಿಂದ ನೀರು ಬಳಕೆ: ಈ ಯೋಜನೆಗಾಗಿ ಎರಡು ಮಧ್ಯಂತರ ಜಲಾಶಯಗಳನ್ನು ನಿರ್ಮಾಣ ಮಾಡಲಾಗುವುದು. ಇದಕ್ಕಾಗಿ ಸುಮಾರು 12 ಕಿಮೀ ದೂರದಲ್ಲಿ ಹರಿಯುವ ಭೀಮಾ ನದಿಯಿಂದ ಒಂದೇ ಬಾರಿಗೆ 0.243 ಟಿಎಂಸಿ ನೀರೆತ್ತಲು ಉದ್ದೇಶಿಸಲಾಗಿದೆ.

ಒಮ್ಮೆ ಸಂಗ್ರಹಿಸಿದ ನೀರನ್ನು ಎರಡೂ ಜಲಾಶಯಗಳ ಮಧ್ಯೆ ಹಂಚಿಕೆ ಮಾಡಿ, ಪುನರ್‌ಬಳಕೆ ಮಾಡಲಾಗುವುದು. ಇದರಿಂದಲೇ ವಿದ್ಯುತ್ ಉತ್ಪಾದನೆ ಮಾಡಲಾಗುವುದು. ಈ ಹಂತದಲ್ಲಿ ಆವಿಯಾಗುವ ನೀರನ್ನು ನಿಯಮಿತವಾಗಿ ಭೀಮಾನದಿಯಿಂದಲೇ ಮರುಪೂರಣ ಮಾಡಿಕೊಳ್ಳಲು ಉದ್ದೇಶಿಸಲಾಗಿದೆ. ವಿದ್ಯುತ್ ಸಂಗ್ರಹಣೆ ಮತ್ತು ಪಂಪಿಂಗ್ ಮೋಡ್ ಸಮಯದಲ್ಲಿ ವಿದ್ಯುತ್ ಪೂರೈಕೆಗಾಗಿ ಶಹಾಬಾದನ ಕೆಪಿಟಿಸಿಎಲ್ ಉಪಕೇಂದ್ರಕ್ಕೆ 220 ಕೆವಿ ಡಬಲ್ ಸರ್ಕ್ಯೂಟ್ ಲೈನ್ ಮೂಲಕ ಸಂಪರ್ಕ ಕಲ್ಪಿಸಲು ಯೋಜಿಸಲಾಗಿದೆ ಎಂದು ಕಂಪನಿ ಹೇಳಿದೆ ಎಂದು ಮೂಲಗಳು ತಿಳಿಸಿವೆ.

ಶರಾವತಿಯಂತೆ ವಿರೋಧ ಇಲ್ಲ! : ದೇಶದಲ್ಲಿ ನವೀಕರಿಸಬಹುದಾದ ಇಂಧನ ಬಳಕೆಗೆ ಒತ್ತು ನೀಡಲಾಗುತ್ತಿದ್ದರೂ ಇಂತಹ ಯೋಜನೆಗಳು ಪರಿಸರ ಸೂಕ್ಷ್ಮ ಪ್ರದೇಶಗಳಲ್ಲಿ ಬರುತ್ತಿರುವುದರಿಂದ ಪರಿಸರವಾದಿಗಳಿಂದ ವಿರೋಧ ವ್ಯಕ್ತವಾಗುತ್ತಿದೆ. ಮಲೆನಾಡು ಭಾಗದ ಶಿವಮೊಗ್ಗ ಮತ್ತು ಉತ್ತರ ಕನ್ನಡ ಜಿಲ್ಲೆಯಲ್ಲಿ ಶರಾವತಿ ಪಂಪ್ಡ್ ಸ್ಟೋರೇಜ್‌ಗೆ ಭಾರೀ ದೊಡ್ಡ ಪ್ರಮಾಣದಲ್ಲಿ ವಿರೋಧ ವ್ಯಕ್ತವಾಗುತ್ತಿದೆ. ಪಶ್ಚಿಮ ಘಟ್ಟ ಪ್ರದೇಶದಲ್ಲಿ ಈ ಯೋಜನೆ ಅನುಷ್ಠಾನದಿಂದ ಪರಿಸರಕ್ಕೆ ಮಾರಕವಾಗಲಿದೆ ಎಂಬ ಕೂಗು ಜೋರಾಗಿದೆ. ಆದರೆ, ಚಿತ್ತಾಪುರ ತಾಲೂಕಿನ ಸಂಕನೂರಿನಲ್ಲಿ ಅಷ್ಟೊಂದು ವಿರೋಧ ವ್ಯಕ್ತವಾಗುವ ಸಾಧ್ಯತೆ ಕಡಿಮೆ ಎನ್ನುವುದು ಸರ್ಕಾರದ ಸಮರ್ಥನೆ.

> **ಕಲ್ಯಾಣ ಕರ್ನಾಟಕದ ಭಾಗಕ್ಕೆ ಇದು ಉತ್ತಮ ಯೋಜನೆ. ಚಿತ್ತಾಪುರ ಭಾಗದ ವನ್ಯಜೀವಿ ಹಾಗೂ ಪರಿಸರದ ಮೇಲೆ ಈ ಯೋಜನೆ ದುಷ್ಪರಿಣಾಮ ಬೀರದಂತೆ ಸರ್ಕಾರ ಸೂಕ್ತ ಯೋಜನೆ ರೂಪಿಸಬೇಕು. ರೈತರ ಜೀವನೋಪಾಯಕ್ಕೆ ಧಕ್ಕೆಯಾಗದಂತೆ ಫಲವತ್ತಾದ ಕೃಷಿ ಭೂಮಿ ಸ್ವಾಧೀನಪಡಿಸಿಕೊಳ್ಳುವುದನ್ನು ತಪ್ಪಿಸಬೇಕು. ವಶಪಡಿಸಿಕೊಂಡು ಭೂಮಿಗೆ ನ್ಯಾಯಯುತ ಪರಿಹಾರ ಖಾತ್ರಿಪಡಿಸಬೇಕು. – ಡಾ.ಸಂಗೀತಾ ಕಟ್ಟಿಮನಿ, ಆರ್ಥಿಕ ತಜ್ಞೆ, ಕಲಬುರಗಿ.**

ಬೆಳಗಾವಿ ಜಿಲ್ಲೆ ಸವದತ್ತಿಯಲ್ಲಿ ಮಲಪ್ರಭಾ ನದಿ ಮೂಲಕ ನೀರು ಬಳಸಿ, 1600 ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆ ಮಾಡುವ ಯೋಜನೆ ವೇಳೆಯೂ ವಿರೋಧ ವ್ಯಕ್ತವಾಗಿರಲಿಲ್ಲ. ಅದೇ ರೀತಿ ಇಲ್ಲೂ ಕೂಡ ಯಾವುದೇ ತಕರಾರು ಬರುವುದಿಲ್ಲ ಎಂಬ ಆಶಾಭಾವನೆ ಸರ್ಕಾರಕ್ಕಿದೆ.

ಏನಿದು ಯೋಜನೆ?: ಚಿತ್ತಾಪುರ ತಾಲೂಕಿನ ಭೀಮಾ ನದಿ ತೀರದಲ್ಲಿ ಪಂಪ್ಡ್ ಸ್ಟೋರೇಜ್ ಯೋಜನೆಗಾಗಿ ಎರಡು ಮಧ್ಯಂತರ ಜಲಾಶಯ ನಿರ್ಮಾಣ. ಸುಮಾರು 12 ಕಿಮೀ ದೂರದಲ್ಲಿ ಹರಿಯುವ ಭೀಮಾ ನದಿಯಿಂದ ಒಂದೇ ಬಾರಿಗೆ 0.243 ಟಿಎಂಸಿ ನೀರೆತ್ತುವ ಉದ್ದೇಶ. ಒಮ್ಮೆ ಸಂಗ್ರಹಿಸಿದ ನೀರನ್ನು ಎರಡೂ ಜಲಾಶಯಗಳ ಮಧ್ಯೆ ಹಂಚಿಕೆ ಮಾಡಿ ಪುನರ್‌ಬಳಕೆ. ಇದರಿಂದಲೇ ವಿದ್ಯುತ್ ಉತ್ಪಾದನೆ ಮಾಡುವ ಗುರಿ.

# ವಿದ್ಯಾರ್ಥಿಗಳ ಮೇಲೆ ನಡೆದ ಹಲ್ಲೆ, ಸರ್ಕಾರವೇ ಉತ್ತರಿಸಬೇಕು: ಸೈಯದ್ ನಾಸಿರ್ ಹುಸೇನ್

**ನವದೆಹಲಿ, ಜು.22:** ವಿದ್ಯಾರ್ಥಿಗಳೊಂದಿಗೆ ಸರ್ಕಾರ ನಡೆದುಕೊಂಡ ರೀತಿ ಅತ್ಯಂತ ಖಂಡನೀಯವಾಗಿದೆ. ವಿದ್ಯಾರ್ಥಿಗಳ ಮೇಲೆ ಲಾಠಿಚಾರ್ಜ್ ನಡೆಸಿರುವುದು, ಜಲಫಿರಂಗಿ (ವಾಟರ್ ಕ್ಯಾನನ್) ಪ್ರಯೋಗಿಸಿರುವುದು ಹಾಗೂ ಅನೇಕ ವಿದ್ಯಾರ್ಥಿಗಳು ಆಸ್ಪತ್ರೆಗಳಿಗೆ ದಾಖಲಾಗುವಂತಾದ ಘಟನೆಗಳು ತೀವ್ರ ಕಳವಳಕ್ಕೆ ಕಾರಣವಾಗಿವೆ.

ತಮ್ಮ ನ್ಯಾಯಸಮ್ಮತ ಬೇಡಿಕೆಗಳನ್ನು ಮುಂದಿಟ್ಟ ವಿದ್ಯಾರ್ಥಿಗಳ ವಿರುದ್ಧ ಇಂತಹ ಅಮಾನವೀಯ ಹಾಗೂ ದಮನಕಾರಿ ಕ್ರಮಗಳನ್ನು ಕೈಗೊಂಡಿರುವುದು ಪ್ರಜಾಪ್ರಭುತ್ವದ ಮೌಲ್ಯಗಳಿಗೆ ವಿರುದ್ಧವಾಗಿದೆ. ಈ ಘಟನೆಗಳಿಗೆ ಹೊಣೆ ಯಾರು ?



ವಿದ್ಯಾರ್ಥಿಗಳ ಮೇಲೆ ನಡೆದ ಈ ಎಲ್ಲ ಕ್ರಮಗಳಿಗೆ ಸರ್ಕಾರವೇ ಉತ್ತರಿಸಬೇಕು ಹಾಗೂ ನೈತಿಕ ಹೊಣೆಗಾರಿಕೆಯನ್ನು ಹೊರಬೇಕು ಎಂದು ರಾಜ್ಯಸಭಾ ಸದಸ್ಯರು ಹಾಗೂ ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಡಾ. ಸೈಯದ್ ನಾಸಿರ್ ಹುಸೇನ್ ಆಗ್ರಹಿಸಿದ್ದಾರೆ.

# ಬೀದಿನಾಯಿಗಳ ಹಾವಳಿ ತಡೆಗೆ ಕ್ರಮ ಕೈಗೊಳ್ಳಲು ಜಿಲ್ಲಾಧಿಕಾರಿ ಸೂಚನೆ

**ರಾಯಚೂರು, ಜು. 22:** ನಗರ ಹಾಗೂ ಗ್ರಾಮೀಣ ಪ್ರದೇಶದಲ್ಲಿ ಮಕ್ಕಳ ಮೇಲೆ ಬೀದಿ ನಾಯಿಗಳು ದಾಳಿ ನಡೆಸುತ್ತಿರುವುದನ್ನು ತಡೆಯಲು ಸಂಬಂಧಪಟ್ಟ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಪೂವಿತಾ ಎಸ್. ಸೂಚಿಸಿದರು.

ಇತ್ತೀಚೆಗೆ ನಗರದಲ್ಲಿ ಎಂಟು ಜನರಿಗೆ ಬೀದಿ ನಾಯಿಗಳು ಕಡಿದು ಗಾಯಗೊಳಿಸಿದ್ದು, ಸಿಂಧನೂರ ಗ್ರಾಮದಲ್ಲಿ ಮಗುವಿನ ಮೇಲೆ ನಾಯಿ ದಾಳಿ ನಡೆಸಿದ್ದರಿಂದ ಮೃತಪಟ್ಟ ಘಟನೆಯ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಬೀದಿ ನಾಯಿಗಳ ಹಾವಳಿ ತಡೆಗಟ್ಟುವಲ್ಲಿ ಸಮಿತಿಯ ಕಾರ್ಯ ಚಟುವಟಿಕೆಗಳ ಕುರಿತು ಚರ್ಚಿಸಲು ಕರೆದಿದ್ದ ವಿವಿಧ ಇಲಾಖೆಗಳ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದರು.



ಬೀದಿ ನಾಯಿಗಳಿಂದ ಮಕ್ಕಳು ಹಾಗೂ ಸಾರ್ವಜನಿಕರ ಮೇಲೆ ಜಿಲ್ಲೆಯ ಅಲ್ಲಲ್ಲಿ ನಡೆಯುತ್ತಿರುವ ದಾಳಿ ಪ್ರಕರಣಗಳನ್ನು ತಡೆಗಟ್ಟುವ ಉದ್ದೇಶದಿಂದ ಇಂದು ಸಭೆ ಕರೆಯಲಾಗಿದೆ. ಇಂತಹ ಪ್ರಕರಣಗಳು ಜಿಲ್ಲೆಯಲ್ಲಿ ಮರುಕಳಿಸದಂತೆ ಮುನ್ನೆಚ್ಚರಿಕೆ ವಹಿಸಬೇಕು ಎಂದು ಅವರು ಹೇಳಿದರು.

ಬೀದಿ ನಾಯಿಗಳ ದಾಳಿಯಿಂದ ಮಕ್ಕಳು ಗಾಯಗೊಂಡಿರುವ ಹಾಗೂ ಕೆಲವು ದುರ್ಘಟನೆಗಳಲ್ಲಿ ಮಕ್ಕಳ ಸಾವು ಸಂಭವಿಸಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರ ಹಿತದೃಷ್ಟಿಯಿಂದ ಎಚ್ಚರಿಕೆ ವಹಿಸಬೇಕು. ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಅವರು ಹೇಳಿದರು.

# ರೋಟರಿ ಸಿಲ್ವರ್ ಸ್ಟಾರ್‌ನಿಂದ ಐಸಿಯು ಆಂಬ್ಯುಲೆನ್ಸ್ ಸೇವೆ

**ಬೀದರ್, ಜು. 22:** ರೋಟರಿ ಕ್ಲಬ್ ಆಫ್ ಬೀದರ್ ಸಿಲ್ವರ್ ಸ್ಟಾರ್ ವತಿಯಿಂದ ವರ್ಷದ ಒಳಗೆ ತೀವ್ರ ನಿಗಾ ಘಟಕ (ಐಸಿಯು) ಆಂಬುಲನ್ಸ್ ಸೇವೆ ಆರಂಭಿಸಲು ಯೋಜಿಸಲಾಗಿದೆ ಎಂದು ಕ್ಲಬ್ ಅಧ್ಯಕ್ಷೆ ಸ್ಫೂರ್ತಿ ಬಸವರಾಜ ಧನ್ನೂರ ಹೇಳಿದರು.

ನಗರದ ಖಾಸಗಿ ಹೋಟೆಲ್ ಸಭಾಂಗಣದಲ್ಲಿ ನಡೆದ ರೋಟರಿ ಕ್ಲಬ್ ಆಫ್ ಬೀದರ್ ಸಿಲ್ವರ್ ಸ್ಟಾರ್‌ನ 2026–27ನೇ ಸಾಲಿನ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಐಸಿಯು ಆಂಬ್ಯುಲನ್ಸ್ ಇಲ್ಲ. ಇದು, ಆ ಕೊರತೆಯನ್ನು ನೀಗಿಸಲಿದೆ. ಜಿಲ್ಲೆಯಾದ್ಯಂತ ಸೇವೆ ಒದಗಿಸಲಿರುವ ಕಾರಣ ಅತಿ ಗಂಭೀರ ಸ್ಥಿತಿಯಲ್ಲಿರುವ ರೋಗಿಗಳ ಪ್ರಾಣ ಉಳಿಸಲು ಸಹಕಾರಿಯಾಗಲಿದೆ ಎಂದು ತಿಳಿಸಿದರು.




**ಬೀದರ ರೋಟರಿ ಕ್ಲಬ್ ಆಫ್ ಸಿಲ್ವರ್ ಸ್ಟಾರ್ ವತಿಯಿಂದ ನೂತನ ಪದಾಧಿಕಾರಿಗಳ ಅಧಿಕಾರ ಗ್ರಹಣ ಸಮಾರಂಭವನ್ನು ಕ್ಲಬ್ ಅಧ್ಯಕ್ಷೆ ಸ್ಫೂರ್ತಿ ಬಸವರಾಜ ಧನ್ನೂರ ಉದ್ಘಾಟಿಸಿದರು.**

ಬೇಟಿ ಬಚಾವೋ ಬೇಟಿ ಪಡಾವೋ ಘೋಷವಾಕ್ಯದೊಂದಿಗೆ ಈ ವರ್ಷವೂ ಕ್ರಿಕೆಟ್ ಟೂರ್ನಿ ಸಂಘಟಿಸಿ, ದೇಣಿಗೆ ಸಂಗ್ರಹಿಸಿ, ಹೆಣ್ಣುಮಕ್ಕಳ ಶಿಕ್ಷಣ ಹಾಗೂ ಸಬಲೀಕರಣಕ್ಕೆ ಪೂರಕವಾದ ಚಟುವಟಿಕೆ ಗಳಿಗೆ ವಿನಿಯೋಗಿಸಲಾಗುವುದು ಎಂದು ಹೇಳಿದರು.

ಕೆಲ ಸರ್ಕಾರಿ ಶಾಲೆಗಳನ್ನು ಆಯ್ಕೆ ಮಾಡಿಕೊಂಡು, ಅಗತ್ಯ ಮೂಲಸೌಕರ್ಯ ಕಲ್ಪಿಸಿ, ಅವುಗಳನ್ನು ಹ್ಯಾಪಿ ಸ್ಕೂಲ್‌ಗಳಾಗಿ ಪರಿವರ್ತಿಸಲಾಗುವುದು. ಇನ್ನೂ ಅನೇಕ ಯೋಜನೆಗಳನ್ನು ಜಾರಿಗೊಳಿಸಲಾಗುವುದು ಎಂದು ತಿಳಿಸಿದರು.

ಪ್ರಸ್ತುತ ಬಹುತೇಕರು ವೈಯಕ್ತಿಕ ಬದುಕಿಗಾಗಿ ಮ್ಯಾರಥಾನ್‌ನಲ್ಲಿ ಓಡಿದಂತೆ, ಓಡುತ್ತಿದ್ದಾರೆ. ವೈಯಕ್ತಿಕ ಬದುಕಿನತ್ತಲೇ ಗಮನ ಕೇಂದ್ರೀಕರಿಸಿದ್ದಾರೆ. ಆದರೆ, ರೋಟರಿ ಕ್ಲಬ್ ಸದಸ್ಯರು ವೈಯಕ್ತಿಕ ಬದುಕಿನ ಜತೆಗೆ ಸಮಾಜಕ್ಕೂ ಕೊಡುಗೆ ನೀಡುತ್ತಿದ್ದಾರೆ. ಸ್ವಯಂಸೇವಕರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ಹೇಳಿದರು.

ಅಂತರರಾಷ್ಟ್ರೀಯ ರೋಟರಿ ಸಂಸ್ಥೆ ಸಾಮಾಜಿಕ ಕಳಕಳಿ ಹೊಂದಿದೆ. ವಿವಿಧ ಸಾಮಾಜಿಕ ಚಟುವಟಿಕೆಗಳಲ್ಲಿ ಸಕ್ರಿಯವಾಗಿದೆ

ತರುಣ್ ಸೂರ್ಯಕಾಂತ ನಾಗಮಾರಪಳ್ಳಿ, ಕಿರಣ್ ಶೈಲೇಂದ್ರ ಬೆಲ್ದಾಳೆ ಹಾಗೂ ಪ್ರಶಾಂತ್ ಲಂಜವಾಡೆ ಕ್ಲಬ್ ಸದಸ್ಯತ್ವ ಪಡೆದರು.

ಇದೇ ಸಂದರ್ಭದಲ್ಲಿ ರೋಟರಿ ಕ್ರಿಕೆಟ್ ಪ್ರೀಮಿಯರ್ ಲೀಸ್‌ಗೆ ಚಾಲನೆ ನೀಡಲಾಯಿತು. ತಂಡಗಳ ಮಾಲೀಕರ ಹೆಸರು ಘೋಷಣೆ ಮಾಡಲಾಯಿತು.

# ಬಣಜಿಗ ಜಾತಿಗೆ 2ಎ ಅಡಿಯಲ್ಲಿ ಉದ್ಯೋಗ ಮೀಸಲಾತಿ ಕಲ್ಪಿಸಿ



**ಬಳ್ಳಾರಿ, ಜು.22:** ವೀರಶೈವ ಲಿಂಗಾಯತ ಉಪ ಪಂಗಡ ಬಣಜಿಗ ಜಾತಿಗೆ ಪ್ರವರ್ಗ 2ಎ ಅಡಿಯಲ್ಲಿ ಉದ್ಯೋಗ ಮೀಸಲಾತಿ ನೀಡಬೇಕೆಂದು ಒತ್ತಾಯಿಸಿ ರಾಜ್ಯದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರಿಗೆ ಮನವಿ ಪತ್ರ ಕಳುಹಿಸಿ ಕೊಡಲಾಗಿದೆ.

ಕರ್ನಾಟಕ ರಾಜ್ಯ ಬಣಜಿಗ ಸಮಾಜದ ಕ್ಷೇಮಾಭಿವೃದ್ಧಿ ಸಂಘದ ಬಳ್ಳಾರಿ ತಾಲೂಕು ಗ್ರಾಮಾಂತರ ಘಟಕದ ಅಧ್ಯಕ್ಷ ಬಿ.ಬಸವರಾಜ್ ನೇತೃತ್ವದಲ್ಲಿ ಸಂಘದ ಪದಾಧಿಕಾರಿಗಳು ಮತ್ತು ಸದಸ್ಯರು. ತಹಸಿಲ್ದಾರ್ ಅವರಿಗೆ ಮನವಿ ಸಲ್ಲಿಸಿದರು.

ಮೈಸೂರು ಜಿಲ್ಲೆಯ ಕೊಳ್ಳೇಗಾಲದ ನಮ್ಮಸಮುದಾಯದ ಶಿಕ್ಷಕಿ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿ ಸುರಜ್ ಗೋವಿಂದರಾಜ ಅವರ ಏಕ ಸದಸ್ಯ ಪೀಠವು, ಬಣಜಿಗ ಸಮುದಾಯವನ್ನು ಉದ್ಯೋಗದ ಉದ್ದೇಶಕ್ಕಾಗಿ ಪ್ರವರ್ಗ–ಡಿ ಹಾಗೂ ಶಿಕ್ಷಣ ಉದ್ದೇಶ ಕ್ಕಾಗಿ ಪ್ರವರ್ಗ–ಬಿ ಅಡಿಯಲ್ಲಿ ವರ್ಗೀಕರಿಸಿರವುದು ಪರಿಚ್ಛೇದದ ಉಲ್ಲಂಘನೆ ಯಾಗುತ್ತದೆ. ಅದಕ್ಕಾಗಿ ಬಣಜಿಗ ಸಮುದಾಯವನ್ನು ಪರಿಚ್ಛೇದ 16(4)ರ ಅಡಿಯಲ್ಲಿ ಗ್ರೂಪ್–ಡಿ ಬದಲಿಗೆ ಗ್ರೂಪ್–ಬಿ ಅಡಿಯಲ್ಲಿ ಮರು ವರ್ಗೀಕರಿಸಬೇಕೆಂದು ಆದೇಶ ನೀಡಿದೆ.

ಶೈಕ್ಷಣಿಕವಾಗಿ ಅತೀ ಹಿಂದುಳಿದಿರುವುದರಿಂದ, ಸರ್ಕಾರಿ ನೇಮಕಾತಿಗಳಿಂದ ಅವಕಾಶ ವಂಚಿತರಾಗುತ್ತಿದ್ದಾರೆ. ನಮ್ಮ ಸಮುದಾಯದವರು ಸಂವಿಧಾನದ ಅಡಿ ಬಣಜಿಗ ಜಾತಿಗೆ 2ಎ ಅಡಿಯಲ್ಲಿ ಉದ್ಯೋಗ ಮೀಸಲಾತಿ ಕಲ್ಪಿಸಲು ಸಮುದಾಯಕ್ಕೆ ಇದು ವ್ಯತಿರಿಕ್ತವಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಬಣಜಿಗ ಸಮುದಾಯವನ್ನು 16(4) ಅಡಿಯಲ್ಲಿ ಗ್ರೂಪ್–ಡಿ ಬದಲಿಗೆ ಗ್ರೂಪ್–ಬಿ ಅಡಿಯಲ್ಲಿಯೇ

ಮರು ವರ್ಗೀಕರಿಸಿ ಉಚ್ಚ ನ್ಯಾಯಾಲಯದ ಆದೇಶದ ಪ್ರಕಾರ ಬಣಜಿಗ ಸಮುದಾಯಕ್ಕೆ ಸಾಮಾಜಿಕ ನ್ಯಾಯ ಒದಗಿಸಲು ಸಂಬಂಧಿಸಿದ ಇಲಾಖೆಗೆ ಸೂಕ್ತ ಆದೇಶ ನೀಡುವಂತೆ ಕೋರಿದ್ದಾರೆ ಎಂದು ತಿಳಿಸಿದ್ದಾರೆ

## ಜೆಡಿಎಸ್ ಕಚೇರಿಯಲ್ಲಿ ಚೆನ್ನಮ್ಮ ದೇವೇಗೌಡ ಅವರಿಗೆ ಭಾವಪೂರ್ಣ ಶ್ರದ್ಧಾಂಜಲಿ

**ಬಳ್ಳಾರಿ ಜು 22.** ನಗರದ ಜೆಡಿಎಸ್ ಜಿಲ್ಲಾ ಕಚೇರಿಯಲ್ಲಿ ಮಾಜಿ ಪ್ರಧಾನ ಮಂತ್ರಿ ಎಚ್.ಡಿ.ದೇವೇಗೌಡ ಅವರ ಪತ್ನಿ ಚೆನ್ನಮ್ಮ ಅವರಿಗೆ ಭಾವಪೂರ್ಣ ಶ್ರದ್ಧಾಂಜಲಿ ಕಾರ್ಯಕ್ರಮವನ್ನು ಬುಧವಾರ ಹಮ್ಮಿಕೊಳ್ಳಲಾಗಿತ್ತು.

ಜೆಡಿಎಸ್ ಜಿಲ್ಲಾಧ್ಯಕ್ಷ ಮೀನಳ್ಳಿ ತಾಯಣ್ಣ ಅವರು ಸೇರಿದಂತೆ ಜಿಲ್ಲಾ ಸಮಿತಿಯ ಎಲ್ಲ ಪದಾಧಿಕಾರಿಗಳು, ನೂರಾರು ಕಾರ್ಯಕರ್ತರು ಚನ್ನಮ್ಮ ಅವರ ಭಾವಚಿತ್ರಕ್ಕೆ ಪುಷ್ಪಗಳನ್ನು ಅರ್ಪಿಸಿ, ಅಗಲಿದ ಚನ್ನಮ್ಮ ಅವರ ಆತ್ಮಕ್ಕೆ ಶಾಂತಿ, ನೆಮ್ಮದಿಯನ್ನು ನೀಡಲಿ, ಕುಟುಂಬದ ಸದಸ್ಯರಿಗೆ ದುಃಖವನ್ನು ಭರಿಸುವಂತ ಶಕ್ತಿಯನ್ನು ದೇವರು ದಯಪಾಲಿಸಲಿ ಎಂದು ಪ್ರಾರ್ಥಿಸಿದರು.

ನಂತರ ಎಲ್ಲರೂ ಕೆಲ ಕಾಲ ಮೌನಾಚರಣೆ ಸಲ್ಲಿಸಿ, ಅಗಲಿದ ಚನ್ನಮ್ಮ ಅವರ ಆತ್ಮಕ್ಕೆ ದೇವರು ಶಾಂತಿ, ನೆಮ್ಮದಿ ನೀಡಲಿ ಎಂದು ಪ್ರಾರ್ಥಿಸಿದರು.

ಈ ಸಂದರ್ಭದಲ್ಲಿ ಜೆಡಿಎಸ್ ಜಿಲ್ಲಾಧ್ಯಕ್ಷ ಮೀನಳ್ಳಿ ತಾಯಣ್ಣ ಅವರು ಮಾತನಾಡಿ, ಮಾಜಿ ಪ್ರಧಾನ ಮಂತ್ರಿ



ಎಚ್.ಡಿ.ದೇವೇಗೌಡ ಅವರ ಪತ್ನಿ ಚನ್ನಮ್ಮ ಅವರು ನಮ್ಮನ್ನಗಲಿದ್ದು, ಅತೀವ ದುಃಖ ತರಿಸಿದೆ, ಅತ್ಯಂತ ನೋವನ್ನುಂಟು ಮಾಡಿದೆ. ದೇವರು ಅವರ ಆತ್ಮಕ್ಕೆ ಶಾಂತಿ ನೆಮ್ಮದಿಯನ್ನು ನೀಡಲಿ, ಕುಟುಂಬದ ಸದಸ್ಯರಿಗೆ ದುಃಖ ಭರಿಸುವ ಶಕ್ತಿಯನ್ನು ನೀಡಲಿ ಎಂದು ಪ್ರಾರ್ಥಿಸಿದರು. ಮನೆಗೆ ಯಾರೇ ಬರಲಿ ಅವರನ್ನು ಪ್ರೀತಿಯಿಂದ ಸ್ವಾಗತಿಸಿ ತಾಯಿಯಂತೆ ನೋಡಿಕೊಳ್ಳುತ್ತಿದ್ದರು.




**ಬೆಂಗಳೂರಿನ ವಕೀಲರ ಸಂಘದ ಸದಸ್ಯರು ಬುಧವಾರ ಬೆಂಗಳೂರಿನ ಹೈಕೋರ್ಟ್‌ನಲ್ಲಿ ಆಡಳಿತ ವೈಫಲ್ಯ, ನೋಂದಣಿ ವಿಳಂಬ ಮತ್ತು ಸೌಲಭ್ಯಗಳ ಕೊರತೆ (ಲಿಫ್ಟ್, ಪಾರ್ಕಿಂಗ್, ಶೌಚಾಲಯ) ಯನ್ನು ಖಂಡಿಸಿ ಪ್ರತಿಭಟನೆ ನಡೆಸಿದರು.**

# ಲಲಿತಮಹಲ್ ಪ್ಯಾಲೇಸ್ ಹೋಟೆಲ್ ನಿರ್ವಹಣೆ ಖಾಸಗಿ ಸಂಸ್ಥೆಗೆ ನೀಡಲು ಮುಂದಾದ ಸರ್ಕಾರ

**ಮೈಸೂರು, ಜು.22:** ಸಾಂಸ್ಕೃತಿಕ ನಗರಿ ಮೈಸೂರಿನ ಹೆಮ್ಮೆಯ ಐತಿಹಾಸಿಕ ಲಲಿತಮಹಲ್ ಪ್ಯಾಲೆಸ್ ಹೋಟೆಲ್ ಅನ್ನು ಖಾಸಗಿ ವ್ಯಕ್ತಿಗಳ ಅಥವಾ ಸಂಸ್ಥೆಗಳ ನಿರ್ವಹಣೆಗೆ ನೀಡಲು ರಾಜ್ಯ ಸರ್ಕಾರ ಮುಂದಾಗಿದೆ.



ಶತಮಾನದ ಹಳೆಯ ಅರಮನೆಯ ಸಂರಕ್ಷಣೆ ಮತ್ತು ನಿರ್ವಹಣಾ ವೆಚ್ಚ ಅಧಿಕವಾಗಿರುವ ಹಿನ್ನೆಲೆಯಲ್ಲಿ, ಇದನ್ನು ಖಾಸಗಿ–ಸಾರ್ವಜನಿಕ ಸಹಭಾಗಿತ್ವದ ಅಡಿಯಲ್ಲಿ ದೀರ್ಘಕಾಲಿಕ ಗುತ್ತಿಗೆಗೆ ನೀಡಲು ಸರ್ಕಾರ ಉತ್ಸುಕವಾಗಿದೆ. ಪ್ರಸ್ತುತ ಈ ಪರಂಪರೆಯ ಕಟ್ಟಡವನ್ನು ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ 'ಜಂಗಲ್ ಲಾಡ್ಜಸ್ ಅಂಡ್ ರೆಸಾರ್ಟ್ಸ್' ಸಂಸ್ಥೆಯು ನಿರ್ವಹಿಸುತ್ತಿದೆ. ಆದರೆ, ಅರಮನೆಯ ನವೀಕರಣ ಮತ್ತು ಅಭಿವೃದ್ಧಿಗೆ ಬರೋಬ್ಬರಿ 45ರಿಂದ 50 ಕೋಟಿ ರೂ.ಗಳಿಗೂ ಅಧಿಕ ವೆಚ್ಚ ತಗುಲಲಿದ್ದು, ಸರ್ಕಾರದ ಮೇಲಿನ ಆರ್ಥಿಕ ಹೊರೆಯನ್ನು ತಗ್ಗಿಸಲು ಹಾಗೂ ಪ್ರವಾಸಿಗರಿಗೆ ಉತ್ತಮ ಸೌಲಭ್ಯ ಕಲ್ಪಿಸಲು ಖಾಸಗಿಯವರಿಗೆ ವಹಿಸುವುದು ಅನಿವಾರ್ಯ ಎಂದು ಸರ್ಕಾರ ಸ್ಪಷ್ಟಪಡಿಸಿದೆ.

ಮಹಾರಾಜ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಕಾಲಘಟ್ಟ 1921ರಲ್ಲಿ ಬ್ರಿಟಿಷ್ ವೈಸ್‌ರಾಯ್ ಹಾಗೂ ಅತಿಥಿಗಳಿಗಾಗಿ ನಿರ್ಮಿಸಲಾದ ಈ ಭವ್ಯ ಅರಮನೆಯ ಮೂಲ ಐತಿಹಾಸಿಕ ವಿನ್ಯಾಸ ಹಾಗೂ ಪಾರಂಪರಿಕ ಶೈಲಿಗೆ ಯಾವುದೇ ಧಕ್ಕೆಯಾಗದಂತೆ ನೋಡಿಕೊಳ್ಳಲು ಕಟ್ಟುನಿಟ್ಟಿನ ನಿಯಮಗಳನ್ನು ರೂಪಿಸಲಾಗಿದೆ. ಈ ಸಂಬಂಧ ಜಾಗತಿಕ ಟೆಂಡರ್ ಪ್ರಕ್ರಿಯೆಗಳನ್ನು ಆಹ್ವಾನಿಸಲಾಗಿದ್ದು, ಮುಂದಿನ ಕೆಲವೇ ತಿಂಗಳುಗಳಲ್ಲಿ ಲಲಿತಮಹಲ್ ಅರಮನೆಯ ನಿರ್ವಹಣೆಯ ಸಂಪೂರ್ಣ ಜವಾಬ್ದಾರಿ ಖಾಸಗಿ ವಲಯದ ಪಾಲಾಗುವ ಸಾಧ್ಯತೆಯಿದೆ.

# ಮಕ್ಕಳ ಪ್ರತಿಭೆಗೆ ತಕ್ಕ ಪ್ರತಿಫಲ ಖಂಡಿತ ಸಿಗುತ್ತದೆ: ಅಡವೇಶ ಇಟಗಿ

**ಕಲಬುರಗಿ, ಜು. 22:** ಮಕ್ಕಳು ತಮ್ಮ ಪ್ರತಿಭೆಯನ್ನು ಪ್ರದರ್ಶಿಸಬೇಕು, ಪ್ರತಿಭೆಗೆ ತಕ್ಕ ಪ್ರತಿಫಲ ಖಂಡಿತ ಸಿಗುತ್ತದೆ ಎಂದು ಧಾರವಾಡ ಕರ್ನಾಟಕ ಬಾಲ ವಿಕಾಸ ಅಕಾಡೆಮಿ ಅಧ್ಯಕ್ಷ ಅಡಿವೇಶ ಇಟಗಿ ಹೇಳಿದರು.



ನಗರದ ಅಬ್ದುಲ್ ನಜೀರ್ ಸಾಬ್ ಸಂಸ್ಥೆಯಲ್ಲಿ ಕರ್ನಾಟಕ ಬಾಲ ವಿಕಾಸ ಅಕಾಡೆಮಿ, ಜಿಲ್ಲಾ ಪಂಚಾಯತ್ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ 12–18 ವರ್ಷದ ಮಕ್ಕಳ 4 ದಿನಗಳ ಬಾಲ ಬಾಂಧವ್ಯ ವಿಭಾಗೀಯ ಕಾರ್ಯಾಗಾರ ಉದ್ಘಾಟಿಸಿ, ಪ್ರತಿ ಬಾರಿ ಧಾರವಾಡದಲ್ಲಿ ನಡೆಯುತ್ತಿದ್ದ ಈ ಕಾರ್ಯಕ್ರಮ ಕಲಬುರಗಿಯಲ್ಲಿ ನಡೆದಿರುವುದು ತುಂಬಾ ಸಂತಸ ತಂದಿದೆ,

ಹೆಚ್ಚಿನ ಮಕ್ಕಳು ಭಾಗವಹಿಸಲು ಅನುಕೂಲವಾಗಿದೆ. ಮಕ್ಕಳ ಸಹಾಯ ವಾಣಿ, ಅಕ್ಕಪಡೆ, ಬಾಲ್ಯವಿವಾಹ ತಡೆ ಹಾಗೂ ಶಿಕ್ಷಣದ ಮಹತ್ವದ ಕುರಿತು ಅವರು ಜಾಗೃತಿ ಮೂಡಿಸಿದರು. ಕರ್ನಾಟಕ ಬಾಲವಿಕಾಸ ಅಕಾಡೆಮಿ ಧಾರವಾಡ ಯೋಜನಾಧಿಕಾರಿ ವಿರೂಪಾಕ್ಷಗೌಡ ಪಿ. ಪಾಟೀಲ ಅವರು ಮಾತನಾಡಿ, ಕಥೆಗಳ ಮೂಲಕ ಏಕಾಗ್ರತೆ, ಸಂಸ್ಕಾರಗಳನ್ನು ಬೋಧಿಸಿದರು. ಹಾಗೂ ಪಂಚೇಂದ್ರಿಯಗಳನ್ನು ಒಳ್ಳೆಯದಕ್ಕಾಗಿ ಹೇಗೆ ಬಳಸಿಕೊಳ್ಳಬೇಕು ಎಂದು ತಿಳಿಸಿದರು.

ಜಿಲ್ಲಾ ಮಟ್ಟದ ಬಾಲವಿಕಾಸ ಅಕಾಡಮಿ ಅನುಷ್ಠಾನ ಸಮಿತಿ ನಾಮನಿರ್ದೇಶಿತ ಸದಸ್ಯ ಎ. ಕೆ. ರಾಮೇಶ್ವರ್ ಅವರು ಮಾತನಾಡಿ ಮಕ್ಕಳಿಗಿಂತ ಪ್ರಪಂಚದಲ್ಲಿ ದೊಡ್ಡದು ಯಾವುದು ಇಲ್ಲ, ಭಾರತದ ಭವಿಷ್ಯ ಮಕ್ಕಳ ಕಣ್ಣಿನ ಕಾಂತಿಯಲ್ಲಿದೆ ಎಂದು ಹೇಳಿದರು.

ಜಿಲ್ಲಾ ಮಟ್ಟದ ಬಾಲವಿಕಾಸ ಅಕಾಡಮಿ ಅನುಷ್ಠನ ಸಮಿತಿ ನಾಮನಿರ್ದೇಶಿತ ಸದಸ್ಯ ರಣಧೀರ್ ಹೊಸಮನಿ ಅವರು, ಮಕ್ಕಳ ಮಹತ್ವ ಮತ್ತು ಬಾಂಧವ್ಯದ ಕುರಿತು ಮಾತನಾಡಿದರು. ಕಾರ್ಯಾಗಾರದಲ್ಲಿ ಕಲಬುರಗಿ, ಬೀದರ್, ಬಳ್ಳಾರಿ, ಕೊಪ್ಪಳ, ರಾಯಚೂರು, ವಿಜಯನಗರ ಹಾಗೂ ಯಾದಗಿರಿ ಜಿಲ್ಲೆಗಳ 100 ಮಕ್ಕಳು ಭಾಗವಹಿಸಿದ್ದರು.

## ನೀಟ್ ಪೇಪರ್ ಸೋರಿಕೆಗೆ ಖಂಡನೆ

# ವಿದ್ಯಾರ್ಥಿ ಸಂಘಟನೆಗಳಿಂದ ಪ್ರತಿಭಟನೆ



**ಬೀದರ್, ಜು. 22:** ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣ ಖಂಡಿಸಿ, ಶಿಕ್ಷಣ ಕ್ಷೇತ್ರದಲ್ಲಿ ಸಮಗ್ರ ಸುಧಾರಣೆ ಜಾರಿಗೆ ತರಬೇಕು ಹಾಗೂ ನೀಟ್ ಪರೀಕ್ಷೆ ಅಕ್ರಮಕ್ಕೆ ನೈತಿಕ ಹೊಣೆ ಹೊತ್ತು ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿ ಚಂದ್ರಕಾಂತ ಆರ್.ನಿರಾಟೆ ನೇತೃತ್ವದಲ್ಲಿ ವಿವಿಧ ವಿದ್ಯಾರ್ಥಿ ಸಂಘಟನೆಗಳು ಹಾಗೂ ಸಾಮಾಜಿಕ ಸಂಘಟನೆಗಳು ನಗರದ ಅಂಬೇಡ್ಕರ್ ವೃತ್ತದಲ್ಲಿ ಪ್ರತಿಭಟನೆ ನಡೆಸಿದವು.

ಲಡಾಕ್‌ನ ಪರಿಸರ ಹೋರಾಟಗಾರ ಹಾಗೂ ವಿಜ್ಞಾನಿ ಸೋನಮ್ ವಾಂಗ್ಚೂಕ್ ಅವರು ದೆಹಲಿಯ ಜಂತರ್ ಮಂತರ್‌ನಲ್ಲಿ ಶಿಕ್ಷಣ ಕ್ಷೇತ್ರದ ಸುಧಾರಣೆ ಮತ್ತು ನೀಟ್ ಪೇಪರ್ ಸೋರಿಕೆ ವಿರೋಧಿಸಿ ನಡೆಸುತ್ತಿರುವ ಅಮರಣಾಂತ ಉಪವಾಸ ಸತ್ಯಾಗ್ರಹಕ್ಕೆ ಬೆಂಬಲ ಸೂಚಿಸಿದರು. ಈ ವೇಳೆ ಪ್ರತಿಭಟನಕಾರರು ಮಾತನಾಡಿ, ಪ್ರತಿ ವರ್ಷ ನೀಟ್ ಪರೀಕ್ಷೆಯ ಪ್ರಶ್ನೆ ಪತ್ರಿಕೆ ಸೋರಿಕೆಯಾಗುತ್ತಿರುವುದರಿಂದ ಲಕ್ಷಾಂತರ ವಿದ್ಯಾರ್ಥಿಗಳ ವೈದ್ಯರಾಗುವ ಕನಸು ನುಚ್ಚುನೂರಾಗುತ್ತಿದೆ. ಕೇಂದ್ರ ಸರ್ಕಾರದ ನಿರ್ಲಕ್ಷ್ಯದಿಂದ ಅನೇಕ ವಿದ್ಯಾರ್ಥಿಗಳು ಮಾನಸಿಕವಾಗಿ ಕುಗ್ಗಿದ್ದು, ಕೆಲವರು ಆತ್ಮಹತ್ಯೆಗೂ ಶರಣಾಗಿದ್ದಾರೆ. ಇದಕ್ಕೆ ಕೇಂದ್ರ ಸರ್ಕಾರದ ದುರಾಡಳಿತ ಹಾಗೂ ಶಿಕ್ಷಣ ವ್ಯವಸ್ಥೆಯ ವೈಫಲ್ಯವೇ ಕಾರಣ ಎಂದು ಆರೋಪಿಸಿದರು.

ನೀಟ್ ಪರೀಕ್ಷೆಯಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು, ಶಿಕ್ಷಣ ಕ್ಷೇತ್ರದಲ್ಲಿ ಮೂಲಭೂತ ಸುಧಾರಣೆ ತರಬೇಕು ಹಾಗೂ ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದ ನೈತಿಕ ಹೊಣೆ ಹೊತ್ತು ಪ್ರಧಾನಿ ಮೋದಿ ಮತ್ತು ಧರ್ಮೇಂದ್ರ ಪ್ರಧಾನ್ ರಾಜೀನಾಮೆ ನೀಡಬೇಕು ಅಥವಾ ಅವರನ್ನು ವಜಾಗೊಳಿಸಬೇಕು' ಎಂದು ಒತ್ತಾಯಿಸಿ ತಹಶೀಲ್ದಾರ್ ಮೂಲಕ ರಾಷ್ಟ್ರಪತಿಗೆ ಮನವಿ ಸಲ್ಲಿಸಲಾಯಿತು.

ಪ್ರತಿಭಟನೆಯಲ್ಲಿ ಮುಖಂಡ ರಾಜಕುಮಾರ ಗೂನ್ನಳ್ಳಿ, ಅಂಬೇಡ್ಕರ್ ಯುವ ಸೇನೆ ಜಿಲ್ಲಾಧ್ಯಕ್ಷ ವಿನೋದ ಅಪ್ಪೆ, ನೀತಿಶ್ ಉಪ್ಪೆ, ಜೈ ಭೀಮ್ ಘರ್ಜನೆ ಸಂಟನೆಯ ರಾಜ್ಯಾಧ್ಯಕ್ಷ ರಾಹುಲ್ ಡಾಂಗೆ, ಭೀಮ ಟೈಗರ್ ಸೇನೆ ಜಿಲ್ಲಾಧ್ಯಕ್ಷ ನರಸಿಂಗ್ ಸಾಮ್ರಾಟ್, ಭೀಮ್ ಆರ್ಮಿ ಭಾರತ ಏಕತಾ ಮಿಷನ್ ಜಿಲ್ಲಾ ಉಪಾಧ್ಯಕ್ಷ ಗೌತಮ ಬಗದಲ್‌ಕರ, ಡಿಎಸ್‌ಎಸ್ ನೀಲಿಸೇನೆ ಜಿಲ್ಲಾಧ್ಯಕ್ಷ ಜಗನ್ನಾಥ ಹೊನ್ನಾ, ರಾಷ್ಟ್ರೀಯ ಭೀಮ ಶಕ್ತಿ ಜಿಲ್ಲಾಧ್ಯಕ್ಷ ರಾಜಕುಮಾರ ಭಾವಿಕಟ್ಟಿ, ಗೋಪಾಲ ದೊಡ್ಡಿ ಸೇರಿದಂತೆ ವಿದ್ಯಾರ್ಥಿಗಳು ಹಾಗೂ ವಿವಿಧ ಸಂಘಟನೆಗಳ ಮುಖಂಡರು ಮತ್ತು ಕಾರ್ಯಕರ್ತರು ಭಾಗ ವಹಿಸಿದ್ದರು.


ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಉತ್ತರ ಮೆಸಿಡೋನಿಯಾ ಅಧ್ಯಕ್ಷ ಗೋರ್ಡಾನಾ ಸಿಲ್ಜಾನೋವ್ಸ್ಕಾ-ದವ್ಕೋವಾ ಬುಧವಾರ ಜಂಟಿಯಾಗಿ ಮಹಾದ ಪ್ರತಿಮೆಯನ್ನು ಅನಾವರಣಗೊಳಿಸಿದರು.

# ಜೋರ್ಡಾನ್ ಮೇಲೆ ಇರಾನ್ ಕ್ಷಿಪಣಿ–ಡ್ರೋನ್ ದಾಳಿ ಐಲಾತ್‌ನಲ್ಲಿ ಕಾಣಿಸಿದ ದಟ್ಟಹೊಗೆಯ ಗೊಂಚಲು

**ಟೆಹ್ರಾನ್, ಜು.22:** ಇರಾನ್ ಬುಧವಾರ ಜೋರ್ಡಾನ್ ಮೇಲೆ ಕ್ಷಿಪಣಿಗಳು ಮತ್ತು ಡ್ರೋನ್‌ಗಳನ್ನು ಹಾರಿಸಿದೆ, ಕೆಂಪು ಸಮುದ್ರದ ಅಕಾಬಾ ಬಂದರು ಸೇರಿದಂತೆ ಹಲವು ಪ್ರದೇಶಗಳನ್ನು ಗುರಿಯಾಗಿಸಿಕೊಂಡಿದೆ, ದಾಳಿಯ ಸಮಯದಲ್ಲಿ ನಾಲ್ಕು ಇರಾನಿನ ಬ್ಯಾಲಿಸ್ಟಿಕ್ ಕ್ಷಿಪಣಿಗಳು ಮತ್ತು ನಾಲ್ಕು ಡ್ರೋನ್‌ಗಳನ್ನು ತಡೆಹಿಡಿಯಲಾಗಿದೆ ಎಂದು ಅಮಾನ್ ಹೇಳಿದೆ. ಎರಡು ಹೆಚ್ಚುವರಿ ಕ್ಷಿಪಣಿಗಳು ಜನವಸತಿಯಿಲ್ಲದ ಪ್ರದೇಶಗಳಲ್ಲಿ ಬಿದ್ದವು, ಆದರೂ ಯಾವುದೇ ಸಾವುನೋವುಗಳು ಅಥವಾ ದೊಡ್ಡಹಾನಿ ವರದಿಯಾಗಿಲ್ಲ. ಹೆಚ್ಚುವರಿಯಾಗಿ, ಅಕಾಬಾದಾದ್ಯಂತ ಕ್ಷಿಪಣಿ ಎಚ್ಚರಿಕೆ ಸೈರನ್‌ಗಳು ಪ್ರತಿಧ್ವನಿಸಿದವು, ಆದರೆ ಪ್ರತಿಬಂಧಕಗಳಿಂದ ಸ್ಫೋಟಗಳು ಹತ್ತಿರದ ಇಸ್ರೇಲಿ ಬಂದರು ನಗರವಾದ ಐಲಾತ್‌ನಲ್ಲಿ ಕೇಳಿಬಂದವು, ಜೋರ್ಡಾನ್ ನಗರದ ಮೇಲೆ ಹೊಗೆಯ ಗೊಂಚಲುಗಳು ಏರುತ್ತಿರುವುದನ್ನು ನಗರದಿಂದ ಚಿತ್ರೀಕರಿಸಲಾದ ವೀಡಿಯೊಗಳಿವೆ.

ವಾಷಿಂಗ್ಟನ್ ಟೆಹ್ರಾನ್ ವಿರುದ್ಧ ಸತತ 11 ನೇ ರಾತ್ರಿ ವಾಯುದಾಳಿ ನಡೆಸುತ್ತಿದ್ದಂತೆ ಇತ್ತೀಚಿನ ದಾಳಿ ಸಂಭವಿಸಿದೆ. ಯುಎಸ್ ಮಿಲಿಟರಿ ವಿಮಾನ ಹ್ಯಾಂಗರ್‌ಗಳು ಮತ್ತು ಡ್ರೋನ್ ಸಂಗ್ರಹಣಾ ಸೌಲಭ್ಯಗಳನ್ನು ಗುರಿಯಾಗಿಸಿಕೊಂಡಿದೆ ಎಂದು ಹೇಳಿದರೆ, ಇರಾನ್ನ ಸರ್ಕಾರಿ ಸ್ವಾಮ್ಯದ ಐಆರ್‌ಎನ್‌ಎ ಸುದ್ದಿ ಸಂಸ್ಥೆ ಬುಶೆಹ್ರ್, ಪೂರ್ವ ಅಜೆರ್ಬೈಜಾನ್, ಹಮದಾನ್, ಹಾರ್ಮೋಜ್ಗನ್, ಇಲಾಮ್, ಖುಜೆಸ್ತಾನ್ ಮತ್ತು ಸಿಸ್ತಾನ್ ಮತ್ತು ಬಲೂಚಿಸ್ತಾನ್ ಪ್ರಾಂತ್ಯಗಳಲ್ಲಿ ಸ್ಫೋಟಗಳನ್ನು ವರದಿ ಮಾಡಿದೆ. ಅಮೆರಿಕದ ದಾಳಿಗಳ ನಂತರ, ಇರಾನ್ನ ಅರೆಸೈನಿಕ ವಿಭಾಗವಾದ ಐಆರ್‌ಜಿಸಿ ಪ್ರತೀಕಾರದ ದಾಳಿಗಳು ಮುಂದುವರಿಯುವುದಾಗಿ ಪ್ರತಿಜ್ಞೆ ಮಾಡಿತು ಮತ್ತು ಜೋರ್ಡಾನಿನ ಬಂದರು ನಗರವಾದ ಅಕಾಬಾವನ್ನು ಗುರಿಯಾಗಿಸಿಕೊಂಡು ಕ್ಷಿಪಣಿ ಮತ್ತು ಡ್ರೋನ್ ಗುಂಡಿನ ದಾಳಿಯೊಂದಿಗೆ ಪ್ರತಿಕ್ರಿಯಿಸಿತು, ಮತ್ತೊಮ್ಮೆ ಇಸ್ರೇಲ್‌ನ ಬಾಗಿಲಿನ ಮೇಲೆ ದಾಳಿ ಮಾಡಿತು. ವೈಮಾನಿಕ ಇಂಧನ ತುಂಬುವ ಕಾರ್ಯಾಚರಣೆಗಳನ್ನು ಬೆಂಬಲಿಸಲು ಮತ್ತು ಯುದ್ಧ ವಿಮಾನಗಳನ್ನು ನಿಯೋಜಿಸಲು ಅಮೆರಿಕ ಇಸ್ರೇಲ್‌ನ ಬೆನ್ ಗುರಿಯನ್ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಮತ್ತು ಇತರ ಮಿಲಿಟರಿ ಸೌಲಭ್ಯಗಳನ್ನು ಬಳಸುತ್ತಿದೆ, ಆದರೂ ಇಸ್ರೇಲ್ ಯುದ್ಧಕ್ಕೆ ಮತ್ತೆ ಸೇರಲು ಪ್ರೇರೇಪಿಸುತ್ತದೆ ಎಂಬ ಕಳವಳದಿಂದಾಗಿ ಇರಾನ್ ಇಲ್ಲಿಯವರೆಗೆ ಆ ಸ್ಥಳಗಳ ಮೇಲೆ ನೇರವಾಗಿ ದಾಳಿ ಮಾಡುವುದನ್ನು ತಪ್ಪಿಸಿದೆ.



ಇತ್ತೀಚಿನ ಉಲ್ಬಣವು ಪ್ರಾರಂಭವಾದಾಗಿನಿಂದ ಜೋರ್ಡಾನ್ ಹಲವಾರು ಇರಾನಿನ ಕ್ಷಿಪಣಿಗಳು ಮತ್ತು ಡ್ರೋನ್‌ಗಳನ್ನು ತಡೆಹಿಡಿದಿದೆ. ಅಕಾಬಾವನ್ನು ಗುರಿಯಾಗಿಸಿಕೊಂಡು ಇರಾನಿನ ಕ್ಷಿಪಣಿಗಳ ಅವಶೇಷಗಳು ಐಲಾತ್‌ಗೆ ಸಂಭಾವ್ಯ ಬೆದರಿಕೆಯನ್ನುಂಟುಮಾಡುತ್ತವೆ ಎಂದು ನಿರ್ಣಯಿಸಿದ ನಂತರ ಭಾನುವಾರ ಇಸ್ರೇಲ್ ತನ್ನ ವಾಯು ರಕ್ಷಣಾ ವ್ಯವಸ್ಥೆಗಳನ್ನು ಸಕ್ರಿಯಗೊಳಿಸಿತು.

# ಇರಾನಿನ ನಿರಂತರ ದಾಳಿಗಳ ನಡುವೆ ಹಾರ್ಮುಜ್ ಜಲಸಂಧಿಯಲ್ಲಿ ಹಡಗು ಸಾಗಣೆ ಕುಂಠಿತ




**ಮನಾಮ, ಜು.22:** ಇರಾನಿನ ನಿರಂತರ ದಾಳಿಗಳು ಅನೇಕ ಅಂತರರಾಷ್ಟ್ರೀಯ ಹಡಗು ನಿರ್ವಾಹಕರನ್ನು ಕಾರ್ಯತಂತ್ರದ ಜಲಮಾರ್ಗವನ್ನು ತಪ್ಪಿಸಲು ಪ್ರೇರೇಪಿಸಿದ್ದರಿಂದ ಮಂಗಳವಾರ ಹಾರ್ಮುಜ್ ಜಲಸಂಧಿಯ ಮೂಲಕ ವಾಣಿಜ್ಯ ಸಾಗಣೆ ಮೂರು ವಾರಗಳಲ್ಲಿ ಅತ್ಯಂತ ಕಡಿಮೆ ಮಟ್ಟಕ್ಕೆ ಇಳಿದಿದೆ. ಬಹುರಾಷ್ಟ್ರೀಯ ಕಡಲ ಭದ್ರತಾ ಪಾಲುದಾರಿಕೆಯಾದ ಬಹ್ರೇನ್‌ನಲ್ಲಿರುವ ಜಂಟಿ ಕಡಲ ಮಾಹಿತಿ ಕೇಂದ್ರ (ಜೆಎಂಐಸಿ) ಪ್ರಕಾರ, ವಾಷಿಂಗ್ಟನ್‌ನಿಂದ ಈ ಮಾರ್ಗವು ಮುಕ್ತವಾಗಿದೆ ಎಂದು ಪದೇ ಪದೇ ಭರವಸೆ ನೀಡಿದ್ದರೂ ಜಲಸಂಧಿಯನ್ನು ಸಾಗಿಸುವ ಹಡಗುಗಳ ಸಂಖ್ಯೆ ತೀವ್ರವಾಗಿ ಕಡಿಮೆಯಾಗಿದೆ. ಸಿಬಿಎಸ್ ನ್ಯೂಸ್ ಮಂಗಳವಾರ ಜಲಸಂಧಿಯನ್ನು ಸಾಗಿಸುವ ಕೇವಲ ಮೂರು ವಾಣಿಜ್ಯ ಹಡಗುಗಳನ್ನು ಪತ್ತೆಹಚ್ಚಿದೆ, ಇದರಲ್ಲಿ ಎರಡು ಸರಕು ಹಡಗುಗಳು ಮತ್ತು ಚೀನಾದ ಒಡೆತನದ ತೈಲ ಟ್ಯಾಂಕರ್ ಫ್ಲಿನ್ ಓಷನ್ ಸೇರಿವೆ. ಹಡಗು ಚಟುವಟಿಕೆಯು ಒಮಾನ್‌ನ ಕರಾವಳಿಯ ಹತ್ತಿರ ಸಾಗುವ ಯುಎಸ್ ಬೆಂಬಲಿತ ದಕ್ಷಿಣ ಸಾರಿಗೆ ಕಾರಿಡಾರ್‌ನಿಂದ ದೂರ ಸರಿದಿದೆ.

ಜುಲೈ 13 ಮತ್ತು 19 ರ ನಡುವೆ ಕೇವಲ ಎರಡು ಹಡಗುಗಳು ದಕ್ಷಿಣ ಮಾರ್ಗವನ್ನು ಬಳಸಿವೆ ಎಂದು ಲಾಯ್ಡ್ಸ್ ಲಿಸ್ಟ್ ವಿಶ್ಲೇಷಣೆಯು ಕಂಡುಹಿಡಿದಿದೆ. ಸಾಗಣೆಯ ಸಮಯದಲ್ಲಿ ಎರಡೂ ಹಡಗುಗಳು ತಮ್ಮ ಸ್ವಯಂಚಾಲಿತ ಗುರುತಿನ ವ್ಯವಸ್ಥೆ (ಎಐಎಸ್) ಟ್ರಾನ್ಸ್ಪಾಂಡರ್‌ಗಳನ್ನು ಆಫ್ ಮಾಡಿ "ಕತ್ತಲೆಯಲ್ಲಿ" ಸಾಗಿದವು. ಯುಎಸ್–ಇರಾನ್ ತಿಳುವಳಿಕೆ ಒಪ್ಪಂದದ ಕುಸಿತದ ನಂತರ ಅಂತರರಾಷ್ಟ್ರೀಯ ಹಡಗು ಕಂಪನಿಗಳಲ್ಲಿ ಹೆಚ್ಚುತ್ತಿರುವ ಕಳವಳಗಳನ್ನು ಕುಸಿತವು ಪ್ರತಿಬಿಂಬಿಸುತ್ತದೆ ಎಂದು ಸಮುದ್ರ ಭದ್ರತಾ ತಜ್ಞರು ಹೇಳುತ್ತಾರೆ. "ಜಲಸಂಧಿಯನ್ನು ಸಾಗಿಸಲು ಇಚ್ಛಿಸುವ ಯಾವುದೇ ಹಡಗಿನ ಸಂಚಾರಕ್ಕೆ ಭೌತಿಕವಾಗಿ ಏನೂ ಅಡ್ಡಿಯಾಗುವುದಿಲ್ಲ, ಮತ್ತು ಸ್ಥಳೀಯವಾಗಿ ವ್ಯಾಪಾರ ಮಾಡುವ ಮತ್ತು ನಡೆಯುತ್ತಿರುವ ಎಲ್ಲದರಿಂದ ಸಂಪೂರ್ಣವಾಗಿ ಪರಿಣಾಮ ಬೀರದ ಹಡಗುಗಳಿವೆ" ಎಂದು ಗ್ರೀಕ್ ಕಡಲ ಅಪಾಯ ನಿರ್ವಹಣಾ ಸಂಸ್ಥೆ ಮಾರಿಸ್ಕ್‌ನ ಮುಖ್ಯ ಕಾರ್ಯನಿರ್ವಾಹಕ ಡಿಮಿಟ್ರಿಸ್ ಮ್ಯಾನಿಯಾಟಿಸ್ ಸಿಬಿಎಸ್ ನ್ಯೂಸ್ಗೆ ತಿಳಿಸಿದರು.

"ಆದಾಗ್ಯೂ, ನಾವು ದೊಡ್ಡ ಸಾಗರ–ಪ್ರವಾಸ, ಅಂತರರಾಷ್ಟ್ರೀಯ ಸ್ವಾಮ್ಯದ ಮತ್ತು ನಿರ್ವಹಿಸುವ ವ್ಯಾಪಾರಿ ಹಡಗುಗಳ ಬಗ್ಗೆ ಮಾತನಾಡುತ್ತಿದ್ದರೆ, ಏನೂ ನಡೆಯುತ್ತಿಲ್ಲ."

ವಾಣಿಜ್ಯ ಸಂಚಾರದಲ್ಲಿ ತೀವ್ರ ಕುಸಿತದ ಹೊರತಾಗಿಯೂ, ಇರಾನಿನ ಆಕ್ರಮಣಶೀಲತೆಯನ್ನು ಮುಂದುವರಿಸಿದೆ ಎಂದು ವಿವರಿಸಿದ್ದರೂ ಸಹ, ಹಾರ್ಮುಜ್ ಜಲಸಂಧಿಯು "ವಾಣಿಜ್ಯ ಹಡಗು ಸಂಚಾರಕ್ಕೆ ಮುಕ್ತವಾಗಿದೆ" ಎಂದು CENTCOM ಮಂಗಳವಾರ ಘೋಷಿಸಿತು. ಕಳೆದ ಎರಡು ವಾರಗಳಲ್ಲಿ ಇರಾನ್ ವಾಣಿಜ್ಯ ಹಡಗುಗಳ ವಿರುದ್ಧ 30ಕ್ಕೂ ಹೆಚ್ಚು ದಾಳಿಗಳನ್ನು ನಡೆಸಿದೆ ಎಂದು CENTCOM ಒಪ್ಪಿಕೊಂಡಿದೆ, ಈ ಘಟನೆಗಳು "ನೂರಾರು ಮುಗ್ಧ ನಾವಿಕರನ್ನು ಅಪಾಯಕ್ಕೆ ಸಿಲುಕಿಸಿದೆ ಮತ್ತು ಸಂಚರಣೆಯ ಸ್ವಾತಂತ್ರ್ಯವನ್ನು ದುರ್ಬಲಗೊಳಿಸಿವೆ" ಎಂದು ಹೇಳಿದೆ.

# ಫ್ರಾನ್ಸ್‌ನಲ್ಲಿ ತೀವ್ರ ಬಿಸಿಗಾಳಿ-ಶಾಖ ಜೂನ್‌ನಲ್ಲಿ 5,764ಕ್ಕೂ ಅಧಿಕ ಸಾವು



**ಪ್ಯಾರಿಸ್, ಜು.22:** ಜೂನ್ 17 ಮತ್ತು ಜುಲೈ2 ರ ನಡುವೆ ದೇಶಾದ್ಯಂತ ಬೀಸಿದ ಅಸಾಧಾರಣ ಶಾಖದ ಅಲೆಯ ಸಮಯದಲ್ಲಿ ಫ್ರಾನ್ಸ್ 5,764 ಹೆಚ್ಚುವರಿ ಸಾವುಗಳನ್ನು ದಾಖಲಿಸಿದೆ, ಇದು 2003 ರ ವಿನಾಶಕಾರಿ ಶಾಖದ ಅಲೆಯ ನಂತರದ ಅತ್ಯಧಿಕ ಹೆಚ್ಚುವರಿ ಮರಣವಾಗಿದೆ ಎಂದು ಸಾರ್ವಜನಿಕ ಆರೋಗ್ಯ ಫ್ರಾನ್ಸ್ ಬುಧವಾರ ತಿಳಿಸಿದೆ. ಎಲ್ಲಾ ಕಾರಣಗಳಿಂದ ಉಂಟಾಗುವ ಮರಣದ ಹೆಚ್ಚಳವನ್ನು ಶಾಖಕ್ಕೆ ಕಾರಣವೆಂದು ಹೇಳಲು ಇನ್ನೂ ಸಾಧ್ಯವಿಲ್ಲ ಎಂದು ಸಾರ್ವಜನಿಕ ಆರೋಗ್ಯ ಸಂಸ್ಥೆ ಎಚ್ಚರಿಸಿದೆ ಮತ್ತು ಮುಂಬರುವ ತಿಂಗಳುಗಳಲ್ಲಿ ಮತ್ತಷ್ಟು ಕ್ರೋಢೀಕರಣಗೊಳ್ಳುವವರೆಗೆ ಈ ಅಂಕಿಅಂಶಗಳು ತಾತ್ಕಾಲಿಕವಾಗಿ ಉಳಿದಿವೆ ಎಂದು ಹೇಳಿದೆ.

15 ಮತ್ತು ಅದಕ್ಕಿಂತ ಹೆಚ್ಚಿನ ವಯಸ್ಸಿನ ಎಲ್ಲಾ ವಯೋಮಾನದವರಲ್ಲಿ ಹೆಚ್ಚುವರಿ ಮರಣ ಪ್ರಮಾಣ ದಾಖಲಾಗಿದೆ, 45 ಮತ್ತು ಅದಕ್ಕಿಂತ ಹೆಚ್ಚಿನ ವಯಸ್ಸಿನವರಲ್ಲಿ ವಿಶೇಷವಾಗಿ ತೀವ್ರ ಏರಿಕೆ ಕಂಡುಬಂದಿದೆ. ವಯಸ್ಸಿನ ಮಾದರಿಯನ್ನು "ಅಭೂತಪೂರ್ವ" ಎಂದು ಸಂಸ್ಥೆ ವಿವರಿಸಿದೆ. ಪರಿಷ್ಕೃತ ಅಂದಾಜಿನಲ್ಲಿ ಹಿಂದಿನ ಮೌಲ್ಯಮಾಪನಗಳಲ್ಲಿ ಸೆರೆಹಿಡಿಯದ ಮರಣ ಪ್ರಮಾಣಪತ್ರಗಳು ಸೇರಿವೆ, ವಿಶೇಷವಾಗಿ ಮನೆಯಲ್ಲಿ ಸತ್ತ ಜನರನ್ನು ಒಳಗೊಂಡ ಪ್ರಕರಣಗಳು. ಜುಲೈ 3 ರಂದು ಬಿಡುಗಡೆಯಾದ ಆರಂಭಿಕ ಅಂದಾಜಿಗಿಂತ ಇತ್ತೀಚಿನ ಅಂಕಿಅಂಶಗಳು ಗಮನಾರ್ಹವಾಗಿ ಹೆಚ್ಚಿವೆ, ಆರೋಗ್ಯ ಸಚಿವೆ ಸ್ಟೆಫನಿ ರಿಸ್ಟ್ ಜೂನ್ 22 ಮತ್ತು ಜೂನ್ 28 ರ ನಡುವೆ ಕನಿಷ್ಠ 2,025 ಹೆಚ್ಚುವರಿ ಸಾವುಗಳನ್ನು ವರದಿ ಮಾಡಿದ್ದರು. ಅಧಿಕಾರಿಗಳು ಇನ್ನೂ ಸಾವಿನ ವರದಿಗಳಿಗಾಗಿ ಕಾಯುತ್ತಿರುವುದರಿಂದ ಮತ್ತು ಎಲೆಕ್ಟ್ರಾನಿಕ್ ಮರಣ ಪ್ರಮಾಣಪತ್ರಗಳನ್ನು ಮಾತ್ರ ಅವಲಂಬಿಸಿರುವುದರಿಂದ ಈ ಸಂಖ್ಯೆ ಅಪೂರ್ಣವಾಗಿದೆ ಎಂದು ಅವರು ಆ ಸಮಯದಲ್ಲಿ ಹೇಳಿದ್ದರು.

# ಅಮೆರಿಕ – ಇರಾನ್ ನಡುವಿನ ಸಂಘರ್ಷ ತೀವ್ರ: ಕಚ್ಚಾತೈಲ ಬೆಲೆ 95 ಡಾಲರ್‌ಗೆ ಏರಿಕೆ

**ಟೆಹ್ರಾನ್, ಜು.22:** ಬುಧವಾರ ತೈಲ ಬೆಲೆಗಳು 4% ಕ್ಕೆ ಏರಿಕೆಯಾಗಿವೆ, ಅಂತರರಾಷ್ಟ್ರೀಯ ಮಾನದಂಡ ಬ್ರೆಂಟ್ ಕಚ್ಚಾ ತೈಲವು ಬ್ಯಾರಲ್‌ಗೆ 95 ಡಾಲರ್‌ಗಿಂತ ಸ್ವಲ್ಪ ಹೆಚ್ಚಾಯಿತು, ಜು.7 ರಂದು ಅಮೆರಿಕ ಮತ್ತು ಇರಾನ್ ನಡುವಿನ ಹೋರಾಟ ಪುನರಾರಂಭವಾದಾಗಿನಿಂದ ಸುಮಾರು 20 ಡಾಲರ್ ಗಳಿಕೆಯನ್ನು ವಿಸ್ತರಿಸಿತು. ಕಾರ್ಯತಂತ್ರದ ಜಲಮಾರ್ಗವು ಮುಕ್ತವಾಗಿದೆ ಎಂದು CENTCOM ನಿಂದ ಪದೇ ಪದೇ ಭರವಸೆ ನೀಡಿದ್ದರೂ ಸಹ ಹಾರ್ಮುಜ್ ಜಲಸಂಧಿಯ ಮೂಲಕ ವಾಣಿಜ್ಯ ಸಾಗಣೆ ತೀವ್ರವಾಗಿ ಅಡ್ಡಿಪಡಿಸಲ್ಪಟ್ಟಿದ್ದರಿಂದ ಈ ಹೆಚ್ಚಳ ಸಂಭವಿಸಿದೆ. ಇರಾನ್ ಜಲಸಂಧಿಯನ್ನು ಸಾಗಿಸುವ ಹಡಗುಗಳ ಮೇಲೆ ದಾಳಿಗಳನ್ನು ಮುಂದುವರೆಸಿದೆ, ಆದರೆ ಗಲ್ಫ್ ಮತ್ತು ಪಶ್ಚಿಮ ಏಷ್ಯಾದ ಇತರೆಡೆಗಳಲ್ಲಿ ಯುಎಸ್ ಮಿತ್ರರಾಷ್ಟ್ರಗಳನ್ನು ಗುರಿಯಾಗಿಸಿಕೊಂಡಿದೆ, ಇದು ಜಾಗತಿಕ ಇಂಧನ ಪೂರೈಕೆಗಳ ಬಗ್ಗೆ ಕಳವಳಗಳನ್ನು ಹೆಚ್ಚಿಸಿದೆ. ಟೆಹ್ರಾನ್ ವಿರುದ್ಧದ ತನ್ನ ಮಿಲಿಟರಿ ಕಾರ್ಯಾಚರಣೆಯೊಂದಿಗೆ ವಾಷಿಂಗ್ಟನ್ ಇನ್ನೂ "ಮುಗಿದಿಲ್ಲ" ಎಂದು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮಂಗಳವಾರ ಹೇಳಿದ್ದಾರೆ.



ಸತತ 11ನೇ ರಾತ್ರಿ ಅಮೆರಿಕ ದಾಳಿಗಳು ಇರಾನಿನ ಮಿಲಿಟರಿ ಲಾಜಿಸ್ಟಿಕ್ಸ್ ಮೂಲಸೌಕರ್ಯವನ್ನು ಗುರಿಯಾಗಿರಿಸಿಕೊಂಡಿವೆ ಎಂದು ಪೆಂಟಗನ್ ಹೇಳಿದೆ, ಆದರೆ ಇರಾನಿನ ರಾಜ್ಯ ಮಾಧ್ಯಮವು ದೇಶದ ಹಲವಾರು ಭಾಗಗಳಲ್ಲಿ ದಾಳಿಗಳನ್ನು ವರದಿ ಮಾಡಿದೆ. ಬಾಬ್ ಎಲ್–ಮಂಡೇಬ್ ಜಲಸಂಧಿಯ ಮೂಲಕ ಸೌದಿ ಅರೇಬಿಯಾದ ಕೆಂಪು ಸಮುದ್ರದ ಬಂದರುಗಳಿಗೆ ಪ್ರವೇಶವನ್ನು ನಿರ್ಬಂಧಿಸುವ ಬೆದರಿಕೆಗಳನ್ನು ಹಾಕುವುದರ ವಿರುದ್ಧ ಟ್ರಂಪ್ ಯೆಮೆನ್‌ನ ಇರಾನ್ ಬೆಂಬಲಿತ ಹೌತಿ ಉಗ್ರಗಾಮಿಗಳಿಗೆ ಎಚ್ಚರಿಕೆ ನೀಡಿದರು. ಸೌದಿ–ಸಂಬಂಧಿತ ಹಡಗುಗಳು ಈ ಕಾರ್ಯತಂತ್ರದ ಜಲಮಾರ್ಗವನ್ನು ಬಳಸುವುದನ್ನು ತಡೆಯಲು ಹೌತಿಗಳು ಪ್ರತಿಜ್ಞೆ ಮಾಡಿದ್ದಾರೆ, ಇದು ಜಾಗತಿಕ ವ್ಯಾಪಾರ ಮತ್ತು ಇಂಧನ ಮಾರುಕಟ್ಟೆಗಳಿಗೆ ಮತ್ತಷ್ಟು ಅಡ್ಡಿಯಾಗುವ ಭಯಕ್ಕೆ ಕಾರಣವಾಗಿದೆ. "ಸುದ್ದಿ ಹರಿವನ್ನು ಅವಲಂಬಿಸಿ ನಾವು ಈ 80 ರಿಂದ 90 ಡಾಲರ್ ವ್ಯಾಪ್ತಿಯಲ್ಲಿರುತ್ತೇವೆ ಎಂಬುದು ನಮ್ಮ ಅಭಿಪ್ರಾಯ ಎಂದು ಇನ್ಫ್ರಾಸ್ಟ್ರಕ್ಚರ್ ಕ್ಯಾಪಿಟಲ್ ಮ್ಯಾನೇಜ್ ಮೆಂಟ್‌ನ ಜೇ ಹ್ಯಾಟ್‌ಫೀಲ್ಡ್ ಬ್ಲೂಮ್‌ಬರ್ಗ್‌ಗೆ ತಿಳಿಸಿದರು. ನಾವು ನಿಜವಾಗಿಯೂ ಮುಚ್ಚಿದ ಕೆಂಪು ಸಮುದ್ರವನ್ನು ಹೊಂದಿದ್ದರೆ, ಅದು ಬೆದರಿಕೆ. ನಾವು ಅದನ್ನು ಇನ್ನೂ ನೋಡಿಲ್ಲ. ಅದು ನಮಗೆ 100ಡಾಲರ್‌ಗಿಂತ ಹೆಚ್ಚು ಹೊಡೆತವನ್ನು ನೀಡಬಹುದು. ಬಾಬ್ ಎಲ್–ಮಂಡೇಬ್ ಜಲಸಂಧಿಯು ಕೆಂಪು ಸಮುದ್ರದ ದಕ್ಷಿಣ ಪ್ರವೇಶದ್ವಾರವನ್ನು ರೂಪಿಸುತ್ತದೆ ಮತ್ತು ಇದು ವಿಶ್ವದ ಪ್ರಮುಖ ಕಡಲ ಚಾಕ್‌ಪಾಯಿಂಟ್‌ಗಳಲ್ಲಿ ಒಂದಾಗಿದೆ. ಇದು ಕೆಂಪು ಸಮುದ್ರ ಮತ್ತು ಅಡೆನ್ ಕೊಲ್ಲಿಯ ನಡುವಿನ ಪ್ರಮುಖ ಮಾರ್ಗವನ್ನು ಒದಗಿಸುತ್ತದೆ, ಸೂಯೆಜ್ ಕಾಲುವೆ ಮತ್ತು ಮೆಡಿಟರೇನಿಯನ್ ಮೂಲಕ ಪರ್ಯಾಯ ಮಾರ್ಗವು ಏಷ್ಯನ್ ಮಾರುಕಟ್ಟೆಗಳಿಗೆ ಉದ್ದೇಶಿಸಲಾದ ಸಾಗಣೆಗಳಿಗೆ ಗಮನಾರ್ಹವಾಗಿ ಉದ್ದವಾಗಿದೆ ಮತ್ತು ಹೆಚ್ಚು ದುಬಾರಿಯಾಗಿದೆ.

# ಇರಾನ್ ಮೇಲೆ ದಾಳಿ ಮುಂದುವರಿಸಲು ತುರ್ತು ಹೆಚ್ಚುವರಿ ಅನುದಾನಕ್ಕೆ ಮನವಿ ಮಾಡಿದ ಟ್ರಂಪ್

## 37.5 ಶತಕೋಟಿ ಡಾಲರ್ ವೆಚ್ಚದ ಲೆಕ್ಕ ನೀಡಿದ ರಕ್ಷಣಾ ಸಚಿವ ಪೀಟ್ ಹೆಗ್ಸತ್


**ವಾಷಿಂಗ್ಟನ್, ಜು.22:** ಇರಾನ್ ವಿರುದ್ಧದ ನಿರಂತರ ಸೇನಾ ಕಾರ್ಯಾಚರಣೆ ಅಮೆರಿಕದ ಖಜಾನೆಗೆ ದೊಡ್ಡ ಹೊಡೆತ ನೀಡುತ್ತಿದೆ. ಯುದ್ಧ ದೀರ್ಘಗೊಳ್ಳುತ್ತಿರುವ ಬೆನ್ನಲ್ಲೇ ಹೆಚ್ಚುವರಿ ಹಣಕಾಸಿನ ಅಗತ್ಯ ಎದುರಾಗಿದ್ದು, ಟ್ರಂಪ್ ಆಡಳಿತ ತುರ್ತು ಅನುದಾನಕ್ಕೆ ಒತ್ತಾಯಿಸಿದೆ. ಈ ನಡುವೆ ಯುದ್ಧದ ವೆಚ್ಚದ ಕುರಿತು ಪೆಂಟಗನ್ ಮೊದಲ ಬಾರಿಗೆ ವಿವರಗಳನ್ನು ಹಂಚಿಕೊಂಡಿದೆ.

ಇರಾನ್ ವಿರುದ್ಧದ ಯುದ್ಧಕ್ಕಾಗಿ ಅಮೆರಿಕ ಇದೂವರೆಗೆ 37.5 ಶತಕೋಟಿ ಅಮೆರಿಕನ್ ಡಾಲರ್ (ಸುಮಾರು 3.2 ಲಕ್ಷ ರೂ. ಕೋಟಿ) ವೆಚ್ಚ ಮಾಡಿದೆ ಎಂದು ಅಮೆರಿಕದ ರಕ್ಷಣಾ ಸಚಿವ ಪೀಟ್ ಹೆಗ್ಸೆತ್ ಮಂಗಳವಾರ ಬಹಿರಂಗಪಡಿಸಿದ್ದಾರೆ.

ಯುದ್ಧ ಮತ್ತೆ ತೀವ್ರಗೊಂಡ ನಂತರ ಮೊದಲ ಬಾರಿಗೆ ಅವರು ಅಮೆರಿಕ ಕಾಂಗ್ರೆಸ್‌ನ ಶಾಸಕರ ಮುಂದೆ ಹಾಜರಾಗಿ, ಸಂಘರ್ಷ ಮುಂದುವರಿಸಲು ತುರ್ತು ಹೆಚ್ಚುವರಿ ಅನುದಾನಕ್ಕೆ ಮನವಿ ಮಾಡಿದರು.

ನವೆಂಬರ್‌ನಲ್ಲಿ ನಡೆಯಲಿರುವ ಅಮೆರಿಕದ ಮಧ್ಯಂತರ ಚುನಾವಣೆಗಳಿಗೆ ಕೇವಲ ಆರು ತಿಂಗಳು ಬಾಕಿ ಇರುವ ಸಂದರ್ಭದಲ್ಲಿ, ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನೇತೃತ್ವದ ರಿಪಬ್ಲಿಕನ್ ಪಕ್ಷವು ಪ್ರತಿನಿಧಿಗಳ ಸಭೆ ಮತ್ತು ಸೆನೆಟ್‌ನಲ್ಲಿ ತನ್ನ ಬಹುಮತ ಉಳಿಸಿಕೊಳ್ಳುವ ಸವಾಲು ಎದುರಿಸುತ್ತಿದೆ.

ಇದೇ ವೇಳೆ, ದುಬಾರಿ ಜೀವನ ವೆಚ್ಚ ಮತ್ತು ಇರಾನ್ ಯುದ್ಧದ ಖರ್ಚನ್ನು ಪ್ರಮುಖ ಚುನಾವಣಾ ವಿಷಯವನ್ನಾಗಿ ಮಾಡಿಕೊಂಡಿರುವ ಡೆಮಾಕ್ರಾಟ್‌ಗಳು ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸುತ್ತಿದ್ದಾರೆ.



ಕಾಂಗ್ರೆಸ್‌ನಲ್ಲಿ ನಡೆದ ವಿಚಾರಣೆಯ ವೇಳೆ ಮಾತನಾಡಿದ ಹೆಗ್ಸೆತ್, 37.5 ಬಿಲಿಯನ್ ಡಾಲರ್ ವೆಚ್ಚದಲ್ಲಿ ಈಗಾಗಲೇ ನಡೆದ ಯುದ್ಧ ಕಾರ್ಯಾಚರಣೆಗಳ ಜೊತೆಗೆ ಸೆಪ್ಟೆಂಬರ್ 30ರವರೆಗಿನ ನಿರೀಕ್ಷಿತ ವೆಚ್ಚವೂ ಸೇರಿದೆ ಎಂದು ಹೇಳಿದರು. ಆದರೆ, ಈ ಲೆಕ್ಕಾಚಾರವನ್ನು ಪೆಂಟಗನ್ ಯಾವ ಆಧಾರದ ಮೇಲೆ ಮಾಡಿದೆ ಎಂಬುದನ್ನು ಅವರು ವಿವರಿಸಲಿಲ್ಲ.

ಈ ವರ್ಷದ ಮಾರ್ಚ್‌ನಲ್ಲಿ ಟ್ರಂಪ್ ಆಡಳಿತದ ಮೂಲಗಳು, ಯುದ್ಧ ಆರಂಭವಾದ ಮೊದಲ ಆರು ದಿನಗಳಲ್ಲೇ ಕನಿಷ್ಠ 11.3 ಬಿಲಿಯನ್ ಡಾಲರ್ ವೆಚ್ಚವಾಗಿದೆ ಎಂದು ಅಂದಾಜಿಸಿದ್ದವು. ಕಳೆದ ತಿಂಗಳು ಅಧ್ಯಕ್ಷ ಟ್ರಂಪ್, ಕಾಂಗ್ರೆಸ್‌ಗೆ ಸುಮಾರು 90 ಶತಕೋಟಿ ಡಾಲರ್ ಹೆಚ್ಚುವರಿ ಅನುದಾನ ಕೇಳಿದ್ದರು. ಇದರಲ್ಲಿ ಬಹುಪಾಲು ಹಣವನ್ನು ಇರಾನ್ ವಿರುದ್ಧದ ಯುದ್ಧಕ್ಕಾಗಿ ಮೀಸಲಿಡಲು ಉದ್ದೇಶಿಸಲಾಗಿದೆ. ಆದರೆ, ಯುದ್ಧದ ವಿರುದ್ಧ ಜನಾಭಿಪ್ರಾಯ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಈ ಪ್ರಸ್ತಾವನೆ ಕಾಂಗ್ರೆಸ್‌ನಲ್ಲಿ ತೀವ್ರ ಚರ್ಚೆಗೆ ಕಾರಣವಾಗಿದೆ.

ಫೆಬ್ರವರಿ 28ರಂದು ಅಮೆರಿಕ ಮತ್ತು ಇಸ್ರೇಲ್ ಇರಾನ್ ಮೇಲೆ ದಾಳಿ ಆರಂಭಿಸಿದ ಬಳಿಕದಿಂದ ಟ್ರಂಪ್ ಆಡಳಿತ ಯುದ್ಧದ ಯೋಜನೆಗಳು ಮತ್ತು ಮುಂದಿನ ಕ್ರಮಗಳ ಕುರಿತು ಕಾಂಗ್ರೆಸ್‌ಗೆ ಸಮರ್ಪಕ ಮಾಹಿತಿ ನೀಡಿಲ್ಲ ಎಂದು ರಿಪಬ್ಲಿಕನ್ ಮತ್ತು ಡೆಮಾಕ್ರಾಟ್ ಪಕ್ಷಗಳ ಹಲವು ಶಾಸಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಸೆನೆಟ್‌ನ ಅನುದಾನ ಸಮಿತಿಯ ಹಿರಿಯ ಡೆಮಾಕ್ರಾಟ್ ಸದಸ್ಯೆ ಪ್ಯಾಟಿ ಮರೆ, "ಅಧ್ಯಕ್ಷ ಟ್ರಂಪ್ ಯುದ್ಧವನ್ನು ಮತ್ತಷ್ಟು ವಿಸ್ತರಿಸುವ ಮತ್ತು ನಾಗರಿಕ ಮೂಲಸೌಕರ್ಯಗಳ ಮೇಲೆ ದಾಳಿ ನಡೆಸುವ ಬೆದರಿಕೆ ಹಾಕುತ್ತಿದ್ದಾರೆ. ಇದು ಮತ್ತೊಂದು ಅಂತ್ಯವಿಲ್ಲದ ಯುದ್ಧವಾಗಿ ಪರಿಣಮಿಸುವ ಆತಂಕವಿದೆ" ಎಂದು ಟೀಕಿಸಿದರು.

ಇದೇ ವೇಳೆ ಡೆಮಾಕ್ರಾಟ್ ಸೆನೆಟರ್ ಕಿರ್ಸ್ಟನ್ ಗಿಲ್ಲಿಬ್ರ್ಯಾಂಡ್, ಸರ್ಕಾರದ ಹೇಳಿಕೆಗಳಲ್ಲಿ ಸ್ಪಷ್ಟತೆ ಇಲ್ಲ. ಯುದ್ಧ ಮುಗಿದಿದೆಯೇ ಅಥವಾ ಮುಂದುವರಿದಿದೆಯೇ? ಎರಡು ವಾರಗಳಲ್ಲಿ ಅಂತ್ಯವಾಗುತ್ತದೆಯೇ ಅಥವಾ ಇಲ್ಲವೇ? ಕ್ಷಿಪಣಿಗಳು ನಿಲ್ಲುತ್ತವೆಯೇ ಅಥವಾ ಮುಂದುವರಿಯುತ್ತವೆಯೇ? ಜನರ ಗೊಂದಲಕ್ಕೆ ಇದೇ ಕಾರಣ" ಎಂದು ಸರ್ಕಾರವನ್ನು ಪ್ರಶ್ನಿಸಿದರು.


ಈ ನಡುವೆ ಹೆಚ್ಚುವರಿ ಅನುದಾನ ಸಿಗದಿದ್ದರೆ ಸೇನಾ ತರಬೇತಿ ಕಾರ್ಯಕ್ರಮಗಳನ್ನು ಕಡಿತಗೊಳಿಸಬೇಕಾಗುತ್ತದೆ ಎಂದು ಹೆಗ್ಸೆತ್ ಎಚ್ಚರಿಸಿದ್ದಾರೆ.

ಸುಮಾರು 1 ಟ್ರಿಲಿಯನ್ ಡಾಲರ್ ವಾರ್ಷಿಕ ಬಜೆಟ್ ಹೊಂದಿರುವ ಪೆಂಟಗನ್ ಮೇಲೂ ಯುದ್ಧದ ಭಾರ ಹೆಚ್ಚಾಗಿದ್ದು, ಸೇನಾ ನಿರ್ವಹಣೆ, ಶಸ್ತ್ರಾಸ್ತ್ರಗಳ ನಿರ್ವಹಣೆ ಮತ್ತು ಭವಿಷ್ಯದ ರಕ್ಷಣಾ ಯೋಜನೆಗಳ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇದೆ ಎಂದು ಹೇಳಿದ್ದಾರೆ.

ಇರಾನ್ ಯುದ್ಧಕ್ಕೆ ಬೇಕಾದ ಹೆಚ್ಚುವರಿ ಅನುದಾನದ ಜೊತೆಗೆ 2027ನೇ ಹಣಕಾಸು ವರ್ಷಕ್ಕೆ 1.5 ಟ್ರಿಲಿಯನ್ ಡಾಲರ್ ರಕ್ಷಣಾ ಬಜೆಟ್ ಅನ್ನು ಅನುಮೋದಿಸುವಂತೆ ಕಾಂಗ್ರೆಸ್‌ಗೆ ಮನವಿ ಮಾಡಿದರು.

"ರಕ್ಷಣಾ ಇಲಾಖೆಗೆ 1.5 ಟ್ರಿಲಿಯನ್ ಡಾಲರ್ ಅನುದಾನ ನೀಡದಿರುವುದೇ ದೇಶದ ಭದ್ರತೆಗೆ ಅತಿದೊಡ್ಡ ಅಪಾಯ" ಎಂದು ತಿಳಿಸಿದರು. ಜಂಟಿ ಸೇನಾ ಮುಖ್ಯಸ್ಥರ ಸಮಿತಿಯ ಅಧ್ಯಕ್ಷ ಜನರಲ್ ಡ್ಯಾನ್ ಕೇನ್ ಕೂಡ ಇದನ್ನು ಒಪ್ಪಿಕೊಂಡು, ಯೋಧರಿಗೆ ವೇತನ ನೀಡಲು ಸಾಧ್ಯವಾದರೂ, ಸೇನಾ ಉಪಕರಣಗಳ ನಿರ್ವಹಣೆ ಮತ್ತು ಹೊಸ ಸಾಮರ್ಥ್ಯಗಳ ಅಭಿವೃದ್ಧಿಗೆ ಹಣಕಾಸಿನ ಒತ್ತಡ ಉಂಟಾಗಬಹುದು ಎಂದು ಹೇಳಿದರು.

# ಚೀನಾ ಓಪನ್ ಟೆನಿಸ್: ಸಿಂಧು ಮುನ್ನಡೆ, ಆಯುಷ್ ವಿಶ್ವ ನಂ. 11 ಆಟಗಾರ್ತಿಯನ್ನು ಸೋಲಿಸಿ ಪ್ರಿ–ಕ್ವಾರ್ಟರ್‌ಗೆ ಪ್ರವೇಶ




**ನವದೆಹಲಿ, ಜುಲೈ 22:** ಶನಿವಾರ ಜಪಾನ್ ಓಪನ್ ಗೆಲ್ಲುವ ಮೂಲಕ ತನ್ನ ಪ್ರಶಸ್ತಿ ಬರ ಕೊನೆಗೊಳಿಸಿದ್ದ ಪಿವಿ ಸಿಂಧು, ಚೀನಾ ಓಪನ್‌ನಲ್ಲಿ ಮೊದಲ ಸುತ್ತಿನ ಗೆಲುವಿನೊಂದಿಗೆ ತನ್ನ ಅದ್ಭುತ ಫಾರ್ಮ್ ಅನ್ನು ಮುಂದುವರಿಸಿದ್ದಾರೆ. ಆದರೆ ಆಯುಷ್ ಶೆಟ್ಟಿ ಬುಧವಾರ ಚಾಂಗ್ಝೌನಲ್ಲಿ ನಡೆದ ಪಂದ್ಯದಲ್ಲಿ ಇಂಡೋನೇಷ್ಯಾದ ವಿಶ್ವದ ನಂ. 11 ಆಟಗಾರ್ತಿ ಅಲ್ವಿ ಫರ್ಹಾನ್ ಅವರನ್ನು ಸೋಲಿಸಿ ಪುರುಷರ ಸಿಂಗಲ್ಸ್ ಪ್ರಿ–ಕ್ವಾರ್ಟರ್ ಫೈನಲ್ ತಲುಪುವ ಮೂಲಕ ದಿನದ ಅತಿದೊಡ್ಡ ಅಪ್ಸೆಟ್‌ಗಳಲ್ಲಿ ಒಂದನ್ನು ಸಾಧಿಸಿದ್ದಾರೆ. ಎರಡು ಬಾರಿಯ ಒಲಿಂಪಿಕ್ ಪದಕ ವಿಜೇತೆ, 56 ನಿಮಿಷಗಳ ಸ್ಪರ್ಧೆಯಲ್ಲಿ ಭಾರತೀಯ ಆಟಗಾರ್ತಿ ಉನ್ನತಿ ಹೂಡಾ ಅವರನ್ನು 21–14, 9–21, 21–10 ಸೆಟ್‌ಗಳಿಂದ ಸೋಲಿಸಿದ್ದಾರೆ. ಕಳೆದ ವರ್ಷ ಚೀನಾ ಓಪನ್‌ನಿಂದ ಹೂಡಾ ಅವರನ್ನು ಹೊರದಬ್ಬಿದ್ದ ನಂತರ ಈ ಗೆಲುವು ಸಿಂಧುಗೆ ಸೇಡು ತೀರಿಸಿಕೊಳ್ಳುವ ಪ್ರತೀಕಾರವನ್ನು ನೀಡಿತು. ಹೈದರಾಬಾದ್ನ ಶಟ್ಲರ್ ಎರಡನೇ ಗೇಮ್ನಲ್ಲಿ ಸೋತರೂ, ಎರಡನೇ ಸುತ್ತಿನಲ್ಲಿ ತನ್ನ ಸ್ಥಾನವನ್ನು ಭದ್ರಪಡಿಸಿಕೊಳ್ಳಲು ನಿರ್ಣಾಯಕ ಪಂದ್ಯದಲ್ಲಿ ಬಲವಾಗಿ ಚೇತರಿಸಿಕೊಂಡರು. ಸಿಂಧು ಮುಂದಿನ ಸುತ್ತಿನಲ್ಲಿ ನಾಲ್ಕನೇ ಶ್ರೇಯಾಂಕಿತ ಮತ್ತು ಮಾಜಿ ಒಲಿಂಪಿಕ್ ಚಾಂಪಿಯನ್ ಚೀನಾದ ಚೆನ್ ಯುಫೆ ವಿರುದ್ಧ ಕಠಿಣ ಸವಾಲನ್ನು ಎದುರಿಸಲಿದ್ದಾರೆ. ಜಪಾನ್ ಓಪನ್ನಲ್ಲಿ ಪ್ರಶಸ್ತಿ ಗೆದ್ದ ಚೆನ್ ಅವರನ್ನು ಸೋಲಿಸಿದ ನಂತರ ಭಾರತೀಯ ಆಟಗಾರ್ತಿ ಆತ್ಮವಿಶ್ವಾಸದಿಂದ ಪಂದ್ಯಕ್ಕೆ ಕಾಲಿಡಲಿದ್ದಾರೆ. ಆಯುಷ್ ಶೆಟ್ಟಿ ಕೂಡ ಸ್ಮರಣೀಯ ದಿನವನ್ನು ಆನಂದಿಸಿದರು, ಮಾಜಿ ವಿಶ್ವ ಜೂನಿಯರ್ ಚಾಂಪಿಯನ್ ಅಲ್ವಿ ಫರ್ಹಾನ್ ಅವರನ್ನು 21–17, 5–21, 21–17 ಅಂತರದಿಂದ ಸೋಲಿಸಿ ಕೊನೆಯ 16ರ ಘಟ್ಟಕ್ಕೆ ತಮ್ಮ ಸ್ಥಾನವನ್ನು ಕಾಯ್ದಿರಿಸಿಕೊಂಡಿದ್ದರು. 2023 ರ ವಿಶ್ವ ಜೂನಿಯರ್ ಚಾಂಪಿಯನ್‌ಶಿಪ್‌ನ ಸೆಮಿಫೈನಲ್‌ನಲ್ಲಿ ಫರ್ಹಾನ್ ವಿರುದ್ಧ ಸೋತಿದ್ದ ಶೆಟ್ಟಿಗೆ ಈ ಗೆಲುವು ವಿಶೇಷವಾಗಿ ತೃಪ್ತಿಕರವಾಗಿತ್ತು. ಆರಂಭಿಕ ಪಂದ್ಯವನ್ನು ಗೆದ್ದ ನಂತರ, ಫರ್ಹಾನ್ ಬಲವಾಗಿ ಹೋರಾಡಿದಾಗ ಎರಡನೇ ಪಂದ್ಯದಲ್ಲಿ ಭಾರತೀಯ ಆಟಗಾರ ಹೋರಾಟ ನಡೆಸಿದರು. ಆದಾಗ್ಯೂ, ಶೆಟ್ಟಿ ನಿರ್ಣಾಯಕ ಪಂದ್ಯದಲ್ಲಿ ಮತ್ತೆ ಹಿಡಿತ ಸಾಧಿಸಿದರು ಮತ್ತು ತಮ್ಮ ಹಿರಿಯ ವೃತ್ತಿಜೀವನದ ಅತಿದೊಡ್ಡ ಗೆಲುವುಗಳಲ್ಲಿ ಒಂದನ್ನು ದಾಖಲಿಸಲು ತಮ್ಮ ಧೈರ್ಯವನ್ನು ಉಳಿಸಿಕೊಂಡರು. ಆದಾಗ್ಯೂ, ಭಾರತದ ಡಬಲ್ಸ್ ಅಭಿಯಾನವು ನಿರಾಶೆಯಲ್ಲಿ ಕೊನೆಗೊಂಡಿತು. ಮಿಶ್ರ ಡಬಲ್ಸ್‌ನಲ್ಲಿ, ರೋಹನ್ ಕಪೂರ್ ಮತ್ತು ರುತ್ವಿಕಾ ಶಿವಾನಿ ಗಡ್ಡೆ ಅಗ್ರ ಶ್ರೇಯಾಂಕಿತ ಯಾನ್ ಝೆ ಫೆಂಗ್ ಮತ್ತು ಡಾಂಗ್ ಪಿಂಗ್ ಹುವಾಂಗ್ ವಿರುದ್ಧ ನೇರ ಪಂದ್ಯದಲ್ಲಿ ಸೋತರು. ಧ್ರುವ್ ಕಪಿಲಾ ಮತ್ತು ತನಿಶಾ ಕ್ರಾಸ್ಟೊ ಕೂಡ ಚೀನಾದ ಕ್ಸಿನ್ ವಾ ಗುವೊ ಮತ್ತು ಫಾಂಗ್ ಹುಯಿ ಚೆನ್ ವಿರುದ್ಧ ಸೋತ ನಂತರ ಹೊರನಡೆದರು. ಪುರುಷರ ಡಬಲ್ಸ್‌ನಲ್ಲಿ ಎಂ.ಆರ್. ಅರ್ಜುನ್ ಮತ್ತು ಹರಿಹರನ್ ಅಂಶಕರುಣನ್ ಅವರನ್ನು ನಾಲ್ಕನೇ ಶ್ರೇಯಾಂಕದ ವೀ ಕೆಂಗ್ ಲಿಯಾಂಗ್ ಮತ್ತು ಚಾಂಗ್ ವಾಂಗ್ ಸೋಲಿಸುವ ಮೂಲಕ ಭಾರತದ ಸವಾಲು ಅಂತ್ಯಗೊಂಡಿತು. ಬುಧವಾರದ ನಂತರ, ಲಕ್ಷ್ಯ ಸೇನ್ ಜಪಾನ್‌ನ ಯುಶಿ ತನಕಾ ವಿರುದ್ಧ ಪುರುಷರ ಸಿಂಗಲ್ಸ್ ಅಭಿಯಾನವನ್ನು ಪ್ರಾರಂಭಿಸಬೇಕಿತ್ತು.

# ಅಮೆರಿಕದಲ್ಲಿ ರಸ್ತೆ ಅಪಘಾತ: ಹೈದರಾಬಾದ್ ಮೂಲದ ಮೂವರ ದಾರುಣ ಸಾವು

**ವಾಷಿಂಗ್ಟನ್:** ಭೀಕರ ರಸ್ತೆ ಅಪಘಾತದಲ್ಲಿ ಹೈದರಾಬಾದ್ ಮೂಲದ ಒಂದೇ ಕುಟುಂಬದ ಮೂವರು ಮೃತಪಟ್ಟಿದ್ದು, ಇನ್ನಿಬ್ಬರು ಗಂಭೀರವಾಗಿ ಗಾಯಗೊಂಡಿರುವ ಘಟನೆ ಅಮೆರಿಕದ ಕ್ಯಾಲಿಫೋರ್ನಿಯಾದಲ್ಲಿ ನಡೆದಿದೆ.

ಹೈದರಾಬಾದ್‌ನ ಸೈದಾಬಾದ್ ನಿವಾಸಿಯಾಗಿರುವ ಶೇಖ್ ನವೀದ್ ತಮ್ಮ ಪತ್ನಿ ಮತ್ತು ಮಕ್ಕಳೊಂದಿಗೆ ಕಾರಿನಲ್ಲಿ ಪ್ರಯಾಣಿಸುತ್ತಿದ್ದ ವೇಳೆ ಮತ್ತೊಂದು ವಾಹನಕ್ಕೆ ಡಿಕ್ಕಿ ಹೊಡೆದು ಅಪಘಾತ ಸಂಭವಿಸಿದೆ. ಅಪಘಾತದಲ್ಲಿ ನವೀದ್ ಪತ್ನಿ ನಾಜಿಯಾ ಸಲ್ಮಾ, ಅವರ ಪುತ್ರ ಹಾಗೂ ಪುತ್ರಿ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ನವೀದ್ ಮತ್ತು ಅವರ ಕಿರಿಯ ಪುತ್ರಿ ಗಂಭೀರವಾಗಿ ಗಾಯಗೊಂಡಿದ್ದು, ಅವರನ್ನು ಸಮೀಪದ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.



ಶೇಖ್ ನವೀದ್ ಸುಮಾರು 10 ವರ್ಷಗಳ ಹಿಂದೆ ಉದ್ಯೋಗ ನಿಮಿತ್ತ ಅಮೆರಿಕಕ್ಕೆ ತೆರಳಿದ್ದರು. ಅಲ್ಲಿಯೇ ಕುಟುಂಬದೊಂದಿಗೆ ನೆಲೆಸಿದ್ದ ಅವರು ಕುಟುಂಬ ಸಮೇತರಾಗಿ ಪ್ರಯಾಣಿಸುತ್ತಿದ್ದ ವೇಳೆ ಈ ದುರಂತ ಸಂಭವಿಸಿದೆ. ನವೀದ್ ಅವರ ತಂದೆ ಶೇಖ್ ಅಬ್ದುಲ್ ಸಯೀದ್ ಅವರು ಮಗನಿಗೆ ಕರೆ ಮಾಡಿದ ವೇಳೆ ಅಮೆರಿಕದ ಪೊಲೀಸರಿಂದ ಅಪಘಾತದ ಬಗ್ಗೆ ಮಾಹಿತಿ ತಿಳಿದುಬಂದಿದೆ ಎಂದು ಹೇಳಿದ್ದಾರೆ.